VOLUME: 16 | 17 JUNE 2026 | ಬುಧವಾರ | RS: 2 | PAGE: 06 ISSUE: 127 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಏಳು ವರ್ಷಗಳ ಕಾಲ ಪ್ರೀತಿಸಿ, ಕಳೆದ ಫೆಬ್ರವರಿಯಲ್ಲಿ ಮದುವೆಯಾದವರು ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ.ನೀವು ಮಾಡಿರುವ ಅತ್ಯಂತ ಸಂತೋಷದ ಕೆಲಸ ಯಾವುದು? ಎಂದು ಪ್ರಶ್ನಿಸಿದ್ದರು. ಇದಕ್ಕೆ ಉತ್ತರಿಸಿದ ರಶ್ಮಿಕಾ, ನಾನು ಮಾಡಿರುವ ಅತ್ಯಂತ ಸಂತೋಷದ ಕೆಲಸ ಎಂದರೆ ನನ್ನ ಆತ್ಮೀಯ ಸ್ನೇಹಿತನೊಂದಿಗೆ ಮದುವೆಯಾಗಿರುವುದು ಎಂದು ಹೇಳಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಶಾಸಕಾಂಗ ಸಭೆಯಲ್ಲಿ ಶಾಸಕರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿರುವ ಸಿಎಂ ಡಿ.ಕೆ. ಶಿವಕುಮಾರ್, ನಿಮ್ಮಲ್ಲಿ ಅನೇಕರಿಗೆ ಜೆಡಿಎಸ್ ನಾಯಕರ ಕಡೆಯಿಂದ ಆಮಿಷದ ಕರೆಗಳು ಬಂದಿರಬಹುದು. ಆದರೆ ಯಾವುದೇ ಕಾರಣಕ್ಕೂ ಅವರ ಆಮಿಷಗಳಿಗೆ ಬಲಿಯಾಗಬೇಡಿ. ಪಕ್ಷದಲ್ಲಿ ಪ್ರತಿಯೊಬ್ಬರ ಚಲನವಲನದ ಮೇಲೂ ನಾವು ಹದ್ದಿನ ಕಣ್ಣಿಟ್ಟಿದ್ದೇವೆ" ಎಂದು ಖಡಕ್ ಆಗಿ ಹೇಳಿದ್ದಾರೆ ಎನ್ನಲಾಗಿದೆ. ಮುಂಬರುವ ಚುನಾವಣಾ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಶಾಸಕರ ಮತವೂ ಅತ್ಯಂತ ಅಮೂಲ್ಯವಾಗಿದ್ದು, ಸಣ್ಣ ತಪ್ಪುಗಳಿಗೂ ಆಸ್ಪದ ನೀಡಬಾರದು.

# ಕಾಂಗ್ರೆಸ್ ಶಾಸಕರಿಗೆ ಆಫರ್...?

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಆಪರೇಷನ್ ಹಸ್ತ ಹಾಗೂ ಆಮಿಷದ ರಾಜಕಾರಣದ ಸದ್ದು ಮತ್ತೆ ಜೋರಾಗಿದೆ. ಬಿಡದಿಯ ರೆಸಾರ್ಟ್‌ನಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಮಹತ್ವದ ಸಭೆಯಲ್ಲಿ, ಪಕ್ಷದ ಕೆಲವು ಶಾಸಕರಿಗೆ ಅನ್ಯ ಪಕ್ಷಗಳಿಂದ ಆಮಿಷದ ಕರೆಗಳು ಬರುತ್ತಿರುವ ಸ್ಫೋಟಕ ವಿಷಯವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಹಿರಂಗಪಡಿಸಿದ್ದಾರೆ.

ಪ್ರಮುಖವಾಗಿ ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ. ಗೋಪಾಲಕೃಷ್ಣ ಅವರಿಗೂ ಇಂತಹದ್ದೇ ಕರೆ ಬಂದಿರುವ ಅಂಶವನ್ನು ಸಿಎಂ ಸಭೆಯ ಗಮನಕ್ಕೆ ತಂದಿದ್ದಾರೆ ಎಂದು ಉನ್ನತ ಮೂಲಗಳು ಮಾಹಿತಿ ನೀಡಿವೆ.

ಶಾಸಕಾಂಗ ಸಭೆಯಲ್ಲಿ ಶಾಸಕರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿರುವ ಸಿಎಂ ಡಿ.ಕೆ. ಶಿವಕುಮಾರ್, ನಿಮ್ಮಲ್ಲಿ ಅನೇಕರಿಗೆ ಜೆಡಿಎಸ್ ನಾಯಕರ ಕಡೆಯಿಂದ ಆಮಿಷದ ಕರೆಗಳು ಬಂದಿರಬಹುದು. ಆದರೆ ಯಾವುದೇ ಕಾರಣಕ್ಕೂ ಅವರ ಆಮಿಷಗಳಿಗೆ ಬಲಿಯಾಗಬೇಡಿ. ಪಕ್ಷದಲ್ಲಿ ಪ್ರತಿಯೊಬ್ಬರ ಚಲನವಲನದ ಮೇಲೂ ನಾವು ಹದ್ದಿನ ಕಣ್ಣಿಟ್ಟಿದ್ದೇವೆ" ಎಂದು ಖಡಕ್ ಆಗಿ ಹೇಳಿದ್ದಾರೆ ಎನ್ನಲಾಗಿದೆ. ಮುಂಬರುವ ಚುನಾವಣಾ ಪ್ರಕ್ರಿಯೆಯಲ್ಲಿ



ಪ್ರತಿಯೊಬ್ಬ ಶಾಸಕರ ಮತವೂ ಅತ್ಯಂತ ಅಮೂಲ್ಯವಾಗಿದ್ದು, ಸಣ್ಣ ತಪ್ಪುಗಳಿಗೂ ಆಸ್ಪದ ನೀಡಬಾರದು.

ಪಕ್ಷ ಯಾರಿಗೆ ಮತ ಚಲಾಯಿಸಲು ಸೂಚಿಸುತ್ತದೆಯೋ, ಅವರಿಗೇ ಮತ ನೀಡಬೇಕು ಎಂದು ಸಿಎಂ ತಾಕೀತು ಮಾಡಿದ್ದಾರೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ವಿಚಾರವನ್ನು ಶಾಸಕರು ಹಗುರವಾಗಿ ಪರಿಗಣಿಸಬಾರದು ಎಂದು ಡಿಕೆಶಿ ಎಚ್ಚರಿಸಿದ್ದಾರೆ.

"ಎಸ್‌ಐಆರ್ ನಮಗೆ ಸವಾಲು ಹಾಗೂ ಅವಕಾಶ ಎರಡನ್ನೂ ನೀಡಿದೆ. ಈ ವಿಚಾರದಲ್ಲಿ ಶಾಸಕರು ಹೆಚ್ಚು ಜಾಗೃತರಾಗಿರಬೇಕು. ಬೇರೆಲ್ಲಾ ಕೆಲಸಗಳಿಗಿಂತ ಇದಕ್ಕೆ ಹೆಚ್ಚಿನ ಆದ್ಯತೆ ನೀಡಿ. ಒಂದು ವೇಳೆ ಮೈಮರೆತರೆ ಮುಂದೆ ನಾವೆಲ್ಲರೂ ಮನೆಯಲ್ಲಿ ರೆಸ್ಟ್ ಮಾಡಬೇಕಾಗಬಹುದು ಎಂದು ಶಾಸಕರಿಗೆ ಗಂಭೀರ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ.

ಸಭೆಯಲ್ಲಿ ಶಾಸಕರಲ್ಲಿ ಧೈರ್ಯ ತುಂಬಿದ ಮುಖ್ಯಮಂತ್ರಿಗಳು, ನಾನು ಮತ್ತು ಸಿದ್ದರಾಮಯ್ಯ ಅವರು ಸಂಪೂರ್ಣ ಒಗ್ಗಟ್ಟಿನಿಂದ ಇದ್ದೇವೆ. ವಿರೋಧ ಪಕ್ಷಗಳು ಎಷ್ಟೇ ಪ್ರಚೋದನೆ ನೀಡಿದರೂ ನಮ್ಮ ಒಗ್ಗಟ್ಟನ್ನು ಒಡೆಯಲು ಸಾಧ್ಯವಾಗಲಿಲ್ಲ. ನಮ್ಮ ನಡುವಿನ ಈ ಅಧಿಕಾರ ಹಸ್ತಾಂತರ ಇಡೀ ದೇಶಕ್ಕೆ ಮಾದರಿಯಾಗಿದೆ. ಇದೇ ಮಾದರಿಯಲ್ಲಿ ಶಾಸಕರೆಲ್ಲರೂ ಒಗ್ಗಟ್ಟು ಕಾಯ್ದುಕೊಳ್ಳಬೇಕು" ಎಂದು ಕರೆ ನೀಡಿದ್ದಾರೆ.

# ಮೋದಿ ಜೊತೆ ಜಿ7 ನಾಯಕರ ಸಭೆ




**ವಾಷಿಂಗ್ಟನ್ ಭಾರತದ ಮೇಲೆ ದಂಡನಾತ್ಮಕ ಸುಂಕಗಳನ್ನು ವಿಧಿಸಿದ ನಂತರ ಮತ್ತು ಕಳೆದ ಮೇನಲ್ಲಿ ಭಾರತ-ಪಾಕಿಸ್ತಾನ ಮಿಲಿಟರಿ ಘರ್ಷಣೆಯನ್ನು ಕಡಿಮೆ ಮಾಡುವಲ್ಲಿ ಅವರ ಪಾತ್ರದ ಬಗ್ಗೆ ಅಧ್ಯಕ್ಷ ಟ್ರಂಪ್ ವಿವಾದಾತ್ಮಕ ಹೇಳಿಕೆಗಳನ್ನು ನೀಡಿದ ನಂತರ ಸಂಬಂಧಗಳು ಹದಗೆಟ್ಟಿದೆ.**

ನವದೆಹಲಿ: ಮಂಗಳವಾರ ನಡೆದ ಜಿ7 ನಾಯಕರ ಸಭೆಯಲ್ಲಿ ಪ್ರಧಾನಿ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಂಕ್ಷಿಪ್ತ ಸಂಭಾಷಣೆ ನಡೆಸಿದರು.

16 ತಿಂಗಳಲ್ಲಿ ಮೊದಲ ಬಾರಿಗೆ ಮುಖಾಮುಖಿಯಾಗಿ ಭೇಟಿಯಾದ ಭಾರತ-ಅಮೆರಿಕ ಇಬ್ಬರೂ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಈ ವರ್ಷದ ಪ್ರಬಲ ಗುಂಪಿನ ಜಿ7 ಶೃಂಗಸಭೆಯ ಸ್ಥಳವಾದ ಎವಿಯನ್-ಲೆಸ್-ಬೈನ್ಸ್‌ನಲ್ಲಿ, ಮೋದಿ ಮತ್ತು ಟ್ರಂಪ್ ಬೆಚ್ಚಗಿನ ಹಸ್ತಲಾಘವವನ್ನು ಹಂಚಿಕೊಂಡರು, ನಂತರ ಒಂದು ಸಣ್ಣ ಸಂಭಾಷಣೆ ನಡೆಯಿತು.

ಸಭೆಯ ಹೊರತಾಗಿ ಬುಧವಾರ ಪೂರ್ಣ ದ್ವಿಪಕ್ಷೀಯ ಸಭೆ ನಡೆಯಲಿದೆ. ಅವರ ಸಂಕ್ಷಿಪ್ತ ವಿನಿಮಯದ ವಿವರಗಳು ತಿಳಿದಿಲ್ಲವಾದರೂ, ಈ ಸಭೆಯು ಅವರ ಉನ್ನತ ಮಟ್ಟದ ಮಾತುಕತೆಗಳಿಗೆ ವೇದಿಕೆಯನ್ನು ಸಿದ್ಧಪಡಿಸುತ್ತದೆ.

ಕಳೆದ ತಿಂಗಳು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಭಾರತಕ್ಕೆ ಭೇಟಿ ನೀಡಿದ ನಂತರ, ಎರಡೂ ಕಡೆಯವರು ಈಗ ದ್ವಿಪಕ್ಷೀಯ ಸಂಬಂಧಗಳನ್ನು ಪುನರ್ನಿರ್ಮಿಸುವ ಬಗ್ಗೆ ಗಮನಹರಿಸುತ್ತಿದೆ.

ವಾಷಿಂಗ್ಟನ್ ಭಾರತದ ಮೇಲೆ ದಂಡನಾತ್ಮಕ ಸುಂಕಗಳನ್ನು ವಿಧಿಸಿದ ನಂತರ ಮತ್ತು ಕಳೆದ ಮೇನಲ್ಲಿ ಭಾರತ-ಪಾಕಿಸ್ತಾನ ಮಿಲಿಟರಿ ಘರ್ಷಣೆಯನ್ನು ಕಡಿಮೆ ಮಾಡುವಲ್ಲಿ ಅವರ ಪಾತ್ರದ ಬಗ್ಗೆ ಅಧ್ಯಕ್ಷ ಟ್ರಂಪ್ ವಿವಾದಾತ್ಮಕ ಹೇಳಿಕೆಗಳನ್ನು ನೀಡಿದ ನಂತರ ಸಂಬಂಧಗಳು ಹದಗೆಟ್ಟಿದೆ.

ಅಮೆರಿಕ ಅಧ್ಯಕ್ಷರು ಪದೇ ಪದೇ ಮತ್ತು ಸಾರ್ವಜನಿಕವಾಗಿ ಎರಡು ನೆರೆಹೊರೆಯವರ ನಡುವಿನ ಮಿಲಿಟರಿ ಸಂಘರ್ಷವನ್ನು ಪರಿಹರಿಸಿದ್ದೇನೆ ಮತ್ತು ಅದು ಪೂರ್ಣ ಪ್ರಮಾಣದ ಯುದ್ಧದತ್ತ ಸಾಗುತ್ತಿರುವಾಗ ಲಕ್ಷಾಂತರ ಜೀವಗಳನ್ನು ಉಳಿಸಿದ್ದೇನೆ ಎಂದು ಹೇಳಿಕೊಂಡಿದ್ದರು. ಭಾರತ ಮತ್ತು ಪಾಕಿಸ್ತಾನ ನಡುವಿನ ಮಾತುಕತೆಗಳ ಪರಿಣಾಮವಾಗಿ ಯುದ್ಧದ ನಿಲುಗಡೆಯಾಗಿದೆ ಮತ್ತು ಅಮೆರಿಕದ ಭಾಗವಹಿಸುವಿಕೆಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಭಾರತ ದೃಢವಾಗಿ ಸಮರ್ಥಿಸಿಕೊಂಡಿತು. ವಾಷಿಂಗ್ಟನ್‌ನ ಹೊಸ ವಲಸೆ ನೀತಿ ಮತ್ತು ವೀಸಾ ಶುಲ್ಕವನ್ನು ಹೆಚ್ಚಿಸುವ ನಿರ್ಧಾರವೂ ಸಹ ಭಾರತ-ಅಮೆರಿಕ ಸಂಬಂಧಗಳಲ್ಲಿನ ಕುಸಿತಕ್ಕೆ ಕಾರಣವಾಗಿತ್ತು.

# ನವದೆಹಲಿಯಲ್ಲಿ 7 ಉಗ್ರರ ಬಂಧನ

ನವದೆಹಲಿ: ದೇಶದ ಭದ್ರತಾ ಸಂಸ್ಥೆಗಳ ನಿರಂತರ ನಿಗಾ ಮತ್ತು ಸಮಯೋಚಿತ ಕಾರ್ಯಾಚರಣೆಯಿಂದಾಗಿ ದೆಹಲಿಯಲ್ಲಿ ಸಂಭವಿಸಬೇಕಿದ್ದ ಭಾರಿ ದುರಂತವೊಂದು ತಪ್ಪಿದೆ. ಪಾಕಿಸ್ತಾನದ ನೆರವಿನಿಂದ ಭಾರತದಲ್ಲಿ ವಿಧ್ವಂಸಕ ಕೃತ್ಯ ಎಸಗಲು ಸಂಚು ರೂಪಿಸಿದ್ದ ಅಂತಾರಾಷ್ಟ್ರೀಯ ಉಗ್ರ ಜಾಲದ 7 ಜನ ಸಕ್ರಿಯ ಸದಸ್ಯರನ್ನು ದೆಹಲಿ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತ ಆರೋಪಿಗಳು ಹಬ್ಬಗಳ ಸಂದರ್ಭದಲ್ಲಿ ದೆಹಲಿ ಮತ್ತು ದೇಶದ ಇತರ ಪ್ರಮುಖ ನಗರಗಳಲ್ಲಿ ಜನನಿಬಿಡ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲು ಸಂಚು ರೂಪಿಸಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ದೆಹಲಿಯ ವಿವಿಧ ಪ್ರದೇಶಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದ ವಿಶೇಷ ಪೊಲೀಸ್ ಪಡೆಗಳು, ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.

ಬಂಧಿತ ಉಗ್ರರ ಅಡಗುದಾಣಗಳಿಂದ ಆಘಾತಕಾರಿ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ಭಾರಿ ಪ್ರಮಾಣದ ಜೀವಂತ ಗುಂಡುಗಳು, ವಿವಿಧ ರೀತಿಯ ಸ್ಫೋಟಕ ಸಾಮಗ್ರಿಗಳು ಮತ್ತು ಸುಧಾರಿತ ತಂತ್ರಜ್ಞಾನದ ಸಂವಹನ ಸಾಧನಗಳನ್ನು ವಶಕ್ಕೆ ಪಡೆಯಲಾಗಿದೆ. ಈ ಆಯುಧಗಳನ್ನು ಗಡಿ ಭಾಗದ ಮೂಲಕ ಸಾಗಿಸಿ, ದೆಹಲಿಯಲ್ಲಿ ವಿಧ್ವಂಸಕ ಕೃತ್ಯ ಎಸಗಲೆಂದೇ ತಲುಪಿಸಲಾಗಿತ್ತು ಎಂದು ಪೊಲೀಸರು ಖಚಿತಪಡಿಸಿದ್ದಾರೆ.

ಪೊಲೀಸ್ ತನಿಖೆಯ ಪ್ರಕಾರ, ಬಂಧಿತ ಆರೋಪಿಗಳು ಪಾಕಿಸ್ತಾನ ಮೂಲದ ಉಗ್ರ ಸಂಘಟನೆಗಳು ಹಾಗೂ ಅಲ್ಲಿನ ಗುಪ್ತಚರ ಸಂಸ್ಥೆಯಾದ ಐಎಸ್‌ಐ ಹ್ಯಾಂಡ್ಲರ್‌ಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದರು.

ಇವರಿಗೆ ಎನ್‌ಕ್ರಿಪ್ಟೆಡ್ ಸೋಶಿಯಲ್ ಮೀಡಿಯಾ ಆಪ್‌ಗಳ (ಉದಾಹರಣೆಗೆ ಟೆಲಿಗ್ರಾಂ, ಸಿಗ್ನಲ್) ಮೂಲಕ ಪಾಕಿಸ್ತಾನದಿಂದಲೇ ಬಾಂಬ್ ತಯಾರಿಕೆ ಮತ್ತು ವಿಧ್ವಂಸಕ ಕೃತ್ಯಗಳ ತರಬೇತಿ ನೀಡಲಾಗಿತ್ತು.

ಈ ಜಾಲವನ್ನು ಸಕ್ರಿಯವಾಗಿಡಲು ಹವಾಲಾ ಚಾನೆಲ್‌ಗಳ ಮೂಲಕ ಮತ್ತು ಕ್ರಿಪ್ಟೋಕರೆನ್ಸಿ ಬಳಸಿ ಪಾಕಿಸ್ತಾನದಿಂದ ಭಾರಿ ಪ್ರಮಾಣದ ಹಣ ಹರಿದುಬಂದಿರುವುದನ್ನು ಬ್ಯಾಂಕ್ ಖಾತೆಗಳ ಪರಿಶೀಲನೆಯಿಂದ ಪತ್ತೆಹಚ್ಚಲಾಗಿದೆ.

## ಪ್ರಿಯಾಂಕ್ ಖರ್ಗೆಗೆ ವಿಎಚ್‌ಪಿ ತಿರುಗೇಟು

ನವದೆಹಲಿ: ರಾಷ್ಟ್ರೀಯ ಸ್ವಯಂಸೇವಕ ಸಂಘ ಕುರಿತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಪತ್ರಕ್ಕೆ ವಿಶ್ವ ಹಿಂದೂ ಪರಿಷತ್ ತೀವ್ರವಾಗಿ ಪ್ರತಿಕ್ರಿಯಿಸಿದೆ. ಎಲ್ಲಾ ಸಂಸ್ಥೆಗಳಿಗೆ ನೋಂದಣಿಯನ್ನು ಯಾವ ಕಾನೂನು ಕಡ್ಡಾಯಗೊಳಿಸುತ್ತದೆ ಎಂಬುದನ್ನು ಖರ್ಗೆ ಮೊದಲು ವಿವರಿಸಬೇಕು ಎಂದು ವಿಎಚ್‌ಪಿ ಅಂತರರಾಷ್ಟ್ರೀಯ ಅಧ್ಯಕ್ಷ ಅಲೋಕ್ ಕುಮಾರ್ ಹೇಳಿದ್ದಾರೆ.

ವಿನಾಃಕಾರಣ ಅದನ್ನು ಗುರಿಯಾಗಿಸಿಕೊಂಡು ಆರ್‌ಎಸ್‌ಎಸ್‌ನ ವರ್ಚಸ್ಸಿಗೆ ಕಳಂಕ ತರುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಆರೋಪಿಸಿದರು.

ಆರ್‌ಎಸ್‌ಎಸ್ ಆದಾಯ ಮತ್ತು ಆದಾಯ ತೆರಿಗೆ ಇಲಾಖೆಗೆ ವರದಿ ಮಾಡುವ ವಿಷಯದ ಕುರಿತು, ಸಂಘವು ವರ್ಷಕ್ಕೊಮ್ಮೆ ಗುರು ದಕ್ಷಿಣೆಯನ್ನು ಆಯೋಜಿಸುತ್ತದೆ. ಸಂಸ್ಥೆಯು ತನ್ನ ಕೆಲಸಕ್ಕಾಗಿ ಹೊರಗಿನ ಮೂಲಗಳಿಂದ ಹಣವನ್ನು ಸ್ವೀಕರಿಸುವುದಿಲ್ಲ ಎಂದು ಅಲೋಕ್ ಕುಮಾರ್ ಹೇಳಿದರು. 1967–68 ಮತ್ತು 1975–76ರಲ್ಲಿ ಆದಾಯ ತೆರಿಗೆ ಇಲಾಖೆಯು ಆರ್‌ಎಸ್‌ಎಸ್‌ನ ಆದಾಯದ ಮೇಲೆ ತೆರಿಗೆ ವಿಧಿಸಲು ಆದೇಶಿಸಿತ್ತು. ಆದರೆ ಎರಡೂ ಸಂದರ್ಭಗಳಲ್ಲಿ, ಗುರು ದಕ್ಷಿಣದಿಂದ ಪಡೆದ ಆದಾಯವು ಪರಸ್ಪರ ನಂಬಿಕೆ ಕಾನೂನುಗಳ ಅಡಿಯಲ್ಲಿ ತೆರಿಗೆಗೆ ಒಳಪಡುವುದಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿದೆ ಎಂದು ಅವರು ವಿವರಿಸಿದರು.

ಮಹಾತ್ಮ ಗಾಂಧಿಯವರ ಹತ್ಯೆಯ ನಂತರವೂ ಆರ್‌ಎಸ್‌ಎಸ್ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವ ಪ್ರವೃತ್ತಿ ಮುಂದುವರೆದಿದೆ ಎಂದು ಕಾಂಗ್ರೆಸ್ ಅನ್ನು ಗುರಿಯಾಗಿಸಿಕೊಂಡ ಅಲೋಕ್ ಕುಮಾರ್ ಹೇಳಿದರು. ಕಾಂಗ್ರೆಸ್ ಬಹಳ ಹಿಂದಿನಿಂದಲೂ ಆರ್‌ಎಸ್‌ಎಸ್ ಅನ್ನು ದೂಷಿಸುವ ರಾಜಕೀಯದಲ್ಲಿ ತೊಡಗಿಸಿಕೊಂಡಿದೆ. ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಆ ಪ್ರವೃತ್ತಿಯ ಭಾಗವಾಗಿದೆ. ಅವರ ಪ್ರಕಾರ, ಇದು ಆರ್‌ಎಸ್‌ಎಸ್‌ನ ವಿಶ್ವಾಸಾರ್ಹತೆಗೆ ಹಾನಿ ಮಾಡುವ ಗುರಿಯನ್ನು ಹೊಂದಿರುವ ಹಗುರವಾದ ರಾಜಕೀಯ ದಾಳಿಯಾಗಿದೆ ಎಂದರು.

ಯಾವುದೇ ಸಂಸ್ಥೆ ನಿಯಮಿತವಾಗಿ ಚುನಾವಣೆಗಳನ್ನು ನಡೆಸಿದರೆ, ಸಕ್ರಿಯ ಸದಸ್ಯರ ಪಟ್ಟಿಯನ್ನು ನಿರ್ವಹಿಸುವುದು ಅತ್ಯಗತ್ಯ ಎಂದು ಅಲೋಕ್ ಕುಮಾರ್ ಹೇಳಿದರು. ಆರ್‌ಎಸ್‌ಎಸ್‌ನಲ್ಲಿ ಪ್ರತಿ ಮೂರು ವರ್ಷಗಳಿಗೊಮ್ಮೆ ಚುನಾವಣೆಗಳು ನಡೆಯುತ್ತವೆ, ಆದ್ದರಿಂದ ಸ್ವಯಂಸೇವಕರ ದಾಖಲೆಯನ್ನು ನಿರ್ವಹಿಸಲಾಗುತ್ತದೆ. ಸಂಘವು ಸಂಘಟಿತ ಮತ್ತು ಶಿಸ್ತಿನ ಸಂಘಟನೆಯಾಗಿದ್ದು, ಅದರ ವಿರುದ್ಧದ ಆರೋಪಗಳು ಸತ್ಯಗಳನ್ನು ಆಧರಿಸಿವೆ ಮತ್ತು ರಾಜಕೀಯ ಪ್ರೇರಿತವಾಗಿವೆ ಎಂದು ಅವರು ಹೇಳಿದರು. ಕರ್ನಾಟಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರ್‌ಎಸ್‌ಎಸ್ ತನ್ನನ್ನು ನೋಂದಾಯಿಸಿಕೊಳ್ಳಬೇಕು. ಅದರ ಕಾನೂನು ಸ್ಥಿತಿಯನ್ನು ಸ್ಪಷ್ಟಪಡಿಸಬೇಕು. ಅದರ ಹಣಕಾಸು, ಆದಾಯ, ವೆಚ್ಚಗಳು ಮತ್ತು ಆಸ್ತಿಗಳ ಮೂಲಗಳನ್ನು ಬಹಿರಂಗಪಡಿಸಬೇಕು ಎಂದು ಕೇಳಿಕೊಂಡಿದ್ದಾರೆ.

## ಹಲವೆಡೆ ಲೋಕಾಯುಕ್ತ ದಾಳಿ

ದಾವಣಗೆರೆ/ಕಲಬುರಗಿ/ಚಿಕ್ಕಮಗಳೂರು: ಭ್ರಷ್ಟ ಅಧಿಕಾರಿಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳ ತಂಡ ಬೆಳ್ಳಂಬೆಳಗ್ಗೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ದಾಳಿ ನಡೆಸಿದೆ.

ವಿವಿಧ ಇಲಾಖೆಗಳಲ್ಲಿ ಅಧಿಕಾರಿಗಳು ಅಕ್ರಮ ಆಸ್ತಿ ಗಳಿಸಿದ ಬಗ್ಗೆ ಸಾಲು ಸಾಲು ಆರೋಪಗಳು ಕೇಳಿಬಂದ ಹಿನ್ನೆಲೆ ಕಲಬುರಗಿ, ದಾವಣಗೆರೆ, ಚಿತ್ರದುರ್ಗ, ಚಿಕ್ಕಮಗಳೂರು ಸೇರಿ ವಿವಿಧ ಜಿಲ್ಲೆಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದೆ.

ದಾವಣಗೆರೆ ಲೋಕಾಯುಕ್ತ ಎಸ್ಪಿ ಎಂ.ಎಸ್ ಕೌಲಾಪುರೆ ನೇತೃತ್ವದಲ್ಲಿ ಮೂರು ಅಧಿಕಾರಿಗಳ 12 ತಂಡ ಏಕಕಾಲಕ್ಕೆ 12 ಕಡೆ ದಾಳಿ ನಡೆಸಿದೆ. ಹುಬ್ಬಳ್ಳಿಯಲ್ಲಿ ಕೆಎಸ್‌ಆರ್‌ಟಿಸಿ (ವಾಯವ್ಯ) ಚೀಫ್ ಮೆಕ್ಯಾನಿಕ್ ಆಗಿರುವ ಸಿದ್ದೇಶ್ವರ ಹೆಬ್ಬಾಳ್ ಅವರಿಗೆ ಸೇರಿದ ವಿವಿಧ ಸ್ಥಳಗಳಲ್ಲಿ 12 ತಂಡ ದಾಳಿ ನಡೆಸಿದೆ.

ಸಿದ್ದೇಶ್ವರ ಅವರ ದಾವಣಗೆರೆ ನಗರದ ಆಂಜನೇಯ ಬಡಾವಣೆ ಮನೆ, ಹುಬ್ಬಳ್ಳಿ ಕಚೇರಿ ಸೇರಿ 4 ಕಡೆ ಲೋಕಾಯುಕ್ತ ದಾಳಿ ನಡೆಸಿದೆ. ದಾಳಿ ವೇಳೆ ಸಿದ್ದೇಶ್ವರ ಹೆಬ್ಬಾಳ್ ಮನೆಯಲ್ಲಿ 40 ಲಕ್ಷ ರೂಪಾಯಿ ನಗದು ಪತ್ತೆಯಾಗಿದೆ.

ಈ ಬೆನ್ನಲ್ಲೇ ಚಿತ್ರದುರ್ಗ ಬಯಲು ಸೀಮೆ ಪ್ರಾಧಿಕಾರದ ಕಾರ್ಯದರ್ಶಿ ಕೃಷ್ಣ ನಾಯ್ಕ್ ಅವರ ಮನೆ ಮೇಲೆ, ದಾವಣಗೆರೆ ನಗರದ ಸಿದ್ದವೀರಪ್ಪ. ಬಡಾವಣೆ ಮನೆ, ಚಿತ್ರದುರ್ಗ ಕಚೇರಿ ಸೇರಿ 5 ಕಡೆ ದಾಳಿಯಾಗಿದೆ. ಬೆಳಗಾವಿ ಕೆಆರ್‌ಐಡಿಎಲ್ ಅಧೀಕ್ಷಕ ಇಂಜಿನಿಯರ್ ಸಣ್ಣ ಕೆಂಚಪ್ಪ ಅವರಿಗೆ ಸೇರಿದ ಚಿತ್ರದುರ್ಗದ, ದಾವಣಗೆರೆ, ಬೆಳಗಾವಿಯಲ್ಲಿರುವ ಮನೆಗಳು ಸೇರಿ 5 ಕಡೆ ದಾಳಿ ನಡೆಸಲಾಗಿದೆ.

ಇನ್ನು ಕಲಬುರಗಿಯಲ್ಲೂ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದೆ.

## ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು

ನವದೆಹಲಿ: ರಾಷ್ಟ್ರೀಯ ಸ್ವಯಂಸೇವಕ ಸಂಘ ನೋಂದಣಿ ಮಾಡಿಸಬೇಕು ಮತ್ತು ಪಾರದರ್ಶಕವಾಗಿ ಲೆಕ್ಕ ಕೊಡಬೇಕು ಎಂದು ಮತ್ತೆ ಆಗ್ರಹಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು. ಇನ್ನು ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಲೆಕ್ಕ ಕೊಡಬಾರದಾ? ಎಂದು ಮಂಗಳವಾರ ಪ್ರಶ್ನಿಸಿದ್ದಾರೆ.



ನಿನ್ನೆ ಆರ್‌ಎಸ್‌ಎಸ್ ನೋಂದಣಿ ಮತ್ತು ಹಣಕಾಸು ವಹಿವಾಟುಗಳ ಮಾಹಿತಿ ಕೋರಿ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಿಪಕ್ಷ ಬಿಜೆಪಿ ತೀವ್ರ ವಾಗ್ದಾಳಿ ನಡೆಸುತ್ತಿದೆ.

ಈ ಹಿನ್ನೆಲೆಯಲ್ಲಿ ಇಂದು ದೆಹಲಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಆರ್‌ಎಸ್‌ಎಸ್ ನವರು 'ದುರಹಂಕಾರ ಬಿಟ್ಟು ಕಾನೂನು' ಪಾಲಿಸಬೇಕು ಎಂದು ಹೇಳಿದ್ದಾರೆ.

ಅಯೋಧ್ಯೆಯಲ್ಲಿ ರಾಮ ಮಂದಿರದ ದೇಣಿಗೆ ವಿಚಾರದಲ್ಲಿ ಹಗರಣ ನಡೆದಿದೆ. ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡುವ ಪರಿಸ್ಥಿತಿ ಇದೆ. ಇನ್ನೂ ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಯಾಕೆ ಲೆಕ್ಕ ಕೊಡಬಾರದು? ಎಂದು ಪ್ರಶ್ನಿಸಿದರು.

ಜವಬ್ದಾರಿ ಸ್ಥಾನದಲ್ಲಿ ಕುಳಿತು ನಾನು ಕೇಳುತ್ತಿದ್ದೇನೆ. ಯಾವುದೇ ಧರ್ಮದ ಸಂಘ ಸಂಸ್ಥೆಗಳಾದರೂ ಕಾನೂನು ಅಡಿಯಲ್ಲಿ ಬರಬೇಕು. ಯಾವುದೇ ಕಾರ್ಯಕ್ರಮ ಮಾಡಿದ್ರೂ ಪೊಲೀಸ್ ಅನುಮತಿ ಪಡೆಯಬೇಕು. ಆರ್‌ಎಸ್‌ಎಸ್ ಪಡೆಯುವುದು ತಪ್ಪಾ? ನಿಮ್ಮ ಆಡಳಿತ ಸಿಬ್ಬಂದಿ ಯಾರು ಎಂದು ತಿಳಿದುಕೊಳ್ಳಬಾರದಾ? ದೇಣಿಗೆ ಸಂಗ್ರಹ ಮಾಡುತ್ತಿದ್ದಾರೆ ಎಷ್ಟು ಬರ್ತಿದೆ? ಇದೆಲ್ಲಾ ಕೇಳಬಾರದಾ? ಆರ್‌ಎಸ್‌ಎಸ್‌ನವರು ಕಾನೂನು ಹೋರಾಟಕ್ಕೆ ಮೂರು ಕೋಟಿ ಖರ್ಚು ಮಾಡಿದ್ದಾರೆ. ಸಂಘದ ನಾಯಕರು ಅಮೆರಿಕ ಪ್ರವಾಸ ಮಾಡುತ್ತಾರೆ. ಅವರಿಗೆ ಹಣ ಎಲ್ಲಿಂದ ಬರ್ತಿದೆ? ಅವರ ಚಟುವಟಿಕೆಗಳು ಏನು? ಅಂತ ಪ್ರಶ್ನೆಗಳ ಮಳೆಸುರಿಸಿದರು.

"ಸಾಂವಿಧಾನಿಕ ಪ್ರಜಾಪ್ರಭುತ್ವದಲ್ಲಿ, ಯಾವುದೇ ಸಂಸ್ಥೆ, ಅದು ಎಷ್ಟೇ ಹಳೆಯದಾಗಿರಲಿ ಅಥವಾ ಪ್ರಭಾವಶಾಲಿಯಾಗಿರಲಿ ದೇಶದ ಕಾನೂನು ಪಾಲಿಸಬೇಕು. ದುರಹಂಕಾರವನ್ನು ದೂರವಿಡಿ, ಕಾನೂನನ್ನು ಅನುಸರಿಸಿ ಮತ್ತು ನಿಮ್ಮ 'ಪದಾಧಿಕಾರಿಗಳು' ಅಥವಾ 'ಕಾನೂನು ಮುಖ್ಯಸ್ಥರು' ಬಂದು ನನಗೆ ವಿವರಿಸಲಿ" ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

## ಟೆಲಿಗ್ರಾಮ್ ನಿಷೇಧ

ನವದೆಹಲಿ: ವೈದ್ಯಕೀಯ ಪ್ರವೇಶ ಪರೀಕ್ಷೆಯಾದ ನೀಟ್ ಮರು ಪರೀಕ್ಷೆಯನ್ನು ಅತ್ಯಂತ ಪಾರದರ್ಶಕ ಹಾಗೂ ಸುರಕ್ಷಿತವಾಗಿ ನಡೆಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ದೇಶಾದ್ಯಂತ ಜನಪ್ರಿಯ ಮೆಸೇಜಿಂಗ್ ಆಪ್ ಆದ 'ಟೆಲಿಗ್ರಾಮ್' ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲು ನಿರ್ಧರಿಸಿದೆ.

ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ನೀಡಿರುವ ಅಧಿಕೃತ ನಿರ್ದೇಶನದ ಪ್ರಕಾರ, ಭಾರತದಲ್ಲಿ ಜೂನ್ 22, 2026 ರವರೆಗೆ ಟೆಲಿಗ್ರಾಮ್ ಸೇವೆಗಳು ತಾತ್ಕಾಲಿಕವಾಗಿ ಲಭ್ಯವಿರುವುದಿಲ್ಲ. ಜೂನ್ 21 ರಂದು ದೇಶಾದ್ಯಂತ ಬಿಗಿಯಾದ ಭದ್ರತೆಯೊಂದಿಗೆ ನೀಟ್ ಮರು ಪರೀಕ್ಷೆ ನಡೆಯಲಿದ್ದು, ಪರೀಕ್ಷೆಗೆ ಸಂಬಂಧಿಸಿದ ಯಾವುದೇ ಮಾಹಿತಿ ಅಥವಾ ಪ್ರಶ್ನೆಪತ್ರಿಕೆಗಳು ಸಾಮಾಜಿಕ ಮಾಧ್ಯಮಗಳಲ್ಲಿ ಸೋರಿಕೆಯಾಗದಂತೆ ತಡೆಯಲು ಈ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ.

ನೀಟ್ ಪರೀಕ್ಷೆಯನ್ನು ನಡೆಸುವ ಜವಾಬ್ದಾರಿ ಹೊತ್ತಿರುವ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಕೇಂದ್ರ ಸರ್ಕಾರದ ಈ ತ್ವರಿತ ಮತ್ತು ಕಠಿಣ ನಿರ್ಧಾರವನ್ನು ಮುಕ್ತಕಂಠದಿಂದ ಸ್ವಾಗತಿಸಿದೆ. ಈ ತಾತ್ಕಾಲಿಕ ನಿಷೇಧವು ಪರೀಕ್ಷೆಯ ನ್ಯಾಯಸಮ್ಮತತೆಯನ್ನು ಕಾಪಾಡಲು ಮತ್ತು ದೇಶದ ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳಿಗೆ ಯಾವುದೇ ಅನ್ಯಾಯವಾಗದಂತೆ ತಡೆಯಲು ನೆರವಾಗಲಿದೆ ಎಂದು ಎನ್‌ಟಿಎ ತಿಳಿಸಿದೆ.

ವದಂತಿಗಳು ಹರಡದಂತೆ ತಡೆಯಲು ಕೇಂದ್ರ ಸರ್ಕಾರವು ಮುಂಜಾಗ್ರತಾ ಕ್ರಮವಾಗಿ ಜೂನ್ 22 ರವರೆಗೆ ಭಾರತದಲ್ಲಿ ಟೆಲಿಗ್ರಾಮ್ ಆಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
17/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## 'ಶಕ್ತಿ' ಸ್ಮಾರ್ಟ್ ಕಾರ್ಡ್‌ಗೆ ಅಂತಿಮ ಸಿದ್ಧತೆ: ಬೈರತಿ ಸುರೇಶ್

ಬೆಂಗಳೂರು

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಶಕ್ತಿ' ಯೋಜನೆಯಡಿ ಸ್ಮಾರ್ಟ್ ಕಾರ್ಡ್ ವಿತರಣೆ ಬಗ್ಗೆ ಅಂತಿಮ ರೂಪುರೇಶೆ ಸಿದ್ಧಪಡಿಸಲಾಗುತ್ತಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.



ಸೋಮವಾರ ಸಾರಿಗೆ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಸುಮಾರು 2 ಕೋಟಿಗೂ ಅಧಿಕ ಮಹಿಳೆಯರ ಉಚಿತ ಪ್ರಯಾಣಕ್ಕೆ ಸ್ಮಾರ್ಟ್ ಕಾರ್ಡ್ ವಿತರಿಸುವ ಸಾಧ್ಯತೆಗಳಿವೆ. ಈ ಸ್ಮಾರ್ಟ್ ಕಾರ್ಡ್ ವಿತರಣೆಗೆ ಸಂಬಂಧಿಸಿದಂತೆ ವಿಶೇಷ ಉದ್ದೇಶಿತ ವಾಹನ (ಖಕಗಿ) ಯನ್ನು ರಚನೆ ಮಾಡಿ, ಇದರಡಿಯೇ ವಿತರಣಾ ಪ್ರಕ್ರಿಯೆ ನಡೆಸಲಾಗುತ್ತದೆ ಎಂದರು.

ಇದೇವೇಳೆ, ಸ್ಮಾರ್ಟ್ ಕಾರ್ಡ್‌ನ ರೂಪುರೇಶೆಯನ್ನು ಅಂತಿಮಗೊಳಿಸಲು ವಹಿವಾಟು ಸಲಹೆಗಾರರ ಸಮಿತಿಯನ್ನು ನೇಮಕ ಮಾಡಲಾಗಿದೆ. ಈ ಸಮಿತಿಯು ಸ್ಮಾರ್ಟ್ ಕಾರ್ಡ್ ಸ್ವರೂಪ, ತಾಂತ್ರಿಕ ನೆರವು, ಟೆಂಡರ್ ಪ್ರಕ್ರಿಯೆ ಮತ್ತು ವಿತರಣೆ ಪ್ರಕ್ರಿಯೆಯನ್ನು ಹೇಗೆ ನಡೆಸಬೇಕೆಂಬುದರ ಬಗ್ಗೆ ಸಾರಿಗೆ ನಿಗಮಗಳಿಗೆ ಸಲಹೆ, ಮಾರ್ಗದರ್ಶನ ನೀಡಲಿದೆ ಎಂದು ತಿಳಿಸಿದರು.

### ಪಿಪಿಪಿ ಮಾದರಿಯಲ್ಲಿ ಸ್ಮಾರ್ಟ್ ಕಾರ್ಡ್

ಸಮಿತಿಯು ಈ ತಿಂಗಳಾಂತ್ಯದಲ್ಲಿ ವರದಿ ನೀಡಲಿದ್ದು, ಇದರ ಆಧಾರದಲ್ಲಿ ಸ್ಮಾರ್ಟ್ ಕಾರ್ಡ್ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ. ಕೋಟ್ಯಂತರ ಸ್ಮಾರ್ಟ್ ಕಾರ್ಡ್ ವಿತರಣೆ ಅಗತ್ಯವಿರುವ ಹಿನ್ನೆಲೆಯಲ್ಲಿ ಟೆಂಡರ್ ಕರೆಯಲಾಗುತ್ತದೆ.

ಮಹಿಳೆಯರಿಗೆ ಉಚಿತವಾಗಿ ಸ್ಮಾರ್ಟ್ ಕಾರ್ಡ್ ದೊರೆಯಲಿದೆ. ಪುರುಷರು ಪಾವತಿ ಆಧಾರದಲ್ಲಿ ಸ್ಮಾರ್ಟ್ ಕಾರ್ಡ್ ಖರೀದಿಸಬೇಕಾಗುತ್ತದೆ. ಹೀಗೆ ಮಹಿಳಾ ಮತ್ತು ಪುರುಷ ಪ್ರಯಾಣಿಕರೆಲ್ಲರನ್ನು ಒಟ್ಟುಗೂಡಿಸಿದರೆ ಸುಮಾರು 2.5 ಕೋಟಿಯಿಂದ 3 ಕೋಟಿ ಕಾರ್ಡ್ ಗಳು ಬೇಕಾಗುತ್ತವೆ ಎಂದು ಅಂದಾಜಿಸಲಾಗಿದೆ ಎಂದು ಬೈರತಿ ಸುರೇಶ್ ತಿಳಿಸಿದರು.

ಪರಿಸರ ಸಂರಕ್ಷಣೆಗೆ ನಮ್ಮ ಸರ್ಕಾರ ಆದ್ಯತೆ ನೀಡುತ್ತಿದ್ದು, ಎಲೆಕ್ಟ್ರಿಕ್ ಬಸ್ ಗಳ ಖರೀದಿಯತ್ತ ಗಮನಹರಿಸಿದೆ. ಈ ಹಿನ್ನೆಲೆಯಲ್ಲಿ ಹಂತಹಂತವಾಗಿ ನಾಲ್ಕೂ ನಿಗಮಗಳಿಗೆ 4 ಸಾವಿರಕ್ಕೂ ಅಧಿಕ ಎಲೆಕ್ಟ್ರಿಕ್ ಬಸ್ ಗಳನ್ನು ಖರೀದಿಸಲಾಗುತ್ತದೆ ಎಂದರು.

ಸಭೆಯಲ್ಲಿ ಸಾರಿಗೆ ಇಲಾಖೆ ಕಾರ್ಯದರ್ಶಿ ದೀಪಾಚೋಳನ್, ಆಯುಕ್ತರು ಮತ್ತು ಕೆಎಸ್ಸಾರ್ಟಿಸಿ ವ್ಯವಸ್ಥಾಪಕ ನಿರ್ದೇಶಕ ಸೆಲ್ವಮಣಿ, ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಕುಮಾರ್ ಸೇರಿದಂತೆ ಇನ್ನಿತರ ಹಿರಿಯ ಅಧಿಕಾರಿಗಳು ಇದ್ದರು.

# ಸದೃಢ ದೇಶ ನಿರ್ಮಾಣದಲ್ಲಿ ಮೋದಿಯವರ ಸಮರ್ಥ ಆಡಳಿತ

ತುಮಕೂರು




ನರೇಂದ್ರ ಮೋದಿಯವರು ಪ್ರಧಾನಿಯಾಗಿ ಆಡಳಿತ ಚುಕ್ಕಾಣಿ ಹಿಡಿದ 12 ವರ್ಷಗಳಿಂದ ನಂತರ ದೇಶದಲ್ಲಿ 50 ವರ್ಷಗಳಷ್ಟು ಅಭಿವೃದ್ಧಿಯಾಗಿದೆ. ಮೋದಿ ಸರ್ಕಾರದ ಸಮರ್ಥ ನಾಯಕತ್ವದಲ್ಲಿ ವಿಶ್ವದ 3ನೇ ಅತಿ ದೊಡ್ಡ ಆರ್ಥಿಕ ಶಕ್ತಿಯಾಗುವತ್ತ ಭಾರತ ದೃಢ ಹೆಜ್ಜೆ ಇಟ್ಟಿದೆ ಎಂದು ಕೇಂದ್ರ ಜಲಶಕ್ತಿ ಮತ್ತಯ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.

ಸೋಮವಾರ ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, 2014ರಲ್ಲಿ ದೇಶದ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ತಮ್ಮ ದೂರದೃಷ್ಟಿ ಚಿಂತನೆ, ಕಲ್ಯಾಣ ಕಾರ್ಯಕ್ರಮಗಳ ಮೂಲಕ ದೇಶದಲ್ಲಿ ಈ 12 ವರ್ಷದಲ್ಲಿ ಅಮೂಲಾಗ್ರ ಬದಲಾವಣೆ ಮಾಡಿದ್ದಾರೆ ಎಂದರು.

ಬಡತನ ನಿರ್ಮೂಲನೆಗೆ ಕಾರ್ಯಕ್ರಮದಡಿಯಲ್ಲಿ ದೇಶದ 25 ಕೋಟಿ ಜನರನ್ನು ಬಡತನದಿಂದ ಹೊರಕ್ಕೆ ತರಲಾಗಿದೆ. ಪಿ.ಎಂ. ಗರೀಬ್ ಕಲ್ಯಾಣ ಅನ್ನ ಯೋಜನೆ ಅಡಿಯಲ್ಲಿ 81 ಕೋಟಿ ಜನರಿಗೆ ಉಚಿತ ಆಹಾರ ಧಾನ್ಯ ವಿತರಣೆ ಮಾಡಲಾಗುತ್ತಿದೆ. 58 ಕೋಟಿ ಜನ್ ಧನ್ ಖಾತೆಗಳನ್ನು ತೆರೆದು ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕ್ರಾಂತಿ ಮಾಡಲಾಗಿದೆ. ಮನೆಮನೆಗೆ ಕುಡಿಯುವ ನೀರು ಸರಬರಾಜು ಮಾಡುವ ಜಲ ಜೀವನ್ ಮಿಷನ್ ಅಡಿಯಲ್ಲಿ 16 ಕೋಟಿ ನೀರಿನ ಸಂಪರ್ಕ ಒದಗಿಸಲಾಗಿದೆ ಎಂದು ತಿಳಿಸಿದರು.

ಸಣ್ಣ ಉದ್ಯಮಿಗಳು ಮತ್ತು ಅಳಿವಿನ ಅಂಚಿನಲ್ಲಿರುವ ವರ್ಗಗಳನ್ನು ಉತ್ತೇಜಿಸಲು ಅಡಮಾನವಿಲ್ಲದ 57 ಕೋಟಿ ಮುದ್ರಾ ಸಾಲ ಯೋಜನೆ ಜಾರಿ, 74 ಲಕ್ಷ ಪಿ.ಎಂ ನಿಧಿ ಬೀದಿಬದಿ ವ್ಯಾಪಾರಿಗಳಿ ಸಾಲ ಯೋಜನೆ ಜಾರಿ ಮಾಡಲಾಗಿದೆ. ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆಯಲ್ಲಿ ಸಾಂಪ್ರದಾಯಕ ಕುಶಲಕರ್ಮಿಗಳಿಗೆ ಕೌಶಲ್ಯಾಭಿವೃದ್ಧಿ ಮತ್ತು ಸಾಲದ ನೆರವು ನೀಡಲಾಗುತ್ತಿದೆ ಎಂದು ಸಚಿವ ಸೋಮಣ್ಣ ಹೇಳಿದರು.

ರೈತರ ಕಲ್ಯಾಣಕ್ಕಾಗಿ 4.3 ಲಕ್ಷ ಕೋಟಿ ರೂ. ಗಳನ್ನು ಪಿಎಂ ಕಿಸಾನ್ ಅಡಿ ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ.

ರಸಗೊಬ್ಬರದ ಸಬ್ಸಿಡಿ ಹೆಚ್ಚಳ ಮಾಡಿದ್ದು ಪ್ರತಿ ಚೀಲ ಯೂರಿಯಾ 266 ರೂ. ಲಭ್ಯವಾಗುವಂತೆ ಮಾಡಲಾಗಿದೆ. ಆಹಾರ ಧಾನ್ಯ ಉತ್ಪಾದನೆಯಲ್ಲಿ ಭಾರತ 12 ಲಕ್ಷಕ್ಕೂ ಹೆಚ್ಚಿನ ಮೆಟ್ರಿಕ್ ಟನ್ ದಾಖಲೆ ಮಾಡಲಾಗಿರುವುದು ಪ್ರಧಾನಿ ಮೋದಿ ಸರ್ಕಾರದ ಉತ್ತಮ ಆಡಳಿತದ ಫಲ ಎಂದರು.

ಭಾರತವು ವಿಶ್ವದ ಅತಿಹೆಚ್ಚು ಯುವಜನರನ್ನು ಹೊಂದಿರುವ ದೇಶ. ಯುವಜನರಿಗಾಗಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ ಮಾಡಲಾಗಿದೆ. 33.5 ಲಕ್ಷ ಕೋಟಿ ರೂ.ಗಳ 120 ಪ್ರಮುಖ ಸ್ಟಾರ್ಟ್ ಅಪ್‌ಗಳ ಸ್ಥಾಪನೆಗೆ ನೆರವು ನೀಡಲಾಗಿದೆ. 1.60 ಲಕ್ಷ ಕೋಟಿ ರೂ.ಗಳನ್ನು ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಹೂಡಿಕೆ ಮಾಡಲಾಗಿದೆ.

164 ವಂದೇ ಭಾರತ್ ರೈಲುಗಳು ಪ್ರಯಾಣವನ್ನು ಹೆಚ್ಚು ವೇಗ ಮತ್ತು ಸುಲಭಗೊಳಿಸಿವೆ. ಆರ್.ಆರ್.ಟಿ.ಎಸ್ ಹಾಗೂ ವಂದೇ ಭಾರತ್ ರೈಲುಗಳ ಮೂಲಕ ವಿಶ್ವದರ್ಜೆಯ ಬಹುಮಾದರಿ ಸಂಪರ್ಕ ವ್ಯವಸ್ಥೆ ನಿರ್ಮಾಣ ಬ್ರಾಡ್ ಗೇಜ್ ರೈಲು ಜಾಲದ ಶೇಕಡ 99.6ರಷ್ಟು ವಿದ್ಯುದೀಕರಣ ಗೊಂಡಿದೆ.

2025–26ರಲ್ಲಿ ಭಾರತದ ಜಿಡಿಪಿ ಸುಮಾರು 67 ರೂ. ಲಕ್ಷ ಕೋಟಿ ಆಗಿದೆ. ದೇಶದ ಪ್ರತಿಯೊಬ್ಬ ನಾಗರೀಕನ ಸಬಲೀಕರಣಕ್ಕೆ ನರೇಂದ್ರ ಮೋದಿಯವರ ಸರ್ಕಾರ ನಿರಂತರ ಅಭಿವೃದ್ಧಿ ಎಂಬ ಪ್ರವಾಹವು ವಿಕಸಿತ ಭಾರತ ನಿರ್ಮಾಣದ ಅಚಲ ಸಂಕಲ್ಪದಿಂದ ಮತ್ತಷ್ಟು ವೇಗವಾಗಿ ಮುಂದುವರೆಯುತ್ತಿದೆ ಎಂದು ಸಚಿವ ಸೋಮಣ್ಣ ಹೇಳಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ, ಶಾಸಕರಾದ ಜಿ.ಬಿ. ಜ್ಯೋತಿಗಣೇಶ್, ಬಿ. ಸುರೇಶ್‌ಗೌಡ, ಮಾಜಿ ವಿಧಾನ ಪರಿಷತ್ ಸದಸ್ಯ ಡಾ.ಎಂ.ಆರ್. ಹುಲಿನಾಯ್ಕರ್, ಮುಖಂಡರಾದ ವೈ.ಹೆಚ್. ಹುಚ್ಚಯ್ಯ, ಎಸ್.ಡಿ. ದಿಲೀಪ್‌ಕುಮಾರ್, ಭೈರಣ್ಣ, ಶಿವಕುಮಾರ್, ಹೆಚ್.ಎಂ. ರವೀಶಯ್ಯ, ರುದ್ರೇಶ್, ವೇದಮೂರ್ತಿ, ಸಾಗರನಹಳ್ಳಿ ವಿಜಯಕುಮಾರ್, ಜೆ. ಜಗದೀಶ್ ಹಾಗೂ ವಿವಿಧ ಮೋರ್ಚಾಗಳ ಮುಖಂಡರು ಹಾಜರಿದ್ದರು.

> ಸಣ್ಣ ಉದ್ಯಮಿಗಳು ಮತ್ತು ಅಳಿವಿನ ಅಂಚಿನಲ್ಲಿರುವ ವರ್ಗಗಳನ್ನು ಉತ್ತೇಜಿಸಲು ಅಡಮಾನವಿಲ್ಲದ 57 ಕೋಟಿ ಮುದ್ರಾ ಸಾಲ ಯೋಜನೆ ಜಾರಿ, 74 ಲಕ್ಷ ಪಿ.ಎಂ ನಿಧಿ ಬೀದಿಬದಿ ವ್ಯಾಪಾರಿಗಳ ಸಾಲ ಯೋಜನೆ ಜಾರಿ ಮಾಡಲಾಗಿದೆ. ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆಯಲ್ಲಿ ಸಾಂಪ್ರದಾಯಕ ಕುಶಲಕರ್ಮಿಗಳಿಗೆ ಕೌಶಲ್ಯಾಭಿವೃದ್ಧಿ ಮತ್ತು ಸಾಲದ ನೆರವು ನೀಡಲಾಗುತ್ತಿದೆ

# ಶಬರಿಮಲೆ ಯಾತ್ರೆಗೆ ತೆರಳಿದ ಎಚ್‌ಡಿಕೆ

ಶಬರಿಮಲೆ

ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಶಬರಿಮಲೆ ಯಾತ್ರೆ ಕೈಗೊಂಡಿದ್ದಾರೆ.

ಬೆಳಗಿನ ಜಾವವೇ ಕೊಚ್ಚಿನ್‌ನ ಶ್ರೀ ಸುಬ್ರಮಣ್ಯ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಅವರು, ಶ್ರೀ ಅಯ್ಯಪ್ಪ ಸ್ವಾಮಿ ಮಾಲೆ ಧರಿಸಿ ಇರುಮುಡಿ ಹೊತ್ತು ಶಬರಿಮಲೆಯತ್ತ ಪ್ರಯಾಣ ಬೆಳೆಸಿದರು.

ಮಧ್ಯಾಹ್ನ ವೇಳೆಗೆ ಪಂಪಾ ನದಿ ತೀರ ತಲುಪಲಿರುವ ಸಚಿವರು ಹಾಗೂ ಅವರೊಂದಿಗೆ ತೆರಳಿರುವ ಭಕ್ತರ ತಂಡವು, ಪಂಪಾದಲ್ಲಿ ಪುಣ್ಯ ಸ್ನಾನ ನೆರವೇರಿಸಿ ಬಳಿಕ ಶಬರಿಮಲೆ ಸನ್ನಿಧಾನದತ್ತ ಸಾಗಲಿದೆ.



ಸಂಜೆ ವೇಳೆಗೆ ಅಯ್ಯಪ್ಪ ಸನ್ನಿಧಿಯಲ್ಲಿ ನಡೆಯುವ ಪಡಿಪೂಜೆಯಲ್ಲಿ ಭಾಗವಹಿಸಲಿರುವ ಕುಮಾರಸ್ವಾಮಿ ಅವರು, ನಂತರ ಶ್ರೀ ಅಯ್ಯಪ್ಪ ಸ್ವಾಮಿಗೆ ವಿಶೇಷ ಪುಷ್ಪಾಭಿಷೇಕ ಸಮರ್ಪಿಸಲಿದ್ದಾರೆ.

ಕೇಂದ್ರ ಸಚಿವರಾದ ಬಳಿಕ ಕುಮಾರಸ್ವಾಮಿ ಅವರು ಕೈಗೊಂಡಿರುವ ಮೊದಲ ಶಬರಿಮಲೆ ಯಾತ್ರೆ ಇದಾಗಿದೆ.

ಈ ಹಿಂದೆ ಸಹ ಹಲವು ಬಾರಿ ಅವರು ಅಯ್ಯಪ್ಪ ಸನ್ನಿಧಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು ಹಾಗೂ ಸಾ.ರಾ. ಮಹೇಶ್, ವಿಧಾನ ಪರಿಷತ್ ಸದಸ್ಯ ಭೋಜೇಗೌಡ, ಶಾಸಕರಾದ ಶರಣಗೌಡ ಕಂದಕೂರ, ಮಾಜಿ ಶಾಸಕ ಮಾಗಡಿ ಮಂಜುನಾಥ್, ಹೆಚ್.ಎಂ. ರಮೇಶ್ ಗೌಡ ಸೇರಿದಂತೆ 30ಕ್ಕೂ ಹೆಚ್ಚು ಅಯ್ಯಪ್ಪ ಭಕ್ತರು ಸಚಿವರೊಂದಿಗೆ ಯಾತ್ರೆಯಲ್ಲಿ ಭಾಗಿಯಾಗಿದ್ದಾರೆ.

## ಕಾಕ್ರೋಚ್ ಪಾರ್ಟಿ ಸಂಸ್ಥಾಪಕನಿಗೆ ಕಪಾಳಮೋಕ್ಷ

ಜೈಪುರ

ರಾಜಸ್ಥಾನದ ಜೈಪುರದಲ್ಲಿ ನಡೆದ ಪ್ರತಿಭಟನೆ ವೇಳೆ ಕಾಕ್ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಅಭಿಜಿತ್ ದಿಪ್ಕೆ ಮೇಲೆ ಹಲ್ಲೆ ಮಾಡಲಾಗಿದೆ.

ಸೋಮವಾರ ಮಧ್ಯಾಹ್ನ ಶಹೀದ್ ಸ್ಮಾರಕದ ಹತ್ತಿರ ಶಾಂತಿಯುತ ಪ್ರತಿಭಟನೆ ನಡೆಸಲು ಅಭಿಜಿತ್ ದಿಪ್ಕೆ ಕರೆ ನೀಡಿದ್ದರು. ಪ್ರತಿಭಟನೆಯಲ್ಲಿ ಭಾಗವಹಿಸಲು ಆಗಮಿಸಿದ್ದ ಅವರು ಬೆಂಬಲಿಗರ ಹೆಗಲ ಮೇಲೆ ನಿಂತು ಜನರನ್ನುದ್ದೇಶಿಸಿ ಮಾತನಾಡಲು ತೆರಳುತ್ತಿದ್ದ ವೇಳೆ ಕೆಲವರು ಅವರ ಮೇಲೆ ಹಲ್ಲೆ ನಡೆಸಿದ್ದಾರೆ.

ಇಬ್ಬರು ವ್ಯಕ್ತಿಗಳು ಸ್ಕಾರ್ಫ್ ಎಳೆದು, ಹಲವು ಬಾರಿ ಕಪಾಳಮೋಕ್ಷ ಮಾಡಿದ್ದು, ಕೆಳಕ್ಕೆ ಎಳೆಯಲು ಯತ್ನಿಸಿದ್ದಾರೆ. ಈ ದೃಶ್ಯಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿವೆ. ಇದಕ್ಕೂ ಮೊದಲು ಸಿಜೆಪಿ ದೇಶಾದ್ಯಂತ ವಿದ್ಯಾರ್ಥಿ ಮತ್ತು ಯುವಜನರ ಪ್ರತಿಭಟನೆಗಳನ್ನು ಆಯೋಜಿಸಿತ್ತು.

## ಸೇಲ್ಸ್‌ಫೋರ್ಸ್ ಜೊತೆ ಕೈಜೋಡಿಸಿದ ಹೀರೊ ಫಿನ್‌ಕಾರ್ಪ್

ಬೆಂಗಳೂರು: ಗ್ರಾಹಕ ಸಂಬಂಧ ನಿರ್ವಹಣಾ ತಂತ್ರಜ್ಞಾನ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ಸೇಲ್ಸ್‌ಫೋರ್ಸ್, ಭಾರತದ ಮುಂಚೂಣಿ ಬ್ಯಾಂಕೇತರ ಹಣಕಾಸು ಸಂಸ್ಥೆಯಾದ ಹೀರೊ ಫಿನ್‌ಕಾರ್ಪ್ ಜೊತೆ ಕಾರ್ಯತಂತ್ರದ ಸಹಭಾಗಿತ್ವ ಘೋಷಿಸಿದೆ. ಏಜೆಂಟ್‌ಫೋರ್ಸ್ ತಂತ್ರಜ್ಞಾನದ ನೆರವಿನಿಂದ ಸಾಲ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ರೂಪಾಂತರಗೊಳಿಸುವ ಉದ್ದೇಶದಿಂದ ಈ ಸಹಭಾಗಿತ್ವ ಆರಂಭಿಸಲಾಗಿದೆ.

ಈ ಸಹಯೋಗದ ಫಲವಾಗಿ ಹೀರೊ ಫಿನ್‌ಕಾರ್ಪ್ ತನ್ನ ದ್ವಿಚಕ್ರ ವಾಹನ ಸಾಲ ಪ್ರಕ್ರಿಯೆಯ ಅವಧಿಯನ್ನು ಶೇಕಡಾ 72ರಷ್ಟು ಕಡಿಮೆ ಮಾಡುವಲ್ಲಿ ಯಶಸ್ವಿಯಾಗಿದೆ. ಇದರಿಂದ ಮೊದಲ ಬಾರಿಗೆ ವಾಹನ ಖರೀದಿಸುವ ಗ್ರಾಹಕರಿಗೆ ಸಾಲ ಮಂಜೂರಾತಿ ವೇಗವಾಗಿ ದೊರೆಯುತ್ತಿದ್ದು, ವಿತರಕರೊಂದಿಗಿನ ಸಂಬಂಧ ಮತ್ತಷ್ಟು ಬಲಗೊಂಡಿದೆ. ಜೊತೆಗೆ ಗ್ರಾಹಕರ ತೃಪ್ತಿ ಹಾಗೂ ಉದ್ಯೋಗಿಗಳ ಕಾರ್ಯ ಕ್ಷಮತೆಯೂ ಗಮ ಅನಾರ್ಹವಾಗಿ ಹೆಚ್ಚಾಗಿದೆ. ಹೀರೊ ಫಿನ್ ಕಾರ್ಪ್ ಸಂಸ್ಥೆಯು ಅತ್ಯಾಧುನಿಕ ಮತ್ತು ಬುದ್ಧಿವಂತ ಸಾಲ ಸಂಸ್ಕರಣಾ ವ್ಯವಸ್ಥೆಯನ್ನು ರೂಪಿಸಲು ಏಜೆಂಟ್ ಫೋರ್ಸ್, ಡೇಟಾ 360, ಮ್ಯೂಲ್‌ಸಾಫ್ಟ್, ಏಜೆಂಟ್‌ಫೋರ್ಸ್ ಮಾರಾಟ ವ್ಯವಸ್ಥೆ ಇದೆ.

ಹಾಗೂ ಏಜೆಂಟ್‌ಫೋರ್ಸ್ ಸೇವಾ ವ್ಯವಸ್ಥೆ ಸೇರಿದಂತೆ ಹಲವು ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಿದೆ. ಈ ವ್ಯವಸ್ಥೆಯ ಮೂಲಕ ಸಾಲ ಮಂಜೂರಾತಿಗೆ ಮುನ್ನ ಮತ್ತು ನಂತರದ ಹಲವು ಪ್ರಮುಖ ಹಂತಗಳನ್ನು ಸ್ವಯಂಚಾಲಿತಗೊಳಿಸಲಾಗಿದೆ. ದಾಖಲೆಗಳ ಸಂಗ್ರಹಣೆ, ಅರ್ಜಿಗಳ ಪರಿಶೀಲನೆ, ಪಾನ್ ಮತ್ತು ಆಧಾರ್ ದೃಢೀಕರಣ, ಸಾಲ ಅರ್ಹತೆ ಪರಿಶೀಲನೆ, ಬ್ಯಾಂಕ್ ಖಾತೆ ದೃಢೀಕರಣ, ವಿದ್ಯುನ್ಮಾನ ಸಹಿ ಪ್ರಕ್ರಿಯೆ, ದಾಖಲೆಗಳ ಸಂಸ್ಕರಣೆ ಹಾಗೂ ಸಾಲದ ಮೊತ್ತ ಬಿಡುಗಡೆ ಮಾಡುವಂತಹ ಕಾರ್ಯಗಳನ್ನು ಅತ್ಯಂತ ವೇಗವಾಗಿ ಮತ್ತು ನಿಖರವಾಗಿ ನಿರ್ವಹಿಸಲಾಗುತ್ತಿದೆ.

ಡೇಟಾ 360 ತಂತ್ರಜ್ಞಾನವು ಸೇಲ್ಸ್‌ಫೋರ್ಸ್ ಹಾಗೂ ಇತರ ಬಾಹ್ಯ ಮೂಲಗಳಿಂದ ಲಭ್ಯವಾಗುವ ಮಾಹಿತಿಯನ್ನು ಒಗ್ಗೂಡಿಸಿ, ಸ್ವಯಂಚಾಲಿತ ವ್ಯವಸ್ಥೆಗೆ ವಿಶ್ವಾಸಾರ್ಹ ಮಾಹಿತಿ ಆಧಾರವನ್ನು ಒದಗಿಸುತ್ತದೆ. ಮ್ಯೂಲ್‌ಸಾಫ್ಟ್ ತಂತ್ರಜ್ಞಾನವು ವಿವಿಧ ಅನ್ವಯಿಕ ವ್ಯವಸ್ಥೆಗಳ ನಡುವಿನ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸಿ, ಸರ್ಕಾರಿ ಪರಿಶೀಲನಾ ವ್ಯವಸ್ಥೆಗಳು, ಹಣಕಾಸು ಸಂಸ್ಥೆಗಳು ಮತ್ತು ದಾಖಲೆ ಸಂಗ್ರಹಣಾ ಕೇಂದ್ರಗಳನ್ನು ಪರಸ್ಪರ ಜೋಡಿಸುತ್ತದೆ.

ಇದೇ ವೇಳೆ, ಏಜೆಂಟ್‌ಫೋರ್ಸ್ ಮಾರಾಟ ಹಾಗೂ ಸೇವಾ ವ್ಯವಸ್ಥೆಗಳು ಗ್ರಾಹಕರ ಸಂಪರ್ಕ, ಸೇವಾ ನಿರ್ವಹಣೆ ಮತ್ತು ಕಾರ್ಯಾಚರಣಾ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಮುನ್ನಡೆಸುತ್ತವೆ.

## 'ಸಹಮತಿ'ಗೆ ಸ್ವಯಂ–ನಿಯಂತ್ರಣ ಸಂಸ್ಥೆಯಾಗಿ ಆರ್‌ಬಿಐ ಮಾನ್ಯತೆ

ಬೆಂಗಳೂರು: ಭಾರತದ ಡಿಜಿಟಲ್ ಹಣಕಾಸು ಮೂಲಸೌಕರ್ಯ ಕ್ಷೇತ್ರದಲ್ಲಿ ಮಹತ್ವದ ಬೆಳವಣಿಗೆಯೊಂದಾಗಿ, ದೇಶದ ಅಕೌಂಟ್ ಅಗ್ರಿಗೇಟರ್ (ಎಎ) ವ್ಯವಸ್ಥೆಗಾಗಿ 'ಸಹಮತಿ' ಸಂಸ್ಥೆಗೆ ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಸ್ವಯಂ–ನಿಯಂತ್ರಣ ಸಂಸ್ಥೆ (ಸೆಲ್ಫ್–ರೆಗ್ಯುಲೇಟರಿ ಆರ್ಗನೈಸೇಶನ್ ಎಸ್‌ಆರ್‌ಒ) ಎಂಬ ಮಾನ್ಯತೆಯನ್ನು ಅಧಿಕೃತವಾಗಿ ನೀಡಿದೆ.

ಈ ಮಾನ್ಯತೆಯು ಬಳಕೆದಾರರ ಒಪ್ಪಿಗೆ, ನಂಬಿಕೆ ಹಾಗೂ ಸುರಕ್ಷಿತ ಡೇಟಾ ಹಂಚಿಕೆ ತತ್ವಗಳ ಆಧಾರದ ಮೇಲೆ ನಿರ್ಮಾಣವಾಗಿರುವ ಭಾರತದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದ ಬಲವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ಸಹಮತಿ ಸಂಸ್ಥೆಯು ಅಕೌಂಟ್ ಅಗ್ರಿಗೇಟರ್ ವ್ಯವಸ್ಥೆಯ ಕೈಗಾರಿಕಾ ಒಕ್ಕೂಟ ಮತ್ತು ಸಮನ್ವಯ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ಬಳಕೆದಾರರ ಒಪ್ಪಿಗೆ ಯೊಂದಿಗೆ ಹಣಕಾಸು ಮಾಹಿತಿಯನ್ನು ಸುರಕ್ಷಿತವಾಗಿ ಹಂಚಿಕೊಳ್ಳುವ ವ್ಯವಸ್ಥೆಯ ಅಭಿವೃದ್ಧಿಗೆ ಪ್ರಮುಖ ಕೊಡುಗೆ ನೀಡುತ್ತಿದೆ.

ದೇಶದಾದ್ಯಂತ ಈ ವ್ಯವಸ್ಥೆಯ ಬಳಕೆ ವೇಗವಾಗಿ ವಿಸ್ತರಿಸುತ್ತಿರುವ ಸಂದರ್ಭದಲ್ಲಿ, ಆಡಳಿತ, ಕಾರ್ಯಾಚರಣಾ ಶಿಸ್ತು ಹಾಗೂ ವಿವಿಧ ಭಾಗೀದಾರರ ನಡುವಿನ ಸಮನ್ವಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಆರ್‌ಬಿಐ ಈ ಮಾನ್ಯತೆಯನ್ನು ನೀಡಿದೆ.

ಭಾರತದ ಅಕೌಂಟ್ ಅಗ್ರಿಗೇಟರ್ ವ್ಯವಸ್ಥೆಯು ಬಳಕೆದಾರರ ಅನುಮತಿಯ ಆಧಾರದ ಮೇಲೆ ಕಾರ್ಯನಿರ್ವಹಿಸುವ ವಿಶ್ವದ ಅತಿದೊಡ್ಡ ಹಣಕಾಸು ಮಾಹಿತಿ ಹಂಚಿಕೆ ಜಾಲಗಳಲ್ಲಿ ಒಂದಾಗಿ ಹೊರಹೊಮ್ಮಿದೆ.

ಪ್ರಸ್ತುತ ಈ ವ್ಯವಸ್ಥೆಯಲ್ಲಿ 1,120ಕ್ಕೂ ಹೆಚ್ಚು ಸಕ್ರಿಯ ನಿಯಂತ್ರಿತ ಹಣಕಾಸು ಸಂಸ್ಥೆಗಳು, 176 ಹಣಕಾಸು ಮಾಹಿತಿ ಪೂರೈಕೆದಾರರು, 1,020 ಹಣಕಾಸು ಮಾಹಿತಿ ಬಳಕೆದಾರರು ಹಾಗೂ 17 ಅಕೌಂಟ್ ಅಗ್ರಿಗೇಟರ್ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.

## ಡೀಲ್‌ಕ್ಲೇವ್' ನಾಯಕತ್ವ ವೇದಿಕೆಯ ಪ್ರಥಮ ಆವೃತ್ತಿ ಯಶಸ್ವಿ

ಬೆಂಗಳೂರು: ಜಾಗತಿಕ ಬಂಡವಾಳದ ಹರಿವು, ಹೊಸ ತಲೆಮಾರಿನ ತಂತ್ರಜ್ಞಾನ ಆಧಾರಿತ ವ್ಯವಹಾರ ನಿರ್ವಹಣಾ ಮಾದರಿಗಳು ಹಾಗೂ ಆಧುನಿಕ ಮಾಲೀಕತ್ವದ ಪರಿಕಲ್ಪನೆಗಳ ಪ್ರಭಾವದಿಂದ ಬೆಂಗಳೂರು ನಗರದ ರಿಯಲ್ ಎಸ್ಟೇಟ್ ಕ್ಷೇತ್ರವು ವೇಗವಾಗಿ ರೂಪಾಂತರಗೊಳ್ಳುತ್ತಿದೆ. ಈ ಬದಲಾವಣೆಗಳ ನಡುವೆ ಆಸ್ತಿ ಹೂಡಿಕೆಯ ಸಾಂಪ್ರದಾಯಿಕ ವಿಧಾನಗಳು ನಿಧಾನವಾಗಿ ಹಿಂದಕ್ಕೆ ಸರಿಯುತ್ತಿದ್ದು, ಕ್ಷೇತ್ರದ ಪ್ರಸ್ತುತ ಮತ್ತು ಭವಿಷ್ಯದ ಪ್ರವೃತ್ತಿಗಳ ಕುರಿತು ಚರ್ಚಿಸಲು 'ಡೀಲ್‌ಕ್ಲೇವ್' ಎಂಬ ವಿಶೇಷ ನಾಯಕತ್ವ ವೇದಿಕೆಯ ಪ್ರಥಮ ಆವೃತ್ತಿಯನ್ನು ಜೂನ್ 15ರಂದು ಆಯೋಜಿಸಲಾಯಿತು.




ರಿಯಲ್ ಎಸ್ಟೇಟ್ ಕ್ಷೇತ್ರದ ಭವಿಷ್ಯವನ್ನು ರೂಪಿಸುವ ಸಂವಾದಗಳಿಗೆ ಚಾಲನೆ ನೀಡುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮವು ಉದ್ಯಮದ ವಿವಿಧ ವಲಯಗಳ ಪ್ರಮುಖ ಪ್ರತಿನಿಧಿಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿತು.

ಲೀಡ್ರಾಟ್ ಸಂಸ್ಥೆಯ ಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ರಿಯಲ್ ಎಸ್ಟೇಟ್ ಉದ್ಯಮಿ ಹಿಮಾಂಶು ಕುಮಾರ್ ಅವರ ಪರಿಕಲ್ಪನೆಯಾದ ಡೀಲ್‌ಕ್ಲೇವ್‌ನಲ್ಲಿ ಡೆವಲಪರ್‌ಗಳು, ದಲ್ಲಾಳಿಗಳು, ಹೂಡಿಕೆದಾರರು, ಆಸ್ತಿ ತಂತ್ರಜ್ಞಾನ ಕ್ಷೇತ್ರದ ಸಂಸ್ಥಾಪಕರು ಹಾಗೂ ಉದ್ಯಮದ ಗಣ್ಯರು ಭಾಗವಹಿಸಿದರು. ತನ್ನ ಮಾದರಿಯಲ್ಲಿ ವಿಶಿಷ್ಟವಾಗಿದ್ದ ಈ ಕಾರ್ಯಕ್ರಮವು ರಿಯಲ್ ಎಸ್ಟೇಟ್ ಪರಿಸರ ವ್ಯವಸ್ಥೆಯ ಪ್ರತಿಯೊಂದು ವಲಯವೂ ಉದ್ಯಮದ ಬೆಳವಣಿಗೆಯಲ್ಲಿ ವಹಿಸುವ ಮಹತ್ವದ ಪಾತ್ರವನ್ನು ಎತ್ತಿ ತೋರಿಸಿತು.

ಕಾರ್ಯಕ್ರಮದಲ್ಲಿ ನಡೆದ ಚರ್ಚೆಗಳು ಕ್ಷೇತ್ರಕ್ಕೆ ಅತ್ಯಂತ ಪ್ರಸ್ತುತವಾಗಿರುವ ಎರಡು ಪ್ರಮುಖ ವಿಷಯಗಳ ಮೇಲೆ ಕೇಂದ್ರೀಕೃತವಾಗಿದ್ದವು. ಮೊದಲನೆಯದಾಗಿ, ಆಸ್ತಿ ಮಾಲೀಕತ್ವವನ್ನು ಡಿಜಿಟಲ್ ಘಟಕಗಳ ರೂಪದಲ್ಲಿ ಪರಿವರ್ತಿಸುವ ವಿಧಾನ ಹಾಗೂ ಭಾಗಶಃ ಮಾಲೀಕತ್ವದ ಮಾದರಿಗಳ ವೇಗದ ಬೆಳವಣಿಗೆ ಕುರಿತು ವಿಶ್ಲೇಷಣೆ ನಡೆಸಲಾಯಿತು. ಈ ಹೊಸ ಹೂಡಿಕೆ ಮಾದರಿಗಳು ಹೆಚ್ಚಿನ ಜನರಿಗೆ ಆಸ್ತಿ ಹೂಡಿಕೆಯ ಅವಕಾಶಗಳನ್ನು ಒದಗಿಸುವುದರ ಜೊತೆಗೆ, ಪಾರದರ್ಶಕತೆ ಮತ್ತು ನಗದು ಹರಿವಿನ ಸುಧಾರಣೆಗೆ ಸಹಕಾರಿಯಾಗಲಿವೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.

ಎರಡನೆಯದಾಗಿ, ಬೆಂಗಳೂರಿನ ಮುಂದಿನ ಬೆಳವಣಿಗೆಯ ಕೇಂದ್ರಗಳ ಕುರಿತು ಚರ್ಚೆ ನಡೆಯಿತು. ಉತ್ತರ ಬೆಂಗಳೂರು ಮತ್ತು ವಿಮಾನ ನಿಲ್ದಾಣ ವಲಯ, ಸರ್ಜಾಪುರ ರಸ್ತೆ, ವೈಟ್‌ಫೀಲ್ಡ್ ಹಾಗೂ ಹೊರವರ್ತುಲ ರಸ್ತೆ ಪ್ರದೇಶಗಳು, ಹಾಗೆಯೇ ತುಮಕೂರು ರಸ್ತೆ ಮತ್ತು ಪೆರಿಫೆರಲ್ ರಿಂಗ್ ರಸ್ತೆ ಕಾರಿಡಾರ್‌ಗಳು ಅಭಿವೃದ್ಧಿ ಮತ್ತು ಹೂಡಿಕೆಯ ಪ್ರಮುಖ ಕೇಂದ್ರಗಳಾಗಿ ಹೊರಹೊಮ್ಮುತ್ತಿವೆ ಎಂದು ತಜ್ಞರು ಅಭಿಪ್ರಾಯಪಟ್ಟರು.

ಉತ್ತಮ ಮೂಲಸೌಕರ್ಯ, ಸಂಪರ್ಕ ವ್ಯವಸ್ಥೆ ಹಾಗೂ ವಾಣಿಜ್ಯ ಚಟುವಟಿಕೆಗಳ ವಿಸ್ತರಣೆಯಿಂದ ಈ ಪ್ರದೇಶಗಳು ಹೂಡಿಕೆದಾರರು ಮತ್ತು ಅಭಿವೃದ್ಧಿಪಡಿಸುವ ಸಂಸ್ಥೆಗಳ ಗಮನ ಸೆಳೆಯುತ್ತಿವೆ ಎಂದು ತಿಳಿಸಲಾಯಿತು.

ಡೀಲ್‌ಕ್ಲೇವ್‌ನ ಪ್ರಥಮ ಆವೃತ್ತಿಯು ಉದ್ಯಮದ ವಿವಿಧ ವಲಯಗಳ ನಡುವಿನ ವಿಚಾರ ವಿನಿಮಯಕ್ಕೆ ವೇದಿಕೆಯಾಗುವುದರ ಜೊತೆಗೆ, ರಿಯಲ್ ಎಸ್ಟೇಟ್ ಕ್ಷೇತ್ರದ ಭವಿಷ್ಯದ ದಿಕ್ಕು ಮತ್ತು ಹೊಸ ಅವಕಾಶಗಳ ಕುರಿತು ಅರ್ಥಪೂರ್ಣ ಸಂವಾದಗಳಿಗೆ ದಾರಿ ಮಾಡಿಕೊಟ್ಟಿತು.

## ವೇಮನ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿಯಿಂದ 24ನೇ ಪದವಿ ಪ್ರದಾನ ಸಮಾರಂಭ

ಬೆಂಗಳೂರು: ಮನುಷ್ಯರು ಕೇಳುವುದನ್ನು ಮರೆತಿರುವುದು ಅತ್ಯಂತ ದುಃಖಕರವಾಗಿದ್ದು, ಆಲಿಸುವುದು ನಿಜವಾದ ಕಲೆ. ಭವ್ಯ ಭವಿಷ್ಯಕ್ಕೆ ಮತ್ತು ಉತ್ತಮ ಬೆಳವಣಿಗೆ ಸಾಧಿಸಲು ಉತ್ತಮ ಕೇಳುಗರಾಗಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಜಸ್ಟೀಸ್ ಬಿ.ಎಸ್. ಪಾಟೀಲ್ ಕರೆ ನೀಡಿದ್ದಾರೆ.




ಕೋರಮಂಗಲದಲ್ಲಿ ಕರ್ನಾಟಕ ರೆಡ್ಡಿ ಜನಸಂಘದಿಂದ ವೇಮನ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿಯ 24 ನೇ ಪದವಿ ಪ್ರದಾನ ಸಮಾರಂಭದಲ್ಲಿ ಪದವಿ ಪ್ರದಾನ ಮಾಡಿ ಮಾತನಾಡಿದ ಅವರು, ಹಲವಾರು ವಿಚಾರಗಳು ಮನಸ್ಸಿನಲ್ಲಿದ್ದರೂ ಮೌನವಾಗಿ ಆಲಿಸಬೇಕು. ಕೇಳುವುದರಿಂದ ಆಲೋಚನಾ ಶಕ್ತಿ ಬೆಳೆಯುತ್ತದೆ. ಮನೋ ವಿಕಾಸಕ್ಕೆ ಪೂರಕವಾಗಲಿದೆ.

ಉತ್ಸಾಹಭರಿತವಾಗಿ ಅಧ್ಯಯನ ಮಾಡಬೇಕು. ತಮ್ಮ ವೃತ್ತಿಯಲ್ಲಿ ನಾವೀನ್ಯತೆಯನ್ನು ಸಾಧಿಸುವ ಕ್ರಿಯಾಶೀಲತೆಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.


ನಿಮ್ಮ ಭವಿಷ್ಯದ ವಿನ್ಯಾಸವನ್ನು ನೀವೇ ರೂಪಿಸಿಕೊಳ್ಳಬೇಕು. ಭವಿಷ್ಯದ ಬದುಕಿನ ಬಗ್ಗೆ ಸ್ಪಷ್ಟವಾದ ಚೌಕಟ್ಟು ರೂಪಿಸಿಕೊಂಡು ಅದರಂತೆ ಮುನ್ನಡೆಯಬೇಕು. ಇಲ್ಲವಾದಲ್ಲಿ ಹಾದಿ ತಪ್ಪುತ್ತೀರಿ. ಉತ್ಕೃಷ್ಟವಾದ ಸಾಧನೆ ಮಾಡುವ ಆಲೋಚನೆ ಪ್ರತಿಯೊಬ್ಬರಲ್ಲೂ ಇರಬೇಕು. ಸದಾ ಕಾಲ ಎಚ್ಚರಿಕೆಯಿಂದ ಅಧ್ಯಯನ ಮಾಡಬೇಕು.

ಕರ್ನಾಟಕ ರೆಡ್ಡಿ ಜನಸಂಘದ ಅಧ್ಯಕ್ಷ ಡಿ.ಎನ್. ಲಕ್ಷ್ಮಣ ರೆಡ್ಡಿ ಮಾತನಾಡಿ, ಪದವಿ ಪಡೆಯುವುದು ವಿದ್ಯಾರ್ಥಿಗಳ ಜೀವನದಲ್ಲಿ ಅತ್ಯಂತ ಅಮೂಲ್ಯವಾದ ಸಂದರ್ಭ. ಪದವಿ ನಿಮ್ಮ ಭವಿಷ್ಯಕ್ಕೆ ಬುನಾದಿಯಾಗಲಿ ಎಂದು ಹಾರೈಸಿದರು.

ಕರ್ನಾಟಕ ರೆಡ್ಡಿ ಜನಸಂಘದ ಉಪಾಧ್ಯಕ್ಷರಾದ ವಿ. ವೆಂಕಟಶಿವಾ ರೆಡ್ಡಿ, ಪ್ರಧಾನ ಕಾರ್ಯದರ್ಶಿ ಎನ್. ಶೇಖರ್ ರೆಡ್ಡಿ, ಜಂಟಿ ಕಾರ್ಯದರ್ಶಿ ಕೆ.ಆರ್. ನಾಗರಾಜ ರೆಡ್ಡಿ, ಪ್ರಾಂಶುಪಾಲರು, ಪ್ರಾಧ್ಯಾಪಕರು, ಮತ್ತಿತರರು ಉಪಸ್ಥಿತರಿದ್ದರು.

# 160–ವ್ಯಾಟ್ ಹೋಲ್ಮಿಯಂ ಲೇಸರ್ ತಂತ್ರಜ್ಞಾನದ ಆರಂಭ

ಬೆಂಗಳೂರು: ಟ್ರಸ್ಟ್‌ವೆಲ್ ಆಸ್ಪತ್ರೆಯು ತನ್ನ ಮೂತ್ರರೋಗ ಚಿಕಿತ್ಸಾ ವಿಭಾಗವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಅತ್ಯಾಧುನಿಕ 160–ವ್ಯಾಟ್ ಹೋಲ್ಮಿಯಂ ಲೇಸರ್ ವ್ಯವಸ್ಥೆಯನ್ನು ಆರಂಭಿಸಿದೆ. ಈ ನೂತನ ತಂತ್ರಜ್ಞಾನವು ಅತ್ಯಾಧುನಿಕ ಹಾಗೂ ಕನಿಷ್ಠ ಆಕ್ರಮಣಕಾರಿ ಚಿಕಿತ್ಸಾ ಸೇವೆಗಳನ್ನು ರೋಗಿಗಳಿಗೆ ಒದಗಿಸುವ ಆಸ್ಪತ್ರೆಯ ಬದ್ಧತೆಯ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ.



ಆಸ್ಪತ್ರೆಯಲ್ಲಿ ಅಳವಡಿಸಲಾಗಿರುವ ಈ ಉನ್ನತ ಸಾಮರ್ಥ್ಯದ ಹೋಲ್ಮಿಯಂ ಲೇಸರ್ ವ್ಯವಸ್ಥೆಯು ಮೂತ್ರಪಿಂಡದ ಕಲ್ಲುಗಳು, ಮೂತ್ರನಾಳದ ಕಲ್ಲುಗಳು, ಮೂತ್ರಕೋಶದ ಕಲ್ಲುಗಳು, ಪ್ರೋಸ್ಟೇಟ್ ಗ್ರಂಥಿಯ ವೃದ್ಧಿ, ಮೂತ್ರನಾಳದ ಸಂಕೋಚನ ಹಾಗೂ ಮೇಲ್ಭಾಗದ ಮೂತ್ರನಾಳದ ಆಯ್ದ ಗಡ್ಡೆಗಳಂತಹ ವಿವಿಧ ಮೂತ್ರರೋಗಗಳ ಚಿಕಿತ್ಸೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ನೆರವಾಗಲಿದೆ.

ಈ ಸುಧಾರಿತ ತಂತ್ರಜ್ಞಾನವು ಶಸ್ತ್ರಚಿಕಿತ್ಸೆಯ ವೇಳೆ ಹೆಚ್ಚಿನ ನಿಖರತೆ, ಕಡಿಮೆ ರಕ್ತಸ್ರಾವ, ಆಸ್ಪತ್ರೆಯಲ್ಲಿ ಕಡಿಮೆ ದಿನಗಳ ವಾಸ್ತವ್ಯ, ಶೀಘ್ರ ಚೇತರಿಕೆ, ಶಸ್ತ್ರಚಿಕಿತ್ಸೆಯ ನಂತರದ ಅಸ್ವಸ್ಥತೆಯ ಕಡಿತ ಹಾಗೂ ಉತ್ತಮ ಚಿಕಿತ್ಸಾ ಫಲಿತಾಂಶಗಳಂತಹ ಅನೇಕ ಪ್ರಯೋಜನಗಳನ್ನು ಒದಗಿಸುತ್ತದೆ.

ಈ ಸಂದರ್ಭದಲ್ಲಿ ಮಾತನಾಡಿದ ಟ್ರಸ್ಟ್‌ವೆಲ್ ಆಸ್ಪತ್ರೆಯ ಮೂತ್ರರೋಗ ತಜ್ಞ ಡಾ. ರವಿಕುಮಾರ್ ಬಿ. ಅವರು, "160–ವ್ಯಾಟ್ ಹೋಲ್ಮಿಯಂ ಲೇಸರ್ ವ್ಯವಸ್ಥೆಯ ಸೇರ್ಪಡೆಯಿಂದ ಸಂಕೀರ್ಣ ಎಂಡೋಯುರಾಲಜಿ ಚಿಕಿತ್ಸಾ ವಿಧಾನಗಳನ್ನು ಹೆಚ್ಚು ಸುರಕ್ಷಿತವಾಗಿ ಮತ್ತು ಪರಿಣಾಮಕಾರಿಯಾಗಿ ನಿರ್ವಹಿಸುವ ಸಾಮರ್ಥ್ಯ ನಮಗೆ ದೊರೆತಿದೆ. ಈ ಅತ್ಯಾಧುನಿಕ ತಂತ್ರಜ್ಞಾನವು ಕನಿಷ್ಠ ಆಕ್ರಮಣಕಾರಿ ಚಿಕಿತ್ಸೆಯನ್ನು ಸಾಧ್ಯವಾಗಿಸಿದೆ.

# 11ಒಪ್ಪಂದಗಳಿಗೆ ಮೋದಿ ಸಹಿ

ನವದೆಹಲಿ

ಪ್ರಧಾನಿ ನರೇಂದ್ರ ಮೋದಿಯವರು ಸ್ಲೋವಾಕಿಯಾಕ್ಕೆ ಭೇಟಿ ನೀಡಿದ್ದಾರೆ. ಈ ಸಂದರ್ಭದಲ್ಲಿ ಎರಡೂ ದೇಶಗಳು ತಮ್ಮ ದ್ವಿಪಕ್ಷೀಯ ಸಂಬಂಧಗಳನ್ನು ಹೊಸ ಎತ್ತರಕ್ಕೆ ಏರಿಸಿದವು. ಉಭಯ ದೇಶಗಳ ಪ್ರಧಾನಿಗಳು 11 ಒಪ್ಪಂದಗಳಿಗೆ ಸಹಿ ಹಾಕಿದ್ದಾರೆ ಮತ್ತು ಮೂರು ಪ್ರಮುಖ ಘೋಷಣೆಗಳನ್ನು ಮಾಡಿದ್ದಾರೆ. ಅದರಲ್ಲಿ ಅತ್ಯಂತ ಮಹತ್ವದ ನಿರ್ಧಾರವೆಂದರೆ ಎರಡೂ ದೇಶಗಳ ಸಂಬಂಧಗಳನ್ನು ಸಮಗ್ರ ಪಾಲುದಾರಿಕೆಗೆ ಏರಿಸುವುದು. ಎರಡೂ ದೇಶಗಳ ನಡುವಿನ ಮಾತುಕತೆಯ ನಂತರ ಬ್ರಾಟಿಸ್ಲಾವಾದಲ್ಲಿ ಜಂಟಿ ಪತ್ರಿಕಾ ಹೇಳಿಕೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಫಿಕೊ ಅವರ ಆತ್ಮೀಯ ಸ್ವಾಗತಕ್ಕೆ ಧನ್ಯವಾದ ಅರ್ಪಿಸಿದರು ಮತ್ತು ಅವರನ್ನು ಭಾರತದ ಆಪ್ತ ಸ್ನೇಹಿತ ಎಂದು ಬಣ್ಣಿಸಿದರು.

ಭಾರತ ಮತ್ತು ಸ್ಲೋವಾಕಿಯಾ ನಡುವಿನ ಬಾಂಧವ್ಯವು ಪರಸ್ಪರ ನಂಬಿಕೆ ಮತ್ತು ಸಮಾನ ಮೌಲ್ಯಗಳ ಮೇಲೆ ನಿಂತಿದೆ. ಇಂದಿನ ನಮ್ಮ ಮಾತುಕತೆಯು ಕೇವಲ ಸೌಹಾರ್ದ ಭೇಟಿಯಲ್ಲ, ಇದು ಭವಿಷ್ಯದ ದಿಕ್ಸೂಚಿಯಾಗಿದೆ. ನಾವು ಈಗಾಗಲೇ ಹಲವು ಕ್ಷೇತ್ರಗಳಲ್ಲಿ ಯಶಸ್ವಿಯಾಗಿ ಕೆಲಸ ಮಾಡಿದ್ದೇವೆ, ಆದರೆ ಈಗ ನಮ್ಮ ಆಕಾಂಕ್ಷೆಗಳು ಮತ್ತಷ್ಟು ದೊಡ್ಡದಾಗಿವೆ ಎಂದು ಮೋದಿ ಹೇಳಿದರು. ಸ್ಲೋವಾಕಿಯಾ ರಾಜಧಾನಿ ಬ್ರಾಟಿಸ್ಲಾವಾದಲ್ಲಿ ನಡೆದ ಉನ್ನತ ಮಟ್ಟದ ನಿಯೋಗದ ಸಭೆಯ ಬಳಿಕ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ರಕ್ಷಣೆ, ಹಸಿರು ಇಂಧನ ಮತ್ತು ಮುಕ್ತ ವ್ಯಾಪಾರ ಸೇರಿದಂತೆ ಹಲವು ವಲಯಗಳಲ್ಲಿ ಭಾರತ ಮತ್ತು ಸ್ಲೋವಾಕಿಯಾ ನಡುವಿನ ಹೊಸ ಕಾರ್ಯತಂತ್ರದ ಪಾಲುದಾರಿಕೆಯನ್ನು ಅನಾವರಣಗೊಳಿಸಿದರು.

ಈ ಭೇಟಿಯ ಮಹತ್ವವನ್ನು ಒತ್ತಿ ಹೇಳುತ್ತಾ, ಪ್ರಧಾನಿ ಮೋದಿ ಅವರು ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಯೋಜನೆಗಳನ್ನು ಪ್ರಕಟಿಸಿದರು. "ಇದು ಸ್ಲೋವಾಕಿಯಾಕ್ಕೆ ಭಾರತೀಯ ಪ್ರಧಾನಿಯೊಬ್ಬರು ನೀಡುತ್ತಿರುವ ಮೊದಲ ಭೇಟಿ. ಈ ಐತಿಹಾಸಿಕ ಸಂದರ್ಭದಲ್ಲಿ ನಮ್ಮ ಸಂಬಂಧವನ್ನು ಸಮಗ್ರ ಪಾಲುದಾರಿಕೆಗೆ ಏರಿಸಲು ನಾವು ನಿರ್ಧರಿಸಿದ್ದೇವೆ.

# ರೈಲು ಸಂಚಾರ ರದ್ದು

ಬೆಂಗಳೂರು

ಹೊಳೆನರಸೀಪುರ ಮತ್ತು ಮಾವಿನಕೆರೆ ರೈಲ್ವೆ ನಿಲ್ದಾಣಗಳ ನಡುವಿನ ರಸ್ತೆ ಕೆಳಸೇತುವೆ (ಆರ್‌ಯುಬಿ) ಕಾಮಗಾರಿಯ ಹಿನ್ನೆಲೆಯಲ್ಲಿ ದಕ್ಷಿಣ ಪಶ್ಚಿಮ ರೈಲ್ವೆಯು ಕೆಲವು ರೈಲುಗಳ ಸಂಚಾರವನ್ನು ತಾತ್ಕಾಲಿಕವಾಗಿ ರದ್ದು, ಭಾಗಶಃ ರದ್ದು ಹಾಗೂ ನಿಯಂತ್ರಣ ಮಾಡುವುದಾಗಿ ತಿಳಿಸಿದೆ.

ಜೂನ್ 18 ಮತ್ತು 23ರಂದು ಕೆಳಕಂಡ ರೈಲುಗಳ ಸಂಚಾರವನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗುತ್ತದೆ:

* ಅರಸೀಕೆರೆ-ಮೈಸೂರು ದೈನಂದಿನ ಪ್ಯಾಸೆಂಜರ್ ರೈಲು (ರೈಲು ಸಂಖ್ಯೆ 56267)
* ಮೈಸೂರು-ತಾಳಗುಪ್ಪ ದೈನಂದಿನ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16206)
* ತಾಳಗುಪ್ಪ-ಮೈಸೂರು ದೈನಂದಿನ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16205)

ಇದೇ ವೇಳೆ, ಜೂನ್ 18 ಮತ್ತು 23ರಂದು ಸಂಚರಿಸಲಿರುವ ಮೈಸೂರು–ಶಿವಮೊಗ್ಗ ಟೌನ್ ದೈನಂದಿನ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16225) ರೈಲನ್ನು ಮೈಸೂರು ಮತ್ತು ಅರಸೀಕೆರೆ ನಡುವಿನ ಮಾರ್ಗದಲ್ಲಿ ಭಾಗಶಃ ರದ್ದುಗೊಳಿಸಲಾಗಿದೆ. ಈ ರೈಲು ಮೈಸೂರಿನ ಬದಲಿಗೆ ಅರಸೀಕೆರೆಯಿಂದಲೇ ತನ್ನ ನಿಗದಿತ ವೇಳೆಗೆ ಹೊರಡಲಿದೆ.

ಅದರ ಜೊತೆಗೆ, ಜೂನ್ 18 ಮತ್ತು 23ರಂದು ಹೊರಡುವ ಮೈಸೂರು–ಯಶವಂತಪುರ ದೈನಂದಿನ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16208) ರೈಲಿನ ಸಂಚಾರವನ್ನು ಮಾರ್ಗಮಧ್ಯೆ ಕ್ರಮವಾಗಿ 30 ನಿಮಿಷ ಹಾಗೂ 120 ನಿಮಿಷಗಳವರೆಗೆ ನಿಯಂತ್ರಿಸಲಾಗುವುದು ಎಂದು ರೈಲ್ವೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

# ಹುಬ್ಬಳ್ಳಿ–ಚಿಕ್ಕಮಗಳೂರು ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲು ಸೇವೆ ಘೋಷಣೆ

ಬೆಂಗಳೂರು

ಪ್ರಯಾಣಿಕರ ಅನುಕೂಲ ಹಾಗೂ ಹೆಚ್ಚುವರಿ ಜನದಟ್ಟಣೆ ನಿವಾರಣೆಗೆ ನೈರುತ್ಯ ರೈಲ್ವೆಯು ಎಸ್‌ಎಸ್‌ಎಸ್ ಹುಬ್ಬಳ್ಳಿ ಮತ್ತು ಚಿಕ್ಕಮಗಳೂರು ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲು ಸೇವೆ ನಡೆಸಲು ನಿರ್ಧರಿಸಿದೆ.

ರೈಲು ಸಂಖ್ಯೆ 07341 ಎಸ್‌ಎಸ್‌ಎಸ್ ಹುಬ್ಬಳ್ಳಿ ಚಿಕ್ಕಮಗಳೂರು ವಿಶೇಷ ಎಕ್ಸ್‌ಪ್ರೆಸ್ ರೈಲು ಜೂನ್ 20 ಮತ್ತು 21, 2026 ರಂದು ಬೆಳಿಗ್ಗೆ 5:00 ಗಂಟೆಗೆ ಹುಬ್ಬಳ್ಳಿಯಿಂದ ಹೊರಟು, ಅದೇ ದಿನ ಬೆಳಿಗ್ಗೆ 11:15 ಗಂಟೆಗೆ ಚಿಕ್ಕಮಗಳೂರು ತಲುಪಲಿದೆ.

ಮರು ಪ್ರಯಾಣದಲ್ಲಿ ರೈಲು ಸಂಖ್ಯೆ 07342 ಚಿಕ್ಕಮಗಳೂರು–ಎಸ್‌ಎಸ್‌ಎಸ್ ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ರೈಲು ಜೂನ್ 20 ಮತ್ತು 21ರಂದು ಸಂಜೆ 5:30 ಗಂಟೆಗೆ ಚಿಕ್ಕಮಗಳೂರಿನಿಂದ ಹೊರಟು, ರಾತ್ರಿ 11:20 ಗಂಟೆಗೆ ಹುಬ್ಬಳ್ಳಿ ತಲುಪಲಿದೆ.

ಈ ವಿಶೇಷ ರೈಲು ಮಾರ್ಗಮಧ್ಯೆ ಕುಂದಗೋಳ, ಸಂಶಿ, ಯಳವಿಗಿ, ಹಾವೇರಿ, ರಾಣೇಬೆನ್ನೂರು, ಹರಿಹರ, ದಾವಣಗೆರೆ, ಚಿಕ್ಕಜಾಜೂರು, ರಾಮಗಿರಿ, ಅಜ್ಜಂಪುರ, ಬೀರೂರು, ಕಡೂರು, ಬಿಸ್ಲೆಹಳ್ಳಿ, ಸಖರಾಯಪಟ್ಟಣ ಹಾಗೂ ಕಣಿವೆಹಳ್ಳಿ ರೈಲು ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ.

ವಿಶೇಷ ರೈಲಿನಲ್ಲಿ ಒಟ್ಟು 10 ಬೋಗಿಗಳಿದ್ದು, ಒಂದು ಸ್ಲೀಪರ್ ಕ್ಲಾಸ್, ಏಳು ಸಾಮಾನ್ಯ ದರ್ಜೆ ಬೋಗಿಗಳು ಹಾಗೂ ಎರಡು ದ್ವಿತೀಯ ದರ್ಜೆ ಲಗೇಜ್ ಕಮ್ ಬ್ರೇಕ್ ವ್ಯಾನ್/ದಿವ್ಯಾಂಗಜನರ ಕಂಪಾರ್ಟ್‌ಮೆಂಟ್ ಬೋಗಿಗಳು ಇರಲಿವೆ ಎಂದು ನೈರುತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ.

# ಕನಕಪುರದಲ್ಲಿ ಲಹರಿಕ ನಾಟ್ಯ ಸಂಭ್ರಮ

ಕನಕಪುರ



ಕಲೆ, ಸಂಸ್ಕೃತಿ ಹಾಗೂ ಸಂಗೀತಕ್ಕೆ ಇರುವ ಬೆಲೆ ಹಣಕ್ಕಿಲ್ಲ ಎಂಬ ಮಾತು ನೂರಕ್ಕೆ ನೂರು ಸತ್ಯ. ಕಲೆ ಮತ್ತು ಸಂಗೀತ ಮನುಷ್ಯನ ಮನಸ್ಸಿಗೆ ಶಾಂತಿ, ನೆಮ್ಮದಿ ಹಾಗೂ ಭಾವನಾತ್ಮಕ ಶ್ರೀಮಂತಿಕೆಯನ್ನು ನೀಡುವ ಶಕ್ತಿ ಹೊಂದಿವೆ ಎಂದು ಶ್ರೀಕ್ಷೇತ್ರ ಮರಳೆಗವಿ ಮಠದ ಮುಮ್ಮಡಿ ಶಿವರುದ್ರ ಸ್ವಾಮೀಜಿ ಹೇಳಿದರು.

ನಗರದ ಅಂಬೇಡ್ಕರ್ ಭವನದಲ್ಲಿ ನವ್ಯ ನೃತ್ಯ ಅಕಾಡಮಿ ವತಿಯಿಂದ ಆಯೋಜಿಸಿದ್ದ "ಶ್ರೀ ಲಹರಿಕ ನಾಟ್ಯ" ಕಾರ್ಯಕ್ರಮವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದ ಅವರು, ಸಂಗೀತ ನೀಡುವ ಆನಂದವನ್ನು ಜಗತ್ತಿನ ಯಾವುದೇ ಸಂಪತ್ತಿನಿಂದ ಅಳೆಯಲು ಸಾಧ್ಯವಿಲ್ಲ ಎಂದರು. ಒತ್ತಡದ ಬದುಕಿನಲ್ಲಿ ಒಂದು ಮಧುರ ಗೀತೆ, ವಾದ್ಯ ಸಂಗೀತ ಅಥವಾ ಭರತನಾಟ್ಯ ಮನಸ್ಸಿಗೆ ಅಪಾರ ಮುದ ನೀಡುತ್ತದೆ. ಹಣದಿಂದ ಅನೇಕ ವಸ್ತುಗಳನ್ನು ಖರೀದಿಸಬಹುದಾದರೂ, ಕಲೆ ಮತ್ತು ಸಂಸ್ಕೃತಿಯಿಂದ ಸಿಗುವ ನೆಮ್ಮದಿ ಹಾಗೂ ಭಾವನಾತ್ಮಕ ಸಂತೋಷವನ್ನು ಹಣದಿಂದ ಪಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಮುಂದಿನ ಪೀಳಿಗೆಗೆ ಪ್ರಾಚೀನ ಕಲೆಯನ್ನು ಪರಿಚಯಿಸುವ ನಿಟ್ಟಿನಲ್ಲಿ ನವ್ಯ ನೃತ್ಯ ಶಾಲೆಯ ನವ್ಯಶ್ರೀ ಭರತನಾಟ್ಯವನ್ನು ಆಯ್ಕೆ ಮಾಡಿಕೊಂಡಿರುವುದು ಶ್ಲಾಘನೀಯ ಕಾರ್ಯ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ದೇಗುಲ ಮಠದ ಕಿರಿಯ ಶ್ರೀ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ ಮಾತನಾಡಿ, ಸನಾತನ ಧರ್ಮದಿಂದ ತಲೆತಲಾಂತರವಾಗಿ ಬಂದಿರುವ ಕಲೆ, ಸಂಸ್ಕೃತಿ ಹಾಗೂ ಸಂಗೀತ ನಮ್ಮ ನಾಡಿನ ಹೆಮ್ಮೆ ಎಂದು ಹೇಳಿದರು. ಇವುಗಳನ್ನು ಉಳಿಸಿ ಬೆಳೆಸಿಕೊಂಡು ಹೋಗುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಪೋಷಕರು ಮಕ್ಕಳಿಗೆ ಇದರ ಅರಿವು ಮೂಡಿಸಬೇಕು ಎಂದರು.

ಭರತನಾಟ್ಯ ಭಾರತದ ಅತ್ಯಂತ ಪ್ರಾಚೀನ ಮತ್ತು ಆಕರ್ಷಕ ಶಾಸ್ತ್ರೀಯ ನೃತ್ಯ ಪ್ರಕಾರಗಳಲ್ಲಿ ಒಂದಾಗಿದ್ದು, ಅದು ಕೇವಲ ನೃತ್ಯವಲ್ಲ; ಭಾರತೀಯ ಸಂಸ್ಕೃತಿ, ಆಧ್ಯಾತ್ಮಿಕತೆ ಮತ್ತು ಮೌಲ್ಯಗಳ ಪ್ರತಿಬಿಂಬವಾಗಿದೆ ಎಂದು ಹೇಳಿದರು. ಇಂತಹ ಕಲೆಗಳು ದೇಶದ ಸಂಸ್ಕೃತಿಯ ಬಗ್ಗೆ ಹೆಮ್ಮೆ ಮತ್ತು ಗೌರವವನ್ನು ಹೆಚ್ಚಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಬೆಂಗಳೂರು ಕಬ್ಬನ್ ಪಾರ್ಕ್ ಸಹಾಯಕ ಪೊಲೀಸ್ ಆಯುಕ್ತೆ ಪ್ರಿಯದರ್ಶಿನಿ ಈಶ್ವರ್ ಸಾಣಿಕೊಪ್ಪ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಿಗೂ ಭರತನಾಟ್ಯದಂತಹ ಶ್ರೇಷ್ಠ ಕಲೆಯನ್ನು ಪರಿಚಯಿಸುತ್ತಿರುವುದು ಅರ್ಥಪೂರ್ಣ ಕಾರ್ಯ ಎಂದರು. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಸೃಜನಶೀಲತೆ, ಆತ್ಮವಿಶ್ವಾಸ ಮತ್ತು ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗುತ್ತವೆ ಎಂದು ಹೇಳಿದರು.

ಮನುಷ್ಯ ತನ್ನ ಜೀವನದಲ್ಲಿ ಸತ್ಯಾಸತ್ಯತೆಯನ್ನು ಅರಿತು ಪ್ರಾಮಾಣಿಕತೆ ಹಾಗೂ ನೈತಿಕ ಮೌಲ್ಯಗಳೊಂದಿಗೆ ಬದುಕಬೇಕು. ಅನಾವಶ್ಯಕವಾಗಿ ಮಾತನಾಡದೇ, ಅಗತ್ಯವಿದ್ದಾಗ ಮಾತ್ರ ಸತ್ಯವನ್ನು ಹೇಳುವ ಗುಣ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಸಾರ್ವಜನಿಕರು ಪೊಲೀಸ್ ತುರ್ತು ಸೇವೆಗಾಗಿ 100 ಬದಲಾಗಿ 112 ಸಹಾಯವಾಣಿ ಸಂಖ್ಯೆಗೆ ಕರೆ ಮಾಡುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ನೃತ್ಯ ಶಾಲೆಯ ಹತ್ತುಕ್ಕೂ ಹೆಚ್ಚು ತಂಡಗಳು ಕಂಸಾಳೆ, ಸಿದ್ದಪ್ಪಾಜಿ, ಧರಣಿ ಮಂಡಲ ಮಧ್ಯದೊಳಗೆ, ಶಿವತಾಂಡವ ಹಾಗೂ ರಾಮಭಜನೆ ಸೇರಿದಂತೆ ಹಲವು ಹಾಡುಗಳಿಗೆ ನೃತ್ಯ ಪ್ರದರ್ಶಿಸಿ ಪ್ರೇಕ್ಷಕರ ಮನಸೂರೆಗೊಂಡವು.

ಶಿವಗಿರಿ ಕ್ಷೇತ್ರದ ಅನ್ನದಾನೇಶ್ವರನಾಥ ಸ್ವಾಮೀಜಿ ಆಶೀರ್ವಚನ ನೀಡಿದರು. ನೃತ್ಯ ನಿರ್ದೇಶಕಿ ಕಾವ್ಯ ದಿಲೀಪ್, ನಾಟಕ ನಿರ್ದೇಶಕ ಜಗದೀಶ್ವರಚಾರ್ಯ, ನೃತ್ಯ ಶಾಲೆಯ ಕೆ.ಎಂ. ನವ್ಯಶ್ರೀ, ಕಲ್ಪನಾ, ಮಹದೇವಪ್ರಸಾದ್ ಸೇರಿದಂತೆ ಹಲವಾರು ಕಲಾಭಿಮಾನಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# 'ಆಗ್ನೇಯ ಪದವೀಧರರ ಕ್ಷೇತ್ರದ ಅಭಿವೃದ್ಧಿಗೆ ನಾನೇ ಬದ್ಧ'

ಬೇತಮಂಗಲ



ಆಗ್ನೇಯ ಪದವೀಧರರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಕ್ಯಾಸಂಬಳ್ಳಿ ಹೋಬಳಿಯ ತೂಕಲ್ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿ, ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟದ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚುನಾವಣೆಯಲ್ಲಿ ಜಯಗಳಿಸಿದ ಬಳಿಕ ವಿಧಾನ ಪರಿಷತ್‌ನಲ್ಲಿ ಪದವೀಧರರು ಹಾಗೂ ಶಿಕ್ಷಕರ ಸಮಸ್ಯೆಗಳಿಗೆ ಧ್ವನಿಯಾಗಿ ಕೆಲಸ ಮಾಡುವುದಾಗಿ ಭರವಸೆ ನೀಡಿದ ಅವರು, ಪ್ರಸ್ತುತ ಸರ್ಕಾರ ಉದ್ಯೋಗ ಸೃಷ್ಟಿಯಲ್ಲಿ ವಿಫಲವಾಗಿದೆ ಮತ್ತು ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುತ್ತಿಲ್ಲ ಎಂದು ಟೀಕಿಸಿದರು.

ಪದವೀಧರರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಎನ್‌ಡಿಎ ಮೈತ್ರಿಕೂಟದ ಬೆಂಬಲ ಅಗತ್ಯವಿದೆ ಎಂದು ಹೇಳಿದರು.

ತಮ್ಮ ಪ್ರಣಾಳಿಕೆಯ ಭಾಗವಾಗಿ ಶಿಕ್ಷಣ ಮತ್ತು ಉದ್ಯೋಗಕ್ಕೆ ಹೆಚ್ಚಿನ ಆದ್ಯತೆ ನೀಡುವುದಾಗಿ ತಿಳಿಸಿದ ಅವರು, ಐದು ಜಿಲ್ಲೆಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸ್ವಂತ ವೆಚ್ಚದಲ್ಲಿ ಇ–ಗ್ರಂಥಾಲಯ ಸ್ಥಾಪನೆ ಮಾಡುವುದಾಗಿ ಘೋಷಿಸಿದರು.

ಅಲ್ಲದೆ, ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಉದ್ಯೋಗ ಮೇಳಗಳನ್ನು ಆಯೋಜಿಸುವ ಮೂಲಕ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವತ್ತ ಗಮನ ಹರಿಸಲಾಗುವುದು ಎಂದು ಭರವಸೆ ನೀಡಿದರು.

ಕ್ಷೇತ್ರಾದ್ಯಂತ ಪ್ರವಾಸ ನಡೆಸುವ ವೇಳೆ ಕಾರ್ಯಕರ್ತರು ಹಾಗೂ ಪದವೀಧರರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದ ಅವರು, ಇದು ವ್ಯಕ್ತಿಗತ ಚುನಾವಣೆಯಲ್ಲ, ಸಂಘಟನೆಯ ಶಕ್ತಿಯ ಮೇಲೆ ನಡೆಯುತ್ತಿರುವ ಹೋರಾಟವಾಗಿದೆ ಎಂದು ಹೇಳಿದರು.

ಈ ಮಹತ್ವದ ಚುನಾವಣೆಯಲ್ಲಿ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



ಕೇಂದ್ರದ ಮಾಜಿ ಸಚಿವ ಪಲ್ಲಂ ರಾಜು, ರಾಜ್ಯದ ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಪಕ್ಷದ ಶಾಸಕರು, ಮುಖಂಡರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾದರು.

# ಕೆನಡಾದಲ್ಲಿ ಪುತ್ತಿಗೆ ಶ್ರೀಗಳಿಗೆ ಪೌರಸನ್ಮಾನ

ಟೊರೊಂಟೋ



ತಮ್ಮ ಚತುರ್ಥ ಪರ್ಯಾಯವನ್ನು ಅತ್ಯಂತ ಯಶಸ್ವಿಯಾಗಿ ನೆರವೇರಿಸಿದ ಬಳಿಕ ಮೊದಲ ಬಾರಿಗೆ ಕೆನಡಾ ದೇಶಕ್ಕೆ ಆಗಮಿಸಿದ ಪೂಜ್ಯ ಪುತ್ತಿಗೆ ಶ್ರೀಪಾದರಿಗೆ ಟೊರೊಂಟೋ ಮಹಾನಗರದಲ್ಲಿ ನೂರಾರು ಭಕ್ತರು ಭವ್ಯ ಸ್ವಾಗತ ಕೋರಿದರು.

ಗೀತಾಪಾರಾಯಣ, ವೃಂದಗಾನ, ಭಜನೆ, ಭರತನಾಟ್ಯ ಹಾಗೂ ವೇದಘೋಷಗಳ ನಡುವೆ ಪೂಜ್ಯ ಶ್ರೀಪಾದರನ್ನು ಭಕ್ತರು ಆತ್ಮೀಯವಾಗಿ ಬರಮಾಡಿಕೊಂಡರು. ಕಾರ್ಯಕ್ರಮದ ಅಂಗವಾಗಿ ನಡೆದ ಪೌರ ಸಮ್ಮಾನ ಸಮಾರಂಭದಲ್ಲಿ ಸ್ಥಳೀಯ ಸಂಸದೆ ಹಾಗೂ ಕೇಂದ್ರ ಸಚಿವೆ ಶ್ರೀಮತಿ ಕ್ರಿಸ್ಟಿನಾ ಡೆರ್ಕ್‌ಸನ್ ಅವರು ಕೆನಡಾ ಸರ್ಕಾರದ ಪರವಾಗಿ ಪೂಜ್ಯ ಶ್ರೀಗಳಿಗೆ ಅಭಿನಂದನಾ ಪತ್ರವನ್ನು ಸಮರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವೆ ಕ್ರಿಸ್ಟಿನಾ ಡೆರ್ಕ್‌ಸನ್, ಪೂಜ್ಯ ಶ್ರೀಪಾದರು ವಿಶ್ವದಾದ್ಯಂತ ಸಂಚರಿಸಿ ಶಾಂತಿ ಮತ್ತು ಸೌಹಾರ್ದತೆಯ ಸಂದೇಶವನ್ನು ಹರಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದು ಹೇಳಿದರು. ಜೊತೆಗೆ ಕೆನಡಾ ದೇಶದ ಅಭಿವೃದ್ಧಿಗೆ ಸ್ಥಳೀಯ ಹಿಂದೂ ಸಮುದಾಯದ ಕೊಡುಗೆ ಅಪಾರವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಟೊರೊಂಟೋ ಮಹಾನಗರದ ಪುರಸಭೆ ಕೌನ್ಸಿಲರ್ ಶ್ರೀ ಜೇಸನ್ ಕೂಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಭಕ್ತರಿಂದ ಭಾವಪೂರ್ಣ ಸನ್ಮಾನ ಸ್ವೀಕರಿಸಿದ ಬಳಿಕ ಆಶೀರ್ವಚನ ನೀಡಿದ ಪೂಜ್ಯ ಶ್ರೀಪಾದರು, "ಭಕ್ತಿಗಿಂತ ಮಿಗಿಲಾದ ಶಕ್ತಿ ಭೂಮಿಯಲ್ಲಿ ಮತ್ತೊಂದಿಲ್ಲ. ಭಕ್ತಿಯುತ ಪೂಜೆ, ಸೇವೆ ಮತ್ತು ಪ್ರಾರ್ಥನೆಗಳು ಭಗವಂತನನ್ನು ಖಂಡಿತವಾಗಿ ಒಲಿಸುತ್ತವೆ. ದೇವರ ಅನುಗ್ರಹ ಪಡೆದವರಿಗೆ ಅಸಾಧ್ಯವೆಂಬುದೇ ಇಲ್ಲ. ಅದೇ ನಮ್ಮ ಯಶಸ್ಸಿನ ಮೂಲ ಸತ್ಯ" ಎಂದು ಹೇಳಿದರು.

"ನಿಮ್ಮ ಭಕ್ತಿ ಭಾವಯುಕ್ತ ಪ್ರಾರ್ಥನೆಯೇ ಉಡುಪಿಯ ಶ್ರೀಕೃಷ್ಣನನ್ನು ಕೆನಡಾಕ್ಕೆ ಕರೆತಂದಿದೆ. ಅವನ ಸೇವೆಗಾಗಿ ನಮ್ಮನ್ನೂ ಇಲ್ಲಿಗೆ ಬರುವಂತೆ ಮಾಡಿದೆ" ಎಂದು ಅವರು ತಿಳಿಸಿದರು.

ಎಲ್ಲ ಭಕ್ತರ ಪರವಾಗಿ ಶ್ರೀ ಜಗನ್ನಾಥ ರಾವ್, ಶ್ರೀ ರಮೇಶ್ ಬೆಂಗಳೂರು ಹಾಗೂ ಶ್ರೀ ಜ್ಞಾನಚಂದ್ರನ್ ರಾಸಲಿಂಗಂ ಅವರು ಮಾತನಾಡಿ ನುಡಿನಮನ ಸಲ್ಲಿಸಿದರು.

ಡಾ. ಯೋಗೀಂದ್ರ ಭಟ್ ಉಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮತಿ ರತ್ನ ಹಾಗೂ ಶ್ರೀ ಹರೀಶ್ ರಾವ್ ಅವರು ಶ್ರೀಮಠದ ಪ್ರಸ್ತಾವಿತ ಅಭಿವೃದ್ಧಿ ಯೋಜನೆಗಳ ಕುರಿತು ಸಭೆಗೆ ವಿವರಿಸಿದರು.

ಶ್ರೀಮಠದ ಪ್ರಧಾನ ಅರ್ಚಕರಾದ ಶ್ರೀ ರಾಘವೇಂದ್ರ ದೇಸಾಯಿ, ಶ್ರೀ ಸಂದೇಶ್ ಮೂಡತ್ತಾಯ ಹಾಗೂ ಶ್ರೀ ಚಿಂತನ್ ವೇದಘೋಷ ನೆರವೇರಿಸಿದರು.

ಶ್ರೀಮತಿ ಸುಜಾತಾ ನರಸಿಂಹ, ಶ್ರೀಮತಿ ವೀಣಾ ಕವಳೆ, ಶ್ರೀ ಕಿಶೋರ್ ಶೆಟ್ಟಿ, ಶ್ರೀ ನಿತಿನ್ ರಾವ್ ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಶ್ರೀ ಅಕ್ಷಯ್ ಕಾರ್ಯಕ್ರಮ ನಿರೂಪಿಸಿದರು.

# ಬಂಗಾರಪೇಟೆ ನಗರಸಭೆಯ 31 ವಾರ್ಡ್‌ಗಳ ಅಂತಿಮ

## ಪುನರ್‌ವಿಂಗಡಣೆ ಅಧಿಸೂಚನೆ ಪ್ರಕಟ

ಬಂಗಾರಪೇಟೆ

ಕೋಲಾರ ಜಿಲ್ಲೆಯ ಬಂಗಾರಪೇಟೆ ಪುರಸಭೆಯನ್ನು ಕರ್ನಾಟಕ ಸರ್ಕಾರದ 2025ರ ಡಿಸೆಂಬರ್ 31ರ ಅಧಿಸೂಚನೆಯ ಅನ್ವಯ ನಗರಸಭೆಯಾಗಿ ಮೇಲ್ದರ್ಜೆಗೇರಿಸಿದ ಹಿನ್ನೆಲೆಯಲ್ಲಿ, 2011ರ ಜನಗಣತಿ ಆಧಾರದ ಮೇಲೆ ಬಂಗಾರಪೇಟೆ ನಗರಸಭೆ ವ್ಯಾಪ್ತಿಯನ್ನು 31 ಏಕಸದಸ್ಯ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳಾಗಿ (ವಾರ್ಡ್‌ಗಳಾಗಿ) ಪುನರ್‌ವಿಂಗಡಿಸಿ ಅಂತಿಮ ಅಧಿಸೂಚನೆ ಪ್ರಕಟಿಸಲಾಗಿದೆ.

ಈ ಸಂಬಂಧ ಕರಡು ಅಧಿಸೂಚನೆಯನ್ನು 2026ರ ಮಾರ್ಚ್ 12ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿ ಸಾರ್ವಜನಿಕರಿಂದ 18 ದಿನಗಳೊಳಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಆದರೆ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಡಾ. ಎ.ಆರ್. ರವಿ ಅವರು ಅಂತಿಮ ಅಧಿಸೂಚನೆಯನ್ನು ಹೊರಡಿಸಿದ್ದಾರೆ.

ಪುನರ್‌ವಿಂಗಡಣೆಯ ಪ್ರಕಾರ ಗಂಗಮ್ಮನಪಾಳ್ಯ, ಖಾದರ್ ಸಾಬ್ ಬಡಾವಣೆ, ಸಿ. ರಹೀಂ ನಗರ 1 ಮತ್ತು 2, ಸೇಟ್ ಕಾಂಪೌಂಡ್–1, 2 ಮತ್ತು 3, ಗಾಂಧಿನಗರ, ಕುಂಬಾರಪಾಳ್ಯ–ಸಂಜಯ್ ಗಾಂಧಿ ನಗರ, ಇಂದಿರಾ ಆಶ್ರಯ ಬಡಾವಣೆ, ವಿವೇಕಾನಂದ ನಗರ–1 ಮತ್ತು 2, ಶ್ರೀನಿವಾಸಗೌಡ ಬಡಾವಣೆ, ಶಾಂತಿನಗರ, ವಿಜಯನಗರ–1, 2 ಮತ್ತು 3, ಗೌತಮ್ ನಗರ, ಬೋವಿ ನಗರ, ನ್ಯೂಟೌನ್–1 ಮತ್ತು 2, ಓಲ್ಡ್ ಟೌನ್–1 ಮತ್ತು 2, ಕುಪ್ಪಸ್ವಾಮಿ ಮೊದಲಿಯಾರ್ ಬಡಾವಣೆ, ಫಲವತಿಮ್ಮನಹಳ್ಳಿ, ದೇಶಿಹಳ್ಳಿ–1 ಮತ್ತು 2, ಅಮರಾವತಿ ನಗರ–1 ಮತ್ತು 2 ಹಾಗೂ ಕೆರೆಕೋಡಿ ಸೇರಿದಂತೆ ಒಟ್ಟು 31 ವಾರ್ಡ್‌ಗಳನ್ನು ನಿಗದಿಪಡಿಸಲಾಗಿದೆ.

ಈ ಪುನರ್‌ವಿಂಗಡಣೆ ಮುಂದಿನ ನಗರಸಭೆ ಚುನಾವಣೆಗೆ ಅನ್ವಯವಾಗಲಿದ್ದು, ಪ್ರತಿ ವಾರ್ಡ್‌ನ ಗಡಿಗಳನ್ನು ಅಧಿಸೂಚನೆಯಲ್ಲಿ ವಿವರವಾಗಿ ನಿರ್ದಿಷ್ಟಪಡಿಸಲಾಗಿದೆ. ಅಂತಿಮ ಆದೇಶವನ್ನು ಜಿಲ್ಲಾಧಿಕಾರಿ ಡಾ. ಎ.ಆರ್. ರವಿ ಅವರು ಜಾರಿಗೊಳಿಸಿದ್ದಾರೆ.

# ಸಮರ್ಪಕ ಬಿತ್ತನೆ ಬೀಜ ಪೂರೈಕೆಗೆ ಸಿಎಂ ಸೂಚನೆ

ಬೇತಮಂಗಲ

ಕೃಷಿ ಇಲಾಖೆ ಅಧೀನದಲ್ಲಿರುವ ಐದು ನಿಗಮ ಹಾಗೂ ಮಂಡಳಿಗಳ ಸ್ಥಿತಿಗತಿ ಕುರಿತು ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿದರು. ರೈತರಿಗೆ ನೀಡಲಾಗುತ್ತಿರುವ ಸಬ್ಸಿಡಿ ಸೌಲಭ್ಯಗಳು ಎಷ್ಟರ ಮಟ್ಟಿಗೆ ಪ್ರಯೋಜನಕಾರಿಯಾಗಿವೆ ಎಂಬುದರ ಕುರಿತು ಪರಿಶೀಲನೆ ನಡೆಸಿ ವರದಿ ನೀಡಲು ಆದೇಶಿಸಿದರು.

ರಾಜ್ಯದಲ್ಲಿರುವ ಶೀತಲೀಕರಣ ಗೋದಾಮುಗಳು ಹಾಗೂ ಗೋದಾಮುಗಳ ಪಟ್ಟಿ ಸಿದ್ಧಪಡಿಸುವಂತೆ ಸೂಚಿಸಿದರು. ಕೆಪೆಕ್ ಮೂಲಕ ರಫ್ತು ಪ್ರಮಾಣ ಹೆಚ್ಚಿಸಲು ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ಪಡೆದು, ರಫ್ತು ಉತ್ತೇಜನಕ್ಕೆ ವಿಶೇಷ ಯೋಜನೆ ರೂಪಿಸಲು ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್ ಹಾಗೂ ತುಷಾರ ಗಿರಿನಾಥ್ ಅವರಿಗೆ ನಿರ್ದೇಶನ ನೀಡಿದರು.

ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಗಳ ಅನುಷ್ಠಾನ ಕುರಿತೂ ಸಮಗ್ರ ವರದಿ ಸಲ್ಲಿಸುವಂತೆ ಸೂಚಿಸಿ, ಕೇಂದ್ರದಿಂದ ಹೆಚ್ಚಿನ ಸಹಕಾರ ಮತ್ತು ಅನುದಾನ ಪಡೆಯಲು ಒತ್ತಡ ಹೇರಬೇಕೆಂದರು.

ಸಹಕಾರ ಮತ್ತು ಕೃಷಿ ಮಾರುಕಟ್ಟೆ ಇಲಾಖೆಗೆ ಸಂಬಂಧಿಸಿದಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಜಾಗಗಳನ್ನು ಸುರಕ್ಷಿತಗೊಳಿಸಲು ಕಾಂಪೌಂಡ್ ನಿರ್ಮಿಸುವಂತೆ ಸೂಚಿಸಿದರು. ಎಪಿಎಂಸಿ ವ್ಯವಸ್ಥೆಗಳು ರೈತರಿಗೆ ಸಮರ್ಪಕವಾಗಿ ಉಪಯೋಗವಾಗುತ್ತಿವೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವಂತೆ ಹೇಳಿದರು.

ಸಹಕಾರ ಇಲಾಖೆಯ ಅಡಿಯಲ್ಲಿ ಬಾಕಿ ಇರುವ ಎಲ್ಲಾ ಸಂಸ್ಥೆಗಳ ಚುನಾವಣೆಯನ್ನು ನಡೆಸುವಂತೆ ಸೂಚಿಸಿದ ಅವರು, ಕಾಸ್ಕಾರ್ಡ್ ಬ್ಯಾಂಕ್‌ಗಳಲ್ಲಿ ಬಡ್ಡಿರಹಿತ ಸಾಲ ಸೌಲಭ್ಯ ದುರುಪಯೋಗವಾಗುತ್ತಿರುವ ಕುರಿತು ರೈತರು ದೂರು ನೀಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಐದು ಲಕ್ಷ ರೂಪಾಯಿವರೆಗಿನ ಬಡ್ಡಿರಹಿತ ಸಾಲ ಸೌಲಭ್ಯ ನಿಜವಾದ ಫಲಾನುಭವಿಗಳಿಗೆ ತಲುಪುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.


ಈ ವರ್ಷ ರಾಜ್ಯದಲ್ಲಿ 1068 ಕೋಟಿ ರೂಪಾಯಿ ಮೌಲ್ಯದ ಮಾವು ಬೆಳೆ ನಾಶವಾಗಿದ್ದು, ಇದರಲ್ಲಿ 25 ಶೇಕಡಾ ಅಂದರೆ 229 ಕೋಟಿ ರೂಪಾಯಿ ಪರಿಹಾರ ನೀಡಬೇಕಾಗಿದೆ. ರಾಜ್ಯ ಸರ್ಕಾರ 114 ಕೋಟಿ ಹಾಗೂ ಕೇಂದ್ರ ಸರ್ಕಾರ 115 ಕೋಟಿ ರೂಪಾಯಿ ಪರಿಹಾರ ಭರಿಸಬೇಕಿದ್ದು, ಕಾನೂನು ಪ್ರಕಾರ ಮಾವು ಬೆಳೆಗಾರರಿಗೆ ಪರಿಹಾರ ಸಿಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಸೂಚಿಸಿದರು.

ಎಪಿಎಂಸಿ ಆವರ್ತ ನಿಧಿಯ ಸಮರ್ಪಕ ಬಳಕೆಗೂ ಒತ್ತು ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಗೃಹಲಕ್ಷ್ಮಿ ಕಡಿತ ಸರಿಯಲ್ಲ: ಬಿವೈವಿ

ಶಿವಮೊಗ್ಗ

ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಸಾಧ್ಯವಾಗದೆ ಇದೀಗ ಲಕ್ಷಾಂತರ ಫಲಾನುಭವಿಗಳನ್ನು ಕಡಿತ ಮಾಡಲು ರಾಜ್ಯ ಸರ್ಕಾರ ಮುಂದಾಗಿರುವುದು ಸರಿಯಲ್ಲ ಎಂದು ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆಕ್ಷೇಪಿಸಿದರು.



ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರವು ತಾನೇ ಘೋಷಿಸಿದ್ದ ಗ್ಯಾರಂಟಿ ಯೋಜನೆಗಳ ಬಗ್ಗೆ ಪರಸ್ಪರ ವಿರೋಧಾಭಾಸದ ಹೇಳಿಕೆಗಳನ್ನು ನೀಡುತ್ತಿದ್ದು, ಈಗ ಯೋಜನೆಗಳ ಮಾನದಂಡಗಳನ್ನು ಬದಲಾಯಿಸುವ ಕೆಲಸಕ್ಕೂ ಕೈ ಹಾಕಿದೆ ಎಂದು ಟೀಕಿಸಿದರು.

"ಚುನಾವಣೆಯ ವೇಳೆ ಪ್ರತಿಯೊಬ್ಬ ಮಹಿಳೆಗೂ ಗೃಹಲಕ್ಷ್ಮಿ ಯೋಜನೆಯಡಿ ನೆರವು ನೀಡುವುದಾಗಿ ಘೋಷಿಸಿದ್ದರು. ವಿವಿಧ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಭರವಸೆ ನೀಡಿದ್ದರು. ಈಗ ಆ ಮಾತಿನಿಂದ ಹಿಂದೆ ಸರಿಯುವ ಪ್ರಯತ್ನ ನಡೆಯುತ್ತಿದೆ" ಎಂದು ಹೇಳಿದರು. ಗ್ಯಾರಂಟಿ ಯೋಜನೆಗಳ ಕುರಿತು ನೀಡಿದ ಭರವಸೆಗಳನ್ನು ಈಡೇರಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದ್ದು, ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು ಮುಖ್ಯಮಂತ್ರಿ ಸ್ಪಷ್ಟನೆ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

"ರಾಜ್ಯದ ಹಣಕಾಸು ಪರಿಸ್ಥಿತಿ ಕುರಿತು ಶ್ವೇತಪತ್ರ ಹೊರಡಿಸಬೇಕು ಎಂಬ ಬೇಡಿಕೆಯನ್ನು ನಾವು ಹಿಂದಿನ ಮುಖ್ಯಮಂತ್ರಿಗಳ ಮುಂದೆಯೂ ಇಟ್ಟಿದ್ದೆವು. ಅದು ಆಗಲಿಲ್ಲ. ಈಗಲಾದರೂ ಮುಖ್ಯಮಂತ್ರಿ ಮತ್ತು ಹಣಕಾಸು ಸಚಿವರು ರಾಜ್ಯದ ಆರ್ಥಿಕ ಸ್ಥಿತಿಗತಿ ಬಗ್ಗೆ ವಾಸ್ತವಾಂಶಗಳನ್ನು ಜನರ ಮುಂದಿಡಬೇಕು" ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಕಡಿತಕ್ಕೆ ಕುಂಟು ನೆಪ ಹುಡುಕುತ್ತಿದೆ ಎಂದು ಆರೋಪಿಸಿದ ವಿಜಯೇಂದ್ರ, "ಹಿಮಾಚಲ ಪ್ರದೇಶ ಹಾಗೂ ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಕಾಂಗ್ರೆಸ್ ಸರ್ಕಾರಗಳು ಸಂಕಷ್ಟ ಎದುರಿಸುತ್ತಿವೆ. ಸರ್ಕಾರಿ ನೌಕರರಿಗೆ ಸಂಬಳ ನೀಡಲೂ ಕಷ್ಟವಾಗಿರುವ ಸ್ಥಿತಿ ನಿರ್ಮಾಣವಾಗಿದೆ. ಕರ್ನಾಟಕದಲ್ಲೂ ಅದೇ ಪರಿಸ್ಥಿತಿ ಎದುರಾಗುತ್ತಿದೆ" ಎಂದು ಹೇಳಿದರು.

"ಈಗ ಒಂದೊಂದೇ ನೆಪ ಹೇಳಿ ಗ್ಯಾರಂಟಿ ಯೋಜನೆಗಳಿಗೆ ಕತ್ತರಿ ಹಾಕುವ ಕೆಲಸ ನಡೆಯುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ಜನರು ಕೇಳಿರಲಿಲ್ಲ. ಕಾಂಗ್ರೆಸ್ ಪಕ್ಷವೇ ಚುನಾವಣೆಯಲ್ಲಿ ಘೋಷಿಸಿತ್ತು. ಈಗ ಅದೇ ಫಲಾನುಭವಿಗಳಿಗೆ ಅಪಮಾನ ಮಾಡುವ ರೀತಿಯಲ್ಲಿ ಸರ್ಕಾರ ನಡೆದುಕೊಳ್ಳುತ್ತಿದೆ" ಎಂದು ಟೀಕಿಸಿದರು.

17/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಜಾತಿ ಪ್ರಮಾಣಪತ್ರ ನೀಡುವಂತೆ ಆಗ್ರಹ



ಕೋಲಾರ

ಬಡತನದ ಬೇಗೆಯಲ್ಲಿ ಬೆಂದಿರುವ ಅಲೆಮಾರಿ ಬುಡ್ಗ ಜಂಗಮ್ ಹಾಗು ಚನ್ನದಾಸರ್ ಸಮುದಾಯದ ಮಕ್ಕಳ ಉನ್ನತ ವ್ಯಾಸಂಗ ಹಾಗೂ ಉಜ್ವಲ ಭವಿಷ್ಯಕ್ಕೆ ಕೂಡಲೇ ಜಾತಿ ಪ್ರಮಾಣ ಪತ್ರ ವಿತರಿಸಬೇಕು ಎಂದು ಆಗ್ರಹಿಸಿ ನಡೆಸುತ್ತಿರುವ ನಮ್ಮ ಹೋರಾಟ ನಿರಂತರವಾಗಿ ಮುಂದುವರೆಯಲಿದೆ ಎಂದು ಸಮುದಾಯದ ಯುವ ಮುಖಂಡ ಅಭಿಜಿತ್ ಗೌಡ ತಿಳಿಸಿದರು.

ಸದರಿ ಸಮುದಾಯದವರೇ ಹೆಚ್ಚಿರುವ ಜಿಲ್ಲೆಯ ಮಾಲೂರು ತಾಲೂಕು ಲಕ್ಷ್ಮೀಸಾಗರದ ಶಾಲಾ ಆವರಣದಲ್ಲಿ ಬುಡ್ಗ ಜಂಗಮ್ ಮತ್ತು ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ನಡೆಯುತ್ತಿರುವ ನಿರಂತರ ಧರಣಿಯಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ಶಾಸಕ ಕೊತ್ತೂರು ಮಂಜುನಾಥ್ ಅವರು ಬುಡ್ಗ ಜಂಗಮ ಜಾತಿಯಲ್ಲದಿದ್ದರೂ ಪ್ರಮಾಣ ಪತ್ರ ಪಡೆದಿದ್ದ ಹಿನ್ನಲೆಯಲ್ಲಿ ವಿವಾದ ಕೋರ್ಟ್ ಮೆಟ್ಟಿಲೇರಿದೆ. ಸದರಿ ಜಾತಿ ಪ್ರಮಾಣ ಪತ್ರ ವಿವಾದವೇ ಈ ಸಮುದಾಯ ಪ್ರಮಾಣ ಪತ್ರ ಪಡೆದುಕೊಳ್ಳಲು ಅಡ್ಡಿಯಾಗಿದ್ದು, ಕಳೆದ 2012 ರಿಂದಲೂ ಜಾತಿ ಪ್ರಮಾಣ ಪತ್ರ ಸಿಗದೇ ಸಮುದಾಯ ಸರ್ಕಾರದ ವಿವಿಧ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ ಎಂದು ತಿಳಿಸಿದರು.

ಕೊತ್ತೂರು ಮಂಜುನಾಥ್ ಅವರು ಮಾಡಿದ ತಪ್ಪಿಗೆ ಜಿಲ್ಲಾಡಳಿತ ಇಡೀ ಬುಡ್ಗ ಜಂಗಮ ಸಮುದಾಯಕ್ಕೆ ಜಾತಿ ಪ್ರಮಾಣ ಪತ್ರ ನೀಡದೇ ರದ್ದುಗೊಳಿಸಿದೆ, ಇದರಿಂದ ನಮಗೂ ಜಾತಿ ಪ್ರಮಾಣಪತ್ರವಿಲ್ಲ, ನಮ್ಮ ಮಕ್ಕಳಿಗೂ ಇಲ್ಲ, ಹೀಗಾಗಿ ಅವರ ಭವಿಷ್ಯದ ದೃಷ್ಟಿಯಿಂದ ಹೋರಾಟ ಅನಿವಾರ್ಯವಾಗಿದೆ ಎಂದರು.

ಕೋರ್ಟ್‌ನಲ್ಲಿ 2012 ರಿಂದಲೂ ಶಾಸಕರ ಜಾತಿ ಪ್ರಮಾಣಪತ್ರದ ಕೇಸ್ ಮುಂದುವರೆದಿದ್ದು, ಇಡೀ ಸಮುದಾಯಕ್ಕೆ ಪ್ರಮಾಣ ಪತ್ರ ಸಿಗುತ್ತಿಲ್ಲ ಯಾರೋ ಒಬ್ಬರು ಮಾಡಿರುವ ತಪ್ಪಿಗೆ ಇಡೀ ಸಮುದಾಯ ತೊಂದರೆಗೆ ಒಳಗಾಗಿದೆ, ಕಳೆದ 13 ವರ್ಷಗಳಿಂದ ಸರ್ಕಾರದ ವಸತಿ ಯೋಜನೆಗಳು ಸೇರಿದಂತೆ ಯಾವುದೇ ಸೌಲಭ್ಯಗಳು ನಮಗೆ ಸಿಕ್ಕಿಲ್ಲ ಎಂದು ಕಿಡಿಕಾರಿದರು.

ಜಾತಿ ಪ್ರಮಾಣಪತ್ರವಿಲ್ಲದ ಕಾರಣ ನಮ್ಮ ಮಕ್ಕಳಿಗೆ ವಿದ್ಯಾರ್ಥಿವೇತನ ಸೇರಿದಂತೆ ಯಾವುದೇ ಸೌಲಭ್ಯಗಳು ಸಿಗದ ಕಾರಣ ಮಕ್ಕಳನ್ನು ಶಾಲೆಗೆ ದಾಖಲಿಸುತ್ತಿಲ್ಲ, ಅವರು ಓದಿದರೆ ನಂತರ ಕೂಲಿ ಮಾಡುವುದು ತಪ್ಪಲ್ಲ ಎಂದು ಆಕ್ರೋಷ ವ್ಯಕ್ತಪಡಿಸಿದ ಅವರು, ಜಾತಿ ಪ್ರಮಾಣಪತ್ರ ನೀಡುವವರೆಗೂ ಶಾಲೆಗೆ ದಾಖಲಿಸಲ್ಲ ಎಂದು ತಿಳಿಸಿದರು.

ಬುಡ್ಗ ಜಂಗಮ್ ಮತ್ತು ಚನ್ನದಾಸರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ಮರುಗೇಶ್ ಮಾತನಾಡಿ, ಜಾತಿ ಪ್ರಮಾಣ ಪತ್ರ ಸಿಗದ ಹಿನ್ನಲೆಯಲ್ಲಿ ನೊಂದಿರುವ ಗ್ರಾಮಸ್ಥರು ತಮ್ಮ ಮಕ್ಕಳನ್ನು ಶಾಲೆಗೆ ದಾಖಲಿಸುವುದಿಲ್ಲ ಎಂದು ಹಠಕ್ಕೆ ಬಿದ್ದಿದ್ದಾರೆ ಇದರಿಂದಾಗಿ ಕಳೆದ ವರ್ಷ 19 ಮಕ್ಕಳಿದ್ದು, ಈ ಬಾರಿ 6 ಮಕ್ಕಳು ದಾಖಲಾಗಿ ಶಾಲೆಯಲ್ಲಿ 25 ಮಕ್ಕಳಿರಬೇಕಾಗಿತ್ತು ಹಾಗೆಯೇ ಅಂಗನವಾಡಿಗೂ 10 ಮಕ್ಕಳು ದಾಖಲಾಗಬೇಕಾಗಿತ್ತು.

ಆದರೆ ತಮ್ಮ ಮಕ್ಕಳಿಗೆ ಜಾತಿ ಪ್ರಮಾಣಪತ್ರ ಸಿಗದ ಹಿನ್ನಲೆಯಲ್ಲಿ ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸದ ಕಾರಣ ಶಾಲೆಯಲ್ಲಿ ಮಕ್ಕಳಿಲ್ಲದೇ ಬಿಕೋ ಎನ್ನುವಂತಾಗಿದೆ. ಶಿಕ್ಷಕರು ಶಾಲೆಗೆ ಬಂದು ವೃಥಾ ವಾಪಸ್ಸಾಗುತ್ತಿರುವ ದೃಶ್ಯ ಸಾಮಾನ್ಯವಾಗಿದ್ದು, ಸಮಸ್ಯೆ ಪರಿಹಾರವಾಗುವವರೆಗೂ ಶಾಲೆಗೆ ದಾಖಲಾತಿ ಇಲ್ಲ ಎಂದು ಸ್ಪಷ್ಟಪಡಿಸಿದರು.

ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಗೇಶ್, ಯುವ ಮುಖಂಡ ಅಭಿಜಿತ್‌ಗೌಡ, ಮೇಘರಾಜ್, ಗೋವಿಂದಪ್ಪ, ಶ್ರೀರಾಮ್, ಡಿಎಂಸಿ ಶ್ರೀರಾಮ್, ಐ.ಎಂ.ವೆಂಕಟೇಶ್, ವೆಂಕಟೇಶ್ ಮಾಜಿ ಗ್ರಾಪಂ ಸದಸ್ಯ ಮುನಿಯಪ್ಪ, ಯಲ್ಲಪ್ಪ, ಶಶಿ ಗಂಗರಾಜು, ಬಾಬು, ರಾಜಪ್ಪ, ಅಭಿ, ನಾಗರಾಜ್, ಮೂರ್ತಿ, ಮಂಜುನಾಥ್,ವೆಂಕಟೇಶ್ ಮತ್ತಿತರರಿದ್ದರು.

# ‘ಕಂದಾಯ ಇಲಾಖೆ ಸೇವೆ ಪೂರ್ಣ ಪ್ರಮಾಣದಲ್ಲಿ ಜನರಿಗೆ ಸಿಗಲಿ’

ತುಮಕೂರು

ಡಿಸೆಂಬರ್–2026ರ ಅಂತ್ಯದೊಳಗೆ ಎಲ್ಲಾ ಬಾಕಿ ಇ–ಪೌತಿ ಅರ್ಜಿಗಳನ್ನು ಪೂರ್ಣಗೊಳಿಸುವ ಗುರಿ ಹೊಂದುವ ನಿಟ್ಟಿನಲ್ಲಿ ಪ್ರತಿದಿನ ತಹಶೀಲ್ದಾರ್, ಆರ್‌ಆರ್‌ಟಿ ಶಿರಸ್ತೇದಾರರು, ಗ್ರಾಮ ಆಡಳಿತಾಧಿಕಾರಿಗಳು ಹಾಗೂ ಹೋಬಳಿ ರಾಜಸ್ವ ನಿರೀಕ್ಷಕರ ಸಭೆಗಳನ್ನು ನಡೆಸಿ ಪ್ರಗತಿ ಪರಿಶೀಲನೆ ಮಾಡುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ, ತಾಲೂಕು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಕಂದಾಯ ಇಲಾಖೆಯ ವಿವಿಧ ಸೇವೆಗಳ ಪ್ರಗತಿ ಪರಿಶೀಲಿಸಿದರು.

ಕಂದಾಯ ಅದಾಲತ್‌ಗಳನ್ನು ಪರಿಣಾಮಕಾರಿಯಾಗಿ ನಡೆಸುವ ಉದ್ದೇಶದಿಂದ ತಹಶೀಲ್ದಾರ್‌ಗಳಿಗೆ ಈಗಾಗಲೇ ಅಧಿಕಾರ ಪ್ರತ್ಯಾಯೋಜನೆ ಮಾಡಲಾಗಿದೆ. ಸರ್ಕಾರವು ಜಾರಿಗೆ ತಂದಿರುವ ರೆವಿನ್ಯೂ ಮಾಡ್ಯೂಲ್ ತಂತ್ರಾಂಶದ ಮೂಲಕ ಪಹಣಿ ತಿದ್ದುಪಡಿ ಕಾರ್ಯಗಳನ್ನು ವೇಗಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತುಮಕೂರು ಜಿಲ್ಲೆಯಲ್ಲಿ ವಿಷಯ ನಿರ್ವಾಹಕರ ಹಂತದಲ್ಲಿ ಒಟ್ಟು 13,435 ಅರ್ಜಿಗಳು ಬಾಕಿಯಿದ್ದು, ತಿಪಟೂರು, ತುರುವೇಕೆರೆ ಹಾಗೂ ಚಿಕ್ಕನಾಯಕನಹಳ್ಳಿ ತಾಲ್ಲೂಕುಗಳಲ್ಲಿ ಹೆಚ್ಚಿನ ಪ್ರಕರಣಗಳು ಬಾಕಿ ಇರುವುದರಿಂದ, ಸದರಿ ಅರ್ಜಿಗಳನ್ನು ತಕ್ಷಣ ಗ್ರಾಮ ಆಡಳಿತಾಧಿಕಾರಿಗಳ ಲಾಗಿನ್‌ಗೆ ಕಳಿಸಿ, ಆರ್‌ಆರ್‌ಟಿ ಶಿರಸ್ತೇದಾರರು ಹಾಗೂ ಎಡಿಎಲ್‌ಆರ್ ಅಧಿಕಾರಿಗಳ ಸಮನ್ವಯದೊಂದಿಗೆ ಆದ್ಯತೆ ಮೇರೆಗೆ ವಿಲೇವಾರಿ ಮಾಡುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇ–ಪೌತಿ ಅರ್ಜಿಗಳ ವಿಲೇವಾರಿ ಪ್ರಗತಿ ಪರಿಶೀಲನೆ ವೇಳೆ, ಜಿಲ್ಲೆಯಲ್ಲಿ ಒಟ್ಟು 3,36,847 ಅರ್ಜಿಗಳು ಬಾಕಿಯಿದ್ದು, ಬಾಕಿ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಪ್ರತಿಯೊಬ್ಬ ಗ್ರಾಮ ಆಡಳಿತಾಧಿಕಾರಿಯು ಪ್ರತಿದಿನ ಕನಿಷ್ಠ ಎರಡು ಪೌತಿ ಖಾತೆಗಳನ್ನು ಪೂರ್ಣಗೊಳಿಸುವಂತೆ ಸೂಚನೆ ನೀಡಿದ ಅವರು, ಬಾಕಿ ಇರುವ ಎಲ್ಲಾ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು.

ಈ ಕಾರ್ಯಕ್ರಮಗಳನ್ನು ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರ ನಿರ್ದೇಶನದಂತೆ ಕೈಗೊಳ್ಳುತ್ತಿರುವುದರಿಂದ ಯಾವುದೇ ಲೋಪ ಮತ್ತು ಉದಾಸಿನ ಮನೋಭಾವ ತಾಳದೆ ಪ್ರಗತಿ ಸಾಧಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಕಾರ್ಯಕ್ರಮ ಸಂಬಂಧಿಸಿದಂತೆ ತಾಲ್ಲೂಕು ಹಂತದಲ್ಲಿ ಎಲ್ಲಾ ಅಧಿಕಾರಿಗಳು ವಹಿಸುವ ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದ ಅವರು, ನೋಂದಾಯಿತ ರಾಜಕೀಯ ಪಕ್ಷಗಳು ತಮ್ಮ ಚುನಾವಣಾ ಏಜೆಂಟರ್‌ಗಳನ್ನು ಕೂಡಲೇ ನೇಮಿಸಬೇಕು. ಈ ಸಂಬಂಧ ಆಯಾ ತಹಶೀಲ್ದಾರ್ ಹಂತದಲ್ಲಿ ರಾಜಕೀಯ ಪಕ್ಷಗಳಿಗೆ ತಿಳಿಸಿ ಏಜೆಂಟರ್ ನೇಮಕ ಮಾಡುವಂತೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.



ತಿಪಟೂರು ಗ್ರಾಮಾಂತರ ಪ್ರದೇಶದ ನೊಣವಿನ ಕೆರೆಯಲ್ಲಿ ಅನುಷ್ಠಾನವಾಗುತ್ತಿರುವ ಬಹುಗ್ರಾಮ ಕುಡಿಯುವ ನೀರಿನ ಕಾಮಗಾರಿ ಸ್ಥಳಕ್ಕೆ ತುಮಕೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಶ್ವಿಜ ಬಿ.ವಿ ರವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳಿಗೆ ಸೂಚಿಸಿದರು.

# 27ರಂದು “ಒಲಿಂಪಿಕ್ ಡೇ ರನ್”

ತುಮಕೂರು

ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿಯ ಆಶ್ರಯದಲ್ಲಿ ಪ್ರತಿ ವರ್ಷ ವಿಶ್ವದಾದ್ಯಂತ ಆಯೋಜಿಸಲಾಗುವ “ಒಲಿಂಪಿಕ್ ಡೇ ರನ್” ಕಾರ್ಯಕ್ರಮವು ಈ ವರ್ಷ ಕರ್ನಾಟಕದಲ್ಲಿಯೂ ವಿಜೃಂಭಣೆಯಿಂದ ನಡೆಯಲಿದ್ದು, ಭಾರತೀಯ ಒಲಿಂಪಿಕ್ ಸಂಸ್ಥೆಯು ಕರ್ನಾಟಕದಲ್ಲಿ ಕಾರ್ಯಕ್ರಮದ ಆಯೋಜನೆಯ ಜವಾಬ್ದಾರಿಯನ್ನು ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್‌ಗೆ ವಹಿಸಿದೆ.

ಈ ಹಿನ್ನೆಲೆಯಲ್ಲಿ 2026ನೇ ಸಾಲಿನ ಒಲಿಂಪಿಕ್ ಡೇ ರನ್ ಕಾರ್ಯಕ್ರಮವನ್ನು ಮೊದಲ ಬಾರಿಗೆ ತುಮಕೂರಿನಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದು, ಕಾರ್ಯಕ್ರಮವು ಜೂನ್ 27ರ ಶನಿವಾರ ಬೆಳಿಗ್ಗೆ 7 ಗಂಟೆಗೆ ನಡೆಯಲಿದೆ.

ರಾಜ್ಯದ ಈ ಭಾಗದಲ್ಲಿ ಒಲಿಂಪಿಕ್ ಚಳವಳಿಯ ಬಗ್ಗೆ ಅರಿವು ಮೂಡಿಸುವ ಹಾಗೂ ಕ್ರೀಡಾ ಸಂಸ್ಕೃತಿಯನ್ನು ಉತ್ತೇಜಿಸುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಒಲಿಂಪಿಕ್ ಡೇ ರನ್ 5 ಕಿಲೋಮೀಟರ್ ದೂರದ ಓಟವಾಗಿದ್ದು, ಪುರುಷರು, ಮಹಿಳೆಯರು, ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರೆಲ್ಲರೂ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಆರೋಗ್ಯಕರ ಜೀವನಶೈಲಿ, ಕ್ರೀಡಾ ಮನೋಭಾವ ಹಾಗೂ ಸಾಮೂಹಿಕ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.



ಕಾರ್ಯಕ್ರಮದ ಯಶಸ್ವಿ ಆಯೋಜನೆಗಾಗಿ ಸೂಕ್ತ ರಸ್ತೆ ಮಾರ್ಗದಲ್ಲಿ ಸಂಚಾರ ನಿರ್ಬಂಧ, ಭಾಗವಹಿಸುವವರಿಗೆ ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್ ಹಾಗೂ ಜಿಲ್ಲಾ ಆಡಳಿತದ ಲಾಂಛನ ಹೊಂದಿರುವ ಟಿ–ಶರ್ಟ್‌ಗಳ ಬಿಡುಗಡೆಗೊಳಿಸಲಾಗಿದ್ದು, ಅಂದು ವಿತರಣೆ ಹಾಗೂ ಲಘು ಉಪಹಾರದ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು. ಭಾಗವಹಿಸುವ ಎಲ್ಲರಿಗೂ ಪ್ರಮಾಣಪತ್ರಗಳನ್ನು ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್ ವತಿಯಿಂದ ನೀಡಲಾಗುವುದು. ಜಿಲ್ಲೆಯ ಕ್ರೀಡಾಪಟುಗಳು, ವಿದ್ಯಾರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್ ಮತ್ತು ಜಿಲ್ಲಾ ಆಡಳಿತ ಮನವಿ ಮಾಡಿದೆ.

# ‘ಮೊಬೈಲ್ ವ್ಯಸನದಿಂದ ದೂರವಿರಿ, ಕ್ರೀಡಾಸಕ್ತಿ ಬೆಳೆಸಿಕೊಳ್ಳಿ’




ಗುಡಿಬಂಡೆ

ಇಂದಿನ ಯುವಜನತೆ ಮೊಬೈಲ್ ಮತ್ತು ಅಂತರ್ಜಾಲದ ಅತಿಯಾದ ಬಳಕೆಯ ಕಡೆ ಹೆಚ್ಚು ಆಕರ್ಷಿತರಾಗುತ್ತಿದ್ದು, ಇದರ ಪರಿಣಾಮವಾಗಿ ಅನೇಕರು ತಮ್ಮ ಗುರಿಯಿಂದ ದೂರ ಸರಿಯುವ ಅಪಾಯ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಯುವಕರು ಮೊಬೈಲ್ ವ್ಯಸನದಿಂದ ದೂರವಿದ್ದು, ಕ್ರೀಡೆಗಳತ್ತ ಆಸಕ್ತಿ ಬೆಳೆಸಿಕೊಳ್ಳುವ ಮೂಲಕ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಕೆ.ವಿ. ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಕೆ.ವಿ. ನವೀನ್ ಕಿರಣ್ ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಬಳಿಯ ಮಿನಿ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ “ಗುಡಿಬಂಡೆ ಕಬ್ಬಡಿ ಪ್ರೀಮಿಯರ್ ಲೀಗ್” ಪಂದ್ಯಾವಳಿಗೆ ಗಿಡ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಗಳು ವ್ಯಕ್ತಿತ್ವ ವಿಕಸನಕ್ಕೆ ನೆರವಾಗುವುದರ ಜೊತೆಗೆ ಶಿಸ್ತು, ಆತ್ಮವಿಶ್ವಾಸ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುತ್ತವೆ. ಆದ್ದರಿಂದ ಯುವಕರು ತಮ್ಮ ಸಮಯವನ್ನು ಸದುಪಯೋಗಪಡಿಸಿಕೊಂಡು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ರಾಷ್ಟ್ರಕ್ಕೆ ಕೀರ್ತಿ ತರುವಂತಹ ಸಾಧನೆ ಮಾಡಬೇಕು ಎಂದು ಹೇಳಿದರು.

ದೇಶದಲ್ಲಿ ಜನರು ಒಂದಾಗುವುದು ಯುದ್ಧದ ಸಮಯದಲ್ಲಿ ಹಾಗೂ ಕ್ರೀಡಾಕೂಟಗಳ ಸಂದರ್ಭದಲ್ಲಿ. ಈ ನಿಟ್ಟಿನಲ್ಲಿ ಕ್ರೀಡೆಗಳಿಗೆ ಅಪಾರ ಮಹತ್ವವಿದೆ. ಇಂತಹ ಕ್ರೀಡಾಕೂಟಗಳನ್ನು ಆಗಾಗ ಆಯೋಜಿಸಿದರೆ ಯುವಜನರಲ್ಲಿ ಒಗ್ಗಟ್ಟು ಹಾಗೂ ಕ್ರೀಡಾಸಕ್ತಿ ಹೆಚ್ಚುತ್ತದೆ ಎಂದು ಅಭಿಪ್ರಾಯಪಟ್ಟರು.

ಗುಡಿಬಂಡೆಯಲ್ಲಿ ಕ್ರೀಡಾಕೂಟಗಳನ್ನು ಇನ್ನಷ್ಟು ಉತ್ತಮವಾಗಿ ನಡೆಸಲು ಅಗತ್ಯವಿರುವ ಮ್ಯಾಟ್ ವ್ಯವಸ್ಥೆಯನ್ನು ಶೀಘ್ರದಲ್ಲೇ ಒದಗಿಸುವುದಾಗಿ ಭರವಸೆ ನೀಡಿದರು. ಬಳಿಕ ನಿವೃತ್ತ ಉಪನ್ಯಾಸಕ ಬಿ. ಅಮೀರ್ ಜಾನ್ ಮಾತನಾಡಿ, ಗುಡಿಬಂಡೆ ತಾಲೂಕು ಕ್ರೀಡಾಕೂಟಗಳಲ್ಲಿ ಸಾಕಷ್ಟು ಹೆಸರುವಾಸಿಯಾಗಿದೆ. ಇಲ್ಲಿನ ಅನೇಕ ಕ್ರೀಡಾಪಟುಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಹೆಸರು ಗಳಿಸಿದ್ದಾರೆ ಎಂದು ಹೇಳಿದರು.

ಇಡೀ ಜಿಲ್ಲೆಯಲ್ಲಿ ಹೆಚ್ಚು ದೈಹಿಕ ಶಿಕ್ಷಕರನ್ನು ಹೊಂದಿರುವ ತಾಲೂಕು ಗುಡಿಬಂಡೆ ಎಂದು ಹೇಳಬಹುದು. ಆದರೆ ಇತ್ತೀಚಿನ ದಿನಗಳಲ್ಲಿ ಯುವಕರಲ್ಲಿ ಕ್ರೀಡಾಸಕ್ತಿ ಕಡಿಮೆಯಾಗುತ್ತಿದೆ. ಇದಕ್ಕೆ ಸುಸಜ್ಜಿತ ಕ್ರೀಡಾಂಗಣದ ಕೊರತೆಯೂ ಒಂದು ಕಾರಣವಾಗಿದೆ ಎಂದು ತಿಳಿಸಿದರು.

ಈಗಾಗಲೇ ಹಲವು ಬಾರಿ ಜನಪ್ರತಿನಿಧಿಗಳಿಗೆ ಕ್ರೀಡಾಂಗಣ ನಿರ್ಮಾಣಕ್ಕಾಗಿ ಮನವಿ ಮಾಡಲಾಗಿದೆ. ತಾಲೂಕು ಕಚೇರಿ ಮುಂಭಾಗದ ಹಳೆಯ ನ್ಯಾಯಾಲಯದ ಜಾಗದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಿದರೆ ಇಲ್ಲಿನ ಕ್ರೀಡಾಪಟುಗಳು ಉತ್ತಮ ಅಭ್ಯಾಸ ಮಾಡಿ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಬಹುದು ಎಂದು ಹೇಳಿದರು.

ಪಂದ್ಯಾವಳಿಯಲ್ಲಿ ಹರಿಟ್ರೆಂಡ್ಸ್ ತಂಡ ಪ್ರಥಮ ಸ್ಥಾನ, 7 ಸ್ಟಾರ್ ತಂಡ ದ್ವಿತೀಯ ಸ್ಥಾನ ಹಾಗೂ ಸಿದ್ದು ಬಾಯ್ಸ್ ತಂಡ ತೃತೀಯ ಸ್ಥಾನ ಪಡೆದವು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ವಿಕಾಸ್, ತಾಲೂಕು ಆರೋಗ್ಯಾಧಿಕಾರಿ ಡಾ. ಅಕ್ಷಯ್, ಆರಕ್ಷಕ ಉಪನಿರೀಕ್ಷಕ ಮುತ್ತುರಾಜ್, ನಿವೃತ್ತ ದೈಹಿಕ ಶಿಕ್ಷಕ ಅಶ್ವತ್ಥಪ್ಪ, ಲೀಗ್ ಆಯೋಜಕರಾದ ಜೆಸಿಬಿ ಮಂಜುನಾಥ್, ಮನೋಹರ್, ಹರಿಕೃಷ್ಣ ಸೇರಿದಂತೆ ಕ್ರೀಡಾಭಿಮಾನಿಗಳು ಹಾಗೂ ಪ್ರೋತ್ಸಾಹಕರು ಉಪಸ್ಥಿತರಿದ್ದರು.

# ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮಧುಗಿರಿ

ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ 2026–27ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಹಾಗೂ ತೋಟಗಾರಿಕೆಯಲ್ಲಿ ಯಾಂತ್ರೀಕರಣ ಯೋಜನೆಯಡಿ ತೋಟಗಾರಿಕೆ ರೈತರು ಹಾಗೂ ಉದ್ದಿಮೆದಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯೋಜನೆಯಡಿ ಹಣ್ಣಿನ ಬೆಳೆಗಳಾದ ಬಾಳೆ, ಮಾವು ಹಾಗೂ ದಾಳಿಂಬೆ ಬೆಳೆಗಳ ಹೊಸ ಪ್ರದೇಶ ವಿಸ್ತರಣೆಗೆ ನೆರವು ನೀಡಲಾಗುತ್ತದೆ. ಅಪ್ರಧಾನ ಹಣ್ಣಿನ ಬೆಳೆಗಳಾದ ಡ್ರ್ಯಾಗನ್ ಹಣ್ಣು, ಬೆಣ್ಣೆಹಣ್ಣು ಹಾಗೂ ಹುಣಸೆ ಬೆಳೆಗಳ ವಿಸ್ತರಣೆಯಿಗೂ ಸಹಾಯಧನ ದೊರೆಯಲಿದೆ.

ಇದೇ ವೇಳೆ ಹೈಬ್ರಿಡ್ ತರಕಾರಿ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ, ನೆರಳು ಪರದೆ ನಿರ್ಮಾಣ, ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳ ಸ್ಥಾಪನೆ, ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ಪ್ಲಾಸ್ಟಿಕ್ ಹೊದಿಕೆ ಹಾಗೂ ಪಕ್ಷಿ ನಿರೋಧಕ ಬಲೆ ಅಳವಡಿಕೆಗೂ ನೆರವು ನೀಡಲಾಗುತ್ತದೆ.

ಸಮಗ್ರ ಕೀಟ, ರೋಗ ಹಾಗೂ ಪೋಷಕಾಂಶ ನಿರ್ವಹಣೆ, ಕೊಯ್ಲೋತ್ತರ ನಿರ್ವಹಣೆಗಾಗಿ ಕಡಿಮೆ ವೆಚ್ಚದ ಈರುಳ್ಳಿ ಶೇಖರಣಾ ಘಟಕ ನಿರ್ಮಾಣಕ್ಕೂ ಸಹಾಯಧನ ಲಭ್ಯವಿದೆ. ಹಳೆಯ ತೋಟಗಳ ಪುನಶ್ಚೇತನ, ಜೇನು ಸಾಕಾಣಿಕೆ, ಮಿನಿ ಟ್ರಾಕ್ಟರ್ ಹಾಗೂ ಇತರೆ ಯಂತ್ರೋಪಕರಣಗಳ ಖರೀದಿಗೂ ಅನುದಾನ ನೀಡಲಾಗುವುದು.

ಮಾರ್ಗಸೂಚಿಯನ್ವಯ ವಿವಿಧ ಕಾರ್ಯಕ್ರಮಗಳಿಗೆ ಶೇ.25ರಿಂದ 50ರವರೆಗೆ ಸಹಾಯಧನ ನೀಡಲಾಗುತ್ತದೆ.

ಆಸಕ್ತ ರೈತರು ಹಾಗೂ ಉದ್ದಿಮೆದಾರರು ಅರ್ಜಿಯೊಂದಿಗೆ ಪಹಣಿ, ಬೆಳೆ ದೃಢೀಕರಣ ಪತ್ರ, ಚೆಕ್ ಬಾಂಡ್, ಆಧಾರ್ ಪ್ರತಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ಜಾತಿ ಪ್ರಮಾಣ ಪತ್ರ (ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ), ಜಂಟಿ ಖಾತೆ ಇದ್ದಲ್ಲಿ ಒಪ್ಪಿಗೆ ಪತ್ರ, ಖಾತೆದಾರರು ಮೃತಪಟ್ಟಿದ್ದಲ್ಲಿ ಮರಣ ಪ್ರಮಾಣ ಪತ್ರ ಸೇರಿದಂತೆ ಅಗತ್ಯ ದಾಖಲಾತಿಗಳನ್ನು ಜೂನ್ 15ರಿಂದ ಜೂನ್ 25ರೊಳಗಾಗಿ ತಾಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ಮಧುಗಿರಿ ಸಂಪರ್ಕಿಸಬಹುದಾಗಿದೆ. ಗುರಿಗೆ ಅನುಗುಣವಾಗಿ ಮಾರ್ಗಸೂಚಿಯ ಪ್ರಕಾರ ಜ್ಯೇಷ್ಠತೆ ಆಧಾರದ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ಎಂದು ತಾಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಶಶಿಧರ್ ತಿಳಿಸಿದ್ದಾರೆ.

# ವ್ರತ ಆಚರಿಸಿದ ಮಾತೆಯರಿಗೆ

## ಹಿರೇಮಠಶ್ರೀಗಳಿಂದ ಗೌರವ

ತುಮಕೂರು

ನಗರದ ಹಿರೇಮಠದಲ್ಲಿ ಸಾಮೂಹಿಕವಾಗಿ 16 ಸೋಮವಾರ ವ್ರತ ಆಚರಿಸಿದ ತಾಯಿಯರನ್ನು ಶ್ರೀಮಠದ ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿಯವರು ಅಧಿಕ ಜೇಷ್ಠ ಅಮಾವಾಸ್ಯೆಯ ವಿಶೇಷ ದಿನವಾದ ಸೋಮವಾರ ನಡೆದ ಉದ್ಯಾಪನಾ ಸಮಾರಂಭದಲ್ಲಿ ಅಭಿನಂದಿಸಿ, ವಸ್ತ್ರ, ಬಾಗಿನ ನೀಡಿ ಆಶೀರ್ವದಿಸಿದರು.

ಈ ವೇಳೆ ಮಾತನಾಡಿದ ಸ್ವಾಮೀಜಿ, ಕಳೆದ 30 ವರ್ಷಗಳಿಂದ ಹಿರೇಮಠದಲ್ಲಿ ಪ್ರತಿ ಅಮಾವಾಸ್ಯೆಯಂದು ಧರ್ಮಗೋಷ್ಠಿ, ಉಪನ್ಯಾಸ, ದಾಸೋಹ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಇಂದಿನ ವಿಶೇಷವಾಗಿ 16 ಸೋಮವಾರ ವ್ರತ ಆಚರಿಸಿದ 22 ತಾಯಂದಿರನ್ನು ಆಶೀರ್ವದಿಸಲಾಗಿದೆ. ಸಾಮಾನ್ಯವಾಗಿ ಇಂತಹ ವ್ರತಗಳನ್ನು ತಾಯಂದಿರು ಮನೆಯಲ್ಲಿ ಆಚರಿಸುತ್ತಾರೆ. ಮಠದಲ್ಲಿ ಸಾಮೂಹಿಕ ಆಚರಣೆಯ ಉಪಕ್ರಮಕ್ಕೆ ಹಿರೇಮಠ ನಾಂದಿಯಾಗಿದೆ. ಹೆಣ್ಣುಮಕ್ಕಳಿಗೆ ಮೊದಲು ವೇದ ಕಲಿಸಿದ ದಾಖಲೆಯೂ ಹಿರೇಮಠದ್ದಾಗಿದೆ ಎಂದರು.

ಹಿರೇಮಠದ ಮಾರ್ಗದರ್ಶನದಲ್ಲಿ ತಾಯಂದಿರು ಮಣ್ಣಿನಲ್ಲಿ ಲಿಂಗು ತಯಾರಿಸಿ, ಅಲಂಕರಿಸಿ, ಅಭಿಷೇಕ, ವಿಶೇಷ ಪೂಜೆ ಮಾಡಿದರು. ಹಿಂದೆ ರಾಜಮಹಾರಾಜರು ಇಂತಹ ವ್ರತಗಳನ್ನು ಆಚರಿಸುತ್ತಿದ್ದರು. 16 ಸೋಮವಾರಗಳ ಪೂಜೆಯ ನಂತರ ಈ ತಿಂಗಳ 18ರಂದು ಕಾವೇರಿ ನದಿಯಲ್ಲಿ ಲಿಂಗುಗಳ ವಿಸರ್ಜನೆ ಮಾಡಿ ವ್ರತ ಪೂರ್ಣಗೊಳಿಸುತ್ತಾರೆ ಎಂದು ಸ್ವಾಮೀಜಿ ತಿಳಿಸಿದರು.

ಇದೇ ವೇಳೆ 46 ವರ್ಷದ ದಾಂಪತ್ಯ ಬದುಕು ನಡೆಸಿದ ಚಂದ್ರಶೇಖರ್ ದಂಪತಿ ಹಾಗೂ 53 ವರ್ಷಗಳ ಆದರ್ಶ ದಾಂಪತ್ಯ ಜೀವನ ಪೂರ್ಣಗೊಳಿಸಿದ ಬಸವರಾಜಪ್ಪ ದಂಪತಿಯನ್ನು ಸ್ವಾಮೀಜಿ ಸನ್ಮಾನಿಸಿದರು. ವಿವಾಹ ನಿಶ್ಚಯವಾಗಿರುವ ಅಂಧ ಗಾಯಕಿ ಜಲಜಾ ಜೈನ್ ಅವನ್ನು ಈ ಸಂದರ್ಭದಲ್ಲಿ ಡಾ. ಶಿವಾನಂದ ಶಿವಾಚಾರ್ಯ ಸ್ವಾಮೀಜಿಯವರು ಕಾಣಿಕೆ ನೀಡಿ ಆಶೀರ್ವಾದ ಮಾಡಿದರು.

# ‘ಅಧಿಕಾರಿಗಳು ಇಚ್ಛಾ ಶಕ್ತಿಯಿಂದ ಕೆಲಸ ನಿರ್ವಹಿಸಿ’

ತುಮಕೂರು

ಅಧಿಕಾರಿಗಳು ಕಡ್ಡಾಯವಾಗಿ ಕರ್ತವ್ಯ ಆಪ್ ಬಳಸಿ ನಿಗಧಿತ ಸಮಯಕ್ಕೆ ಸರಿಯಾಗಿ ಕಚೇರಿಗೆ ಆಗಮಿಸಿ ಹಾಜರಾತಿಯನ್ನು ಹಾಕಬೇಕು. ತಮ್ಮ ಕಚೇರಿಯಲ್ಲಿ ಭ್ರಷ್ಟಾಚಾರ ತಡೆಯುವ ಸಲುವಾಗಿ ಅಧಿಕಾರಿಗಳ ದೂರವಾಣಿ ಸಂಖ್ಯೆಯನ್ನು ನೋಟೀಸ್ ಬೋರ್ಡ್‌ನಲ್ಲಿ ಹಾಕಬೇಕು. ಇಲಾಖೆ ವ್ಯಾಪ್ತಿಯಲ್ಲಿ ಚಾಲನೆಯಲ್ಲಿರುವ ಕಟ್ಟಡ ಕಾಮಗಾರಿಗಳನ್ನು ಆಗಸ್ಟ್ ವೇಳೆಗೆ ಪೂರ್ಣಗಳಿಸಿ ಇಚ್ಛಾಶಕ್ತಿಯಿಂದ ಕೆಲಸ ನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಶ್ವಿಜ ಬಿ.ವಿ ತಿಳಿಸಿದರು.

ಸೋಮವಾರ ತಿಪಟೂರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಪ್ರಗತಿಯಲ್ಲಿರುವ 40 ಅಂಗನವಾಡಿ ಕಟ್ಟಡ ಕಾಮಗಾರಿಗಳು ಮತ್ತು ರಸ್ತೆ ಡಾಂಬರೀಕರಣ ಕಾಮಗಾರಿಗಳನ್ನು ಆಗಸ್ಟ್ ವೇಳೆಗೆ ಪೂರ್ಣಗೊಳಿಸಬೇಕು.

ಆಗಸ್ಟ್‌ನಲ್ಲಿ ಮುಖ್ಯಮಂತ್ರಿಗಳು ಈ ಕಾಮಗಾರಿಗಳನ್ನು ಉದ್ಘಾಟನೆ ಮಾಡಲು ಆಗಮಿಸುತ್ತಿದ್ದು, ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಆದೇಶಿಸಿದರು.

ಕೃಷಿ ಹಾಗೂ ತೋಟಗಾರಿಕಾ ಇಲಾಖೆಯವರು ಜಂಟಿಯಾಗಿ ಸಮೀಕ್ಷೆ ನಡೆಸಿ ತೆಂಗು ಮತ್ತು ಅಡಿಕೆ ಬೆಳೆಯುವ ರೈತರನ್ನ ಗುರುತಿಸಿ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ನಿರ್ಮಾಣ ಮಾಡಿಕೊಳ್ಳಲು ತಿಳಿಸಬೇಕು. ಇದರಿಂದ ಅಂತರ್ಜಲ ಅಭಿವೃದ್ಧಿ ಹಾಗೂ ಮೀನು ಕೃಷಿಗೆ ಸಹಕಾರಿಯಾಗುವುದರ ಮೂಲಕ ರೈತರನ್ನು ಸ್ವಾವಲಂಬಿಗಳಾಗಿಸಬಹುದು ಎಂದರು.




ತಿಪಟೂರು ತಾಲ್ಲೂಕಿನಾದ್ಯಂತ ಜಲ್‌ಜೀವನ್ ಮಿಷನ್ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವುದರ ಮೂಲಕ ಹರ್ ಘರ್ ಜಲ್ ಘೋಷಣೆ ಮಾಡಲು ಸಿದ್ದರಾಗುವಂತೆ ಆದೇಶಿಸಿದರು. ತಾಲ್ಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಂಬಂದಿಸಿದಂತೆ ವಿಲೇಜ್ ವಾಟರ್ ಅಂಡ್ ಸ್ಯಾನಿಟೈಸೇಶನ್ ಸಮಿತಿಯನ್ನು ರಚನೆ ಮಾಡಿ ಗ್ರಾಮೀಣ ಭಾಗದ ಮಹಿಳೆಯರಿಗೆ ನೀರಿನ ಶುದ್ಧತೆಯ ಬಗ್ಗೆ ಅರಿವನ್ನು ಮೂಡಿಸುವ ಕೆಲಸ ಮಾಡಬೇಕು. ಯಾವ ಗ್ರಾಮದಲ್ಲಿಯೂ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ತಿ ಕಾರ್ಯ ಶೀಘ್ರವಾಗಿ ಮಾಡುವಂತೆ ತಿಳಿಸಿದರು.

ತಾಲ್ಲೂಕು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಸಲುವಾಗಿ ಶೌಚಾಲಯ ಹಾಗೂ ಬೆಡ್‌ಗಳನ್ನು ದುರಸ್ತಿ ಮಾಡಿಸಿ, ಸರ್ಕಾರಿ ಆಸ್ಪತ್ರೆಯನ್ನು ಬೇರೆ ಯಾವುದೇ ಖಾಸಗೀ ಆಸ್ಪತ್ರೆಯನ್ನು ಮೀರಿಸುವ ಮಟ್ಟದಲ್ಲಿರಿಸುವಂತೆ ಸೂಚಿಸಲಾಯಿತು.

ತಾಲ್ಲೂಕಿನಾದ್ಯಂತ ಶಿಥಿಲಾವಸ್ಥೆಯಲ್ಲಿರುವ ಶಾಲೆಗಳನ್ನು ಗುರುತಿಸಿ ಶಾಲಾ ಕಾಂಪೌಂಡ್ ಹಾಗೂ ಶೌಚಾಲಯಗಳನ್ನು ದುರಸ್ತಿ ಮಾಡಿಸಲು ಲೋಕೋಪಯೋಗಿ ಇಲಾಖೆ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಇಲಾಖೆಗಳು ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಕಾಮಗಾರಿಗಳ ಪ್ರಸ್ತಾವನೆಯನ್ನು ನೀಡಬೇಕು. ಶಾಲೆಗಳಲ್ಲಿ ಶೌಚಾಲಯ ಸ್ವಚ್ಚತೆಗೆ ಸಂಬಂದಿಸಿದಂತೆ ಸಿಬ್ಬಂದಿ ನೇಮಕ ಮಾಡಿಕೊಳ್ಳಲು ಅನುದಾನ ನೀಡಲಾಗುತ್ತಿದ್ದು, ಸಿಬ್ಬಂದಿಗಳನ್ನು ಕೂಡಲೇ ನೇಮಕ ಮಾಡಿಕೊಳ್ಳಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಎಂ. ಸುದರ್ಶನ್ ಮಾತನಾಡಿ, ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಎಲ್ಲಾ ಗ್ರಾಮಗಳ ಅಂಗನವಾಡಿ ಮಕ್ಕಳಿಗೆ ಎರಡು ಜತೆ ಶಾಲಾ ಸಮವಸ್ತ್ರ ಹಾಗೂ ಶೂಗಳನ್ನು ವಿತರಣೆ ಮಾಡಬೇಕು.

ಈ ಜವಾಬ್ದಾರಿ ಆಯಾ ಗ್ರಾಮ ಪಂಚಾಯಿತಿ ಪಿಡಿಒಗಳಿಗೆ ವಹಿಸಲಾಗಿದೆ. ಮತ್ತು ಪ್ರತಿ ಗ್ರಾಮದಲ್ಲಿ ಕುಡಿಯುವ ನೀರಿನ ಟ್ಯಾಂಕ್‌ಗಳ ಸ್ವಚ್ಚತೆಯನ್ನು ಕಡ್ಡಾಯವಾಗಿ ನಡೆಸಬೇಕು. ಮಳೆಗಾಲ ಆರಂಭವಾಗುತ್ತಿದ್ದು, ಗ್ರಾಮಗಳ ಚರಂಡಿಯನ್ನು ಸ್ವಚ್ಚಮಾಡಿಸಬೇಕು ಎಂದು ಸೂಚನೆ ನೀಡಿದರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಶಿವಕುಮಾರ್ (ಗ್ರಾಮೀಣ ಉದ್ಯೋಗ) ತಾಲ್ಲೂಕು ಯೋಜನಾಧಿಕಾರಿ ಸುಮ, ವಿವಿಧ ಇಲಾಖೆಗಳ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳು, ತಾಂತ್ರಿಕ ಸಂಯೋಜಕರು ಉಪಸ್ಥಿತರಿದ್ದರು.

# 27ರಂದು ನಾಡಪ್ರಭು ಕೆಂಪೇಗೌಡರ ಜಯಂತಿ

ರಾಮನಗರ

ನಾಡಪ್ರಭು ಕೆಂಪೇಗೌಡರ 517ನೇ ಜಯಂತಿಯನ್ನು ಇದೇ ಜೂ.27ರಂದು ಜಿಲ್ಲೆಯ ಜನರೆಲ್ಲಾ ಒಗ್ಗೂಡಿ, ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಆಚರಿಸಬೇಕು ಇದಕ್ಕೆ ಅಗತ್ಯವಿರುವ ಸಿದ್ದತೆಗಳನ್ನು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಆರ್.ಚಂದ್ರಯ್ಯ ಅವರು ತಿಳಿಸಿದರು.

ಅವರು ಜೂ. 15 ಸೋಮವಾರ ನಗರದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಆಚರಣೆ ಸಂಬಂಧ ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇದೇ ಜೂನ್ 27ರಂದು ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಚರಿಸಲಾಗುವುದು. ಅಲ್ಲಿ ವೇದಿಕೆ ಸಿದ್ಧತೆ, ಆಸನಗಳ ವ್ಯವಸ್ಥೆ, ಬ್ಯಾನರ್ ಮುದ್ರಣ ಅಳವಡಿಕೆ, ಹೂ ಕುಂಡಗಳನ್ನು ಆಕರ್ಷಕವಾಗಿ ಜೋಡಿಸುವುದು, ಕುಡಿಯುವ ನೀರು ಪೂರೈಕೆ, ಸ್ವಚ್ಚತೆ ಹಾಗೂ ಮಧ್ಯಾಹ್ನದ ಭೋಜನ ವ್ಯವಸ್ಥೆ ಮುಖ್ಯವಾಗಿ ಆಮಂತ್ರಣ ಪತ್ರಿಕೆಗಳ ಮುದ್ರಣ ಹಾಗೂ ವಿತರಣೆ ಸೇರಿದಂತೆ ಎಲ್ಲಾ ರೀತಿಯ ಸಿದ್ದತೆಗಳನ್ನು ವಿವಿಧ ಇಲಾಖೆಗಳ ಮುಖ್ಯಸ್ಥರಿಗೆ ಹಂಚಿಕೆ ಮಾಡಿ ಎಲ್ಲರೂ ಸೂಕ್ತವಾಗಿ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದರು.

ಜಯಂತಿಯಂದು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಹಾಗೂ ಮೆರವಣಿಗೆಗೆ ಚಾಲನೆ ನೀಡಲಾಗುವುದು. ಮೆರವಣಿಗೆಗೆ ಅಗತ್ಯವಿರುವ ಕಲಾತಂಡಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಒದಗಿಸಿ ಕೊಡಬೇಕು, ಹೆಚ್ಚಿನ ತಂಡಗಳನ್ನು ಒದಗಿಸುವಂತೆ ಇಲಾಖೆಯ ಕೇಂದ್ರ ಕಚೇರಿಗೆ ಪತ್ರ ಬರೆದು ಕಲಾತಂಡಗಳನ್ನು ಪೂರೈಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಅವರಿಗೆ ಎಡಿಸಿ ಸೂಚಿಸಿದರು.

ನಾಡಪ್ರಭು ಕೆಂಪೇಗೌಡರ ಜಯಂತಿಯು ಪಕ್ಷಾತೀತ ಹಾಗೂ ಜಾತ್ಯತೀತ ಕಾರ್ಯಕ್ರಮವಾಗಿದೆ. ಜಿಲ್ಲೆಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರಬೇಕು ಸಮಾಜಕ್ಕೆ ಕೊಡುಗೆ ನೀಡಿದ ಈ ರೀತಿಯ ಮಹನೀಯರ ಆದರ್ಶಗಳನ್ನು ಯುವ ಜನರಿಗೆ ತಿಳಿಸಿಕೊಡಲು ಮಹಾನುಭಾವರ ಜಯಂತಿಯನ್ನು ಆಚರಿಸಲಾಗುತ್ತದೆ, ಸಮಾಜ ಯಾವ ರೀತಿ ಇರಬೇಕೆಂಬುದನ್ನು ನಮಗೆ ತಿಳಿಸಿಕೊಟ್ಟ ಅವರ ಆದರ್ಶ ಗುಣಗಳನ್ನು ಇಂದಿನ ಯುವ ಪೀಳಿಗೆಗೆ ನಾವು ತಲುಪಿಸಲು ಜಯಂತಿಗಳು ನೆರವಾಗುತ್ತವೆ ಆದ ಕಾರಣ ಈ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕಿದೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಇದಕ್ಕೂ ಮುನ್ನ ಸಮುದಾಯದ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ ಕುರಿತಂತೆ ಸಲಹೆ ಸೂಚನೆಗಳನ್ನು ನೀಡಿದರು.



ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ನಂದಗೋಕುಲ ವೃದ್ಧಾಶ್ರಮದ ವತಿಯಿಂದ ಜೂ.15ರ ಸೋಮವಾರ ನಗರದ ನಂದಗೋಕುಲ ವೃದ್ಧಾಶ್ರಮದಲ್ಲಿ ವಿಶ್ವ ಹಿರಿಯರ ಮೇಲಿನ ದೌರ್ಜನ್ಯ ಜಾಗೃತಿ ದಿನವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ನಂದಗೋಕುಲ ವೃದ್ಧಾಶ್ರಮದ ಸಂಸ್ಥಾಪಕರಾದ ಡಾ.ಎನ್.ವಿ.ಲೋಕೇಶ್, ಅರೆಕಾಲಿಕ ಕಾನೂನು ಸ್ವಯಂ ಸೇವಕರಾದ ರಾಜೇಶ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವಕೀಲರಾದ ಎಚ್.ಡಿ.ಗೀತಾ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಆಡಳಿತ ಸಹಾಯಕರಾದ ದಿನೇಶ್, ಸಮಾಜ ಸೇವಕರಾದ ವೆಂಕಟಾಚಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# 21ರಂದು ವಿಶ್ವ ಯೋಗ ದಿನ

ಬೆಂ.ಗ್ರಾ ಜಿಲ್ಲೆ

'ಉತ್ತಮ ಆರೋಗ್ಯಕ್ಕಾಗಿ ಯೋಗ, ವೃದ್ಧಾಪ್ಯಕ್ಕಾಗಿ ಯೋಗ ಎಂಬ' ಘೋಷಣೆಯೊಂದಿಗೆ 12 ನೇ ಯೋಗ ದಿನವನ್ನು ಆಚರಿಸಲಾಗುವುದೆಂದು ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಲಾಗಿದ್ದ ವಿಶ್ವ ಯೋಗ ದಿನದ ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿ, ದೈನಂದಿನ ಕೆಲಸ ಕಾರ್ಯಗಳ ಜೊತೆ ಆರೋಗ್ಯ ಕಾಪಾಡಿಕೊಳ್ಳುವುದು ಎಲ್ಲರ ಆದ್ಯತೆಯಾಗಿದ್ದು, ಯೋಗದಿಂದ ರೋಗ ಜಯಿಸುವ ಯೋಗ ದಿನಾಚರಣೆ ಯಶಸ್ಸಿಗೆ ಎಲ್ಲಾ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು, ವಿವಿಧ ಯೋಗ ಸಂಸ್ಥೆಗಳವರು ಶ್ರಮಿಸಬೇಕೆಂದರು.

ದೇವನಹಳ್ಳಿ ಪಟ್ಟಣದ ಕ್ರೀಡಾಂಗಣದಲ್ಲಿ ಜರುಗುವ ಯೋಗ ದಿನಕ್ಕೆ ಸಚಿವರಾದ ಕೆ.ಹೆಚ್. ಮುನಿಯಪ್ಪ ಹಾಗೂ ಶಾಸಕರು ಮತ್ತು ಜನ ಪ್ರತಿನಿಧಿಗಳನ್ನು ಆಹ್ವಾನಿಸಲು ಸೂಚಿಸಿದರು.

ಯೋಗಾರ್ಥಿಗಳಿಗೆ ಯೋಗ ಮಾಡಲು ಅನುಕೂಲವಾಗುವಂತೆ ಉತ್ತಮ ಮ್ಯಾಟ್ಗಳ ವ್ಯವಸ್ಥೆ, ಜಮಖಾನ, ಟೀ ಶರ್ಟ್ ಗಳು, ಶುದ್ಧ ಕುಡಿಯುವ ನೀರು, ಉಪಹಾರ ವ್ಯವಸ್ಥೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಲಾಯಿತು.

ಆರೋಗ್ಯ ಇಲಾಖೆಯಿಂದ ಒಂದು ಅಂಬುಲೆನ್ಸ್ ಅನ್ನು ಸ್ಥಳದಲ್ಲಿ ನಿಯೋಜಿಸಬೇಕು, ವೈದ್ಯಾಧಿಕಾರಿಗಳು, ಸಿಬ್ಬಂದಿ ಔಷಧೋಪಚಾರವಿರಬೇಕು, ಕ್ರೀಡಾಂಗಣದಲ್ಲಿ ಉತ್ತಮ ವೇದಿಕೆ ಸಿದ್ಧಪಡಿಸಬೇಕು ಎಂದು ಜಿಲ್ಲಾ ಆಯುಷ್ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಅನುರಾಧ ಅವರು ಸೂಚಿಸಿದರು.

ಪೂರ್ವ ಭಾವಿ ಸಭೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ. ಕೆ.ಟಿ. ಅಶ್ವಿನಿ, ವೈದ್ಯಾಧಿಕಾರಿ ಡಾ. ವಿಜಯಲಕ್ಷ್ಮಿ, ಡಿ.ಹೆಚ್. ಲಕ್ಕ ಕೃಷ್ಣಾರೆಡ್ಡಿ, ಜಂಟಿ ನಿರದೇಶಕರು ಕೈಗಾರಿಕಾ ಇಲಾಖೆ ಯೋಗ ದಿನಾಚರಣೆಯ ನೋಡೆಲ್ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಪ್ರೇಮ, ಯೋಜನಾ ನಿರ್ದೇಶಕರಾದ ವಿಠ್ಠಲ್ ಕಾವ್ಳೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಎಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದರು.

# 'ಇ-ಪೌತಿ ಖಾತಾ ಆಂದೋಲನ-2 ಯಶಸ್ವಿಗೊಳಿಸಲು ಸಾರ್ವಜನಿಕರ ಸಹಕಾರ ಅಗತ್ಯ'

ತುಮಕೂರು

ಇ-ಪೌತಿ ಖಾತಾ ಆಂದೋಲನ-2 ಇಂದಿನಿಂದ ರಾಜ್ಯಾದ್ಯಂತ ಆರಂಭಗೊಂಡಿದ್ದು, ಗ್ರಾಮೀಣ ಪ್ರದೇಶಗಳ ಜನರಿಗೆ ಭೂ ದಾಖಲೆಗಳಿಗೆ ಸಂಬಂಧಿಸಿದ ಸೇವೆಗಳನ್ನು ಸುಲಭವಾಗಿ ಮತ್ತು ತ್ವರಿತವಾಗಿ ಒದಗಿಸುವ ಉದ್ದೇಶ ಹೊಂದಿದೆ. ಗ್ರಾಮಸ್ಥರು ಸಂಬಂಧಿಸಿದ ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಅಗತ್ಯ ದಾಖಲೆಗಳನ್ನು ಸಮಯಕ್ಕೆ ಸರಿಯಾಗಿ ಸಲ್ಲಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮನವಿ ಮಾಡಿದರು.

ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ ಅವರ ನಿರ್ದೇಶನದಂತೆ ಸೋಮವಾರ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು, ತುಮಕೂರು ತಾಲ್ಲೂಕಿನ ಬೆಳ್ಳಾವಿ ಹೋಬಳಿಯ ಬುಗುಡನಹಳ್ಳಿ ಗ್ರಾಮ ಹಾಗೂ ಕೋರ ಹೋಬಳಿಯ ಸಿ.ಟಿ.ಕೆರೆ ಗ್ರಾಮಗಳಿಗೆ ಭೇಟಿ ನೀಡಿ, ಇ-ಪೌತಿ



ಅರ್ಜಿಗಳ ಸ್ವೀಕೃತಿ ಮತ್ತು ವಿಲೇವಾರಿ ಪ್ರಕ್ರಿಯೆಯ ಪ್ರಗತಿಯನ್ನು ಪರಿಶೀಲಿಸಿದರು.

ಜಿಲ್ಲೆಯಲ್ಲಿ 3,36,000 ಇ-ಪೌತಿ ಖಾತೆಗಳನ್ನು ಸೃಜಿಸಬೇಕಾಗಿದ್ದು, ಸಾರ್ವಜನಿಕರು ಸೂಕ್ತ ದಾಖಲಾತಿಗಳನ್ನು ಪಡೆದು ಸಾರ್ವಜನಿಕರ ಅರ್ಜಿಗಳನ್ನು ತ್ವರಿತ ಹಾಗೂ ಪಾರದರ್ಶಕವಾಗಿ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದ ಜಿಲ್ಲಾಧಿಕಾರಿಗಳು, ಜನಸಾಮಾನ್ಯರಿಗೆ ಯಾವುದೇ ತೊಂದರೆ ಉಂಟಾಗದಂತೆ ಕ್ರಮವಹಿಸುವಂತೆ ತಿಳಿಸಿದರು.

ಇಂದಿನಿಂದ ಇ-ಪೌತಿ ಖಾತಾ ಆಂದೋಲನ-2 ಪ್ರಾರಂಭಿಸಲಾಗಿದ್ದು, ಇದರ ಭಾಗವಾಗಿ ಗ್ರಾಮಗಳಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಸ್ಥಳೀಯ ಕಂದಾಯ ಮತ್ತು ಮೋಜಿಣಿ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮಸ್ಥರನ್ನು ಭೇಟಿ ಮಾಡಿ, ಇ-ಪೌತಿ ಅರ್ಜಿಗಳ ಸ್ವೀಕೃತಿ, ದಾಖಲೆಗಳ ಪರಿಶೀಲನೆ, ಅರ್ಜಿಗಳ ವಿಲೇವಾರಿ ಹಾಗೂ ಖಾತಾ ಬದಲಾವಣೆ ಪ್ರಕ್ರಿಯೆಗಳ ಕುರಿತು ಸಮಗ್ರವಾಗಿ ಚರ್ಚಿಸಿದರು.

ಸಾರ್ವಜನಿಕರಿಗೆ ಕಾರ್ಯಕ್ರಮದ ಉದ್ದೇಶ ಹಾಗೂ ಇದರ ಪ್ರಯೋಜನಗಳ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ, ತುಮಕೂರು ಉಪವಿಭಾಗಾಧಿಕಾರಿ ನಾಹೀದಾ ಜಮ್ ಜಮ್, ತಹಶೀಲ್ದಾರ್ ರಾಜೇಶ್ವರಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಲೋಕಸಿರಿ ತಿಂಗಳ ಅತಿಥಿ ಕಾರ್ಯಕ್ರಮ



ರಾಮನಗರ

ಹಿರಿಯ ಕಲಾವಿದರನ್ನು ಗುರುತಿಸಿ, ಗೌರವಿಸಿ, ಪ್ರೋತ್ಸಾಹಿಸುವುದೇ ಜಾನಪದ ಪರಿಷತ್ತಿನ ಮೂಲ ಉದ್ದೇಶವಾಗಿದೆ. ಇಂತಹ ಕೆಲಸವನ್ನು ನಿರಂತರವಾಗಿ ಮಾಡುವುದು ನಮ್ಮ ಕರ್ತವ್ಯ ಎಂದು ಕರ್ನಾಟಕ ಜಾನಪದ ಪರಿಷತ್ತಿನ ಮ್ಯಾನೇಜಿಂಗ್ ಟ್ರಸ್ಟಿಗಳಾದ ಆದಿತ್ಯ ನಂಜರಾಜ್ ಅವರು ತಿಳಿಸಿದರು.

ಅವರು ಭಾನುವಾರ ರಾಮನಗರದ ಜಾನಪದ ಲೋಕದಲ್ಲಿ ಡಾ. ಎಚ್.ಎಲ್. ನಾಗೇಗೌಡರ ನೆನಪಿನಲ್ಲಿ ಪ್ರತಿ ತಿಂಗಳ ನಡೆಯುವ ಲೋಕಸಿರಿ ತಿಂಗಳ ಅತಿಥಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಾನಪದ ಲೋಕವು ತಿಂಗಳಿಗೊಬ್ಬರು ಜಾನಪದ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಕಲಾವಿದರಿಗೆ ಲೋಕಸಿರಿ ಗೌರವ ನೀಡಲಾಗುತ್ತಿದೆ ಎಂದು ಹೇಳಿದರು.

ವಿಭೂತಿಕೆರೆ ಗ್ರಾಮಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಾದ ರಂಗೇಗೌಡ ಅವರು ಮಾತನಾಡಿ, ಜಾನಪದ ಸಾಹಿತ್ಯ, ಜಾನಪದ ಸಂಗೀತ ಎಲ್ಲಾ ಕಲೆಗಳ ತಾಯಿಬೇರು. ಯಾವುದೇ ಭಾಷೆಗೂ ತಾಯಿಬೇರು ಗಟ್ಟಿಯಾದಷ್ಟು ಮರ ಗಟ್ಟಿಯಾಗಿ ಬೆಳೆಯಲು ಸಾಧ್ಯವಾಗುತ್ತದೆ. ಹಾಗೆಯೇ ಜನಪದ ಬೆಳೆದಷ್ಟು ನಮ್ಮ ಸಂಸ್ಕೃತಿ ಬೆಳೆಯುತ್ತದೆ. ಈ ಸಂಸ್ಕೃತಿಯನ್ನು ಮುಂದಿನ ತಲೆಮಾರಿಗೆ ತಲುಪಿಸುವ ಕೆಲಸವನ್ನು ಜಾನಪದ ಲೋಕ ತುಂಬಾ ಅಚ್ಚುಕಟ್ಟಾಗಿ ನಿರ್ವಹಿಸುತ್ತಾ ಬಂದಿದೆ. ಜಾನಪದ ಲೋಕಕ್ಕೆ ಕುಟುಂಬ ಸಮೇತರಾಗಿ ಬಂದು ಪಾಲ್ಗೊಂಡು ಇಲ್ಲಿನ ಜನಪದ ಸಂಗ್ರಹ, ಸಂಸ್ಕೃತಿ, ಕಲೆ, ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದರು.

ರಾಗಿ ಬೀಸುವ ಪದ, ರಾಶಿಪದ, ಲಾಲಿ, ದೂರಿಪದ, ಸೋಬಾನೆಯ ಶಾಸ್ತ್ರದ ಪದಗಳನ್ನು ಜೊತೆಗೆ ಬಿಳಿಗಿರಿರಂಗಯ್ಯ, ಮುಡುಕುತೊರೆ ಮಲ್ಲಯ್ಯ, ಮಾದೇಶ್ವರ ಕುರಿತ ಹಾಡುಗಳನ್ನು ತಮ್ಮದೇ ಆದ ಧಾಟಿಯಲ್ಲಿ ಹಾಡಿ ಕಾರ್ಯಕ್ರಮಕ್ಕೆ ಮೆರಗು ತಂದರು. ಹೀಗೆ ಒಂದು ಹಾಡೆಂದರೆ ಹದಿನಾರ ಹೇಳೇನು ಎನ್ನುತ್ತಾರೆ.

ಕಪ್ಪಡಿ, ಚಿಕ್ಕಲ್ಲೂರು, ಜಾನಪದ ಲೋಕ, ಚಾಮರಾಜನಗರ, ನಂಜನಗೂಡು, ಮಂಡ್ಯ ಜಿಲ್ಲೆಗಳಲ್ಲಿ ಕನ್ನಡ ರಾಜ್ಯೋತ್ಸವ, ಗಡಿನಾಡ ಉತ್ಸವ, ಮೊದಲಾದ ಕನ್ನಡದ ಹಬ್ಬಗಳಲ್ಲಿ ಅಲ್ಲದೇ ಊರಿನ ಹಬ್ಬ-ಹರಿದಿನ, ಜಾತ್ರೆ-ಉತ್ಸವಗಳಲ್ಲಿ ಹಾಡಿರುವ ಗ್ರಾಮೀಣ ಸೊಗಡಿನ ಪ್ರತಿಭೆಯಾಗಿರುವ ಚಿಕ್ಕತಾಯಮ್ಮ ಅವರ ಪ್ರತಿಭೆ ಗುರುತಿಸಿ, ಸ್ಥಳೀಯ ಸಂಘ-ಸಂಸ್ಥೆಗಳು ಕರೆದು ಸನ್ಮಾನಿಸಿವೆ. ಜಾನಪದ ಲೋಕಕ್ಕೆ ಆಹ್ವಾನಿಸಿ, ಲೋಕಸಿರಿ ತಿಂಗಳ ಅತಿಥಿ-117ರ ಕಾರ್ಯಕ್ರಮದಲ್ಲಿ ಗೌರವಿಸಲಾಯಿತು.

ಜಾನಪದ ಲೋಕದ ಕಾರ್ಯನಿರ್ವಹಣಾಧಿಕಾರಿ ಸರಸವಾಣಿ ಸ್ವಾಗತಿಸಿದರು. ಮ್ಯೂಸಿಯಂ ಕ್ಯೂರೇಟರ್ ಡಾ. ರವಿ ಯು.ಎಂ, ಕಲಾವಿದರೊಂದಿಗೆ ಸಂವಾದ ನಡೆಸಿಕೊಟ್ಟರು. ವಿದ್ಯಾರ್ಥಿ ರಾಜಶೇಖರ್ ನಿರೂಪಿಸಿದರು. ಸಂಯೋಜಕ ಡಾ. ಸಂದೀಪ್ ಕೆ.ಎಸ್, ಲೋಕದ ಸಿಬ್ಬಂದಿಗಳು, ಡಿಪ್ಲೊಮಾ

# ಕಡ್ಲೆಚಿಕ್ಕಿ ಹಾರಕ್ಕೆ ಮನಸೋತ ಪರಮೇಶ್ವರ

ಕೊರಟಗೆರೆ

ಕೆಪಿಸಿಸಿ ಅಧ್ಯಕ್ಷ, ಗೃಹಸಚಿವ, ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಸ್ಥಾನವನ್ನು ನೀಡಿದ ಕೊರಟಗೆರೆ ಕ್ಷೇತ್ರದ ಮತದಾರರ ಋಣ ನನ್ನ ಮೇಲಿದೆ. 2028ರಲ್ಲಿಯೂ ಮತ್ತೆ ನಮ್ಮ ಸರ್ಕಾರ ಅಧಿಕಾರಕ್ಕೆ ಬರಲಿದ್ದು, ಕೊರಟಗೆರೆ ಕ್ಷೇತ್ರವನ್ನು ಮತ್ತಷ್ಟು ಅಭಿವೃದ್ಧಿಪಡಿಸುತ್ತೇನೆ. ನನ್ನ ಆರೋಗ್ಯಕ್ಕಿಂತ ನಿಮ್ಮ ಅಭಿಮಾನವೇ ದೊಡ್ಡದು ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಹೇಳಿದರು.

ಪಟ್ಟಣದ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಬ್ಲಾಕ್ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್ ಹಾಗೂ ಡಾ.ಜಿ.ಪರಮೇಶ್ವರ ಅಭಿಮಾನಿ ಬಳಗದ ವತಿಯಿಂದ ಭಾನುವಾರ ಆಯೋಜಿಸಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎತ್ತಿನಹೊಳೆ ಯೋಜನೆಯನ್ನು ಯಾವುದೇ ಕಾರಣಕ್ಕೂ ಕೈಬಿಡುವುದಿಲ್ಲ. ರೈತರ ನೀರಾವರಿ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಯೋಜನೆಯನ್ನು ಪೂರ್ಣಗೊಳಿಸುತ್ತೇವೆ ಎಂದು ಭರವಸೆ ನೀಡಿದರು.

ಬೈರಗೊಂಡ್ಲು ಭಾಗದ ರೈತರು ವಿರೋಧ ಪಕ್ಷಗಳ ಮಾತು ಕೇಳಿ ನೀರಾವರಿ ಯೋಜನೆಗೆ ಅಡ್ಡಿಪಡಿಸಿದರು. ಅಲ್ಲಿ ಸುಮಾರು 2500 ಎಕರೆ ವ್ಯಾಪ್ತಿಯ ಜಲಾಶಯ ನಿರ್ಮಾಣದ ಅವಕಾಶ ಕೈತಪ್ಪಿತು. ಇದೀಗ ವಡೇರಹಳ್ಳಿ ಬಳಿ ಕೇವಲ 500 ಎಕರೆ ಭೂಮಿ ದೊರೆತರೂ ಯೋಜನೆಗೆ ಅನುಕೂಲವಾಗುತ್ತದೆ. ಆದರೆ ಅದಕ್ಕೂ ವಿರೋಧ ವ್ಯಕ್ತವಾಗುತ್ತಿದೆ. ಸರ್ಕಾರ ಕೈಕಟ್ಟಿ ಕುಳಿತುಕೊಳ್ಳುವುದಿಲ್ಲ. ವಿನಯಪೂರ್ವಕವಾಗಿ ಮನವಿ



ಮಾಡುತ್ತೇನೆ, ಯೋಜನೆಗಾಗಿ ಭೂಮಿ ನೀಡಲು ವಿರೋಧ ಮಾಡಬೇಡಿ ಎಂದು ರೈತರಿಗೆ ಮನವಿ ಮಾಡಿದರು.

ತುಮಕೂರು ಮಾಜಿ ಸಂಸದ ಮುದ್ದಹನುಮೇಗೌಡ ಮಾತನಾಡಿ, ರಾಜ್ಯದಲ್ಲಿ ಎರಡು ಬಾರಿ ಉಪಮುಖ್ಯಮಂತ್ರಿಯಾಗಿರುವ ಕೀರ್ತಿ ಡಾ. ಜಿ. ಪರಮೇಶ್ವರ ಅವರದ್ದು. ಎರಡು ಬಾರಿ ಮುಖ್ಯಮಂತ್ರಿ ಸ್ಥಾನ ಕೈತಪ್ಪಿದ್ದು, 2028ರಲ್ಲಿ ಅದು ನನಸಾಗಲಿ ಎಂದು ಹಾರೈಸಿದರು.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಜೋಡೆತ್ತು ಮತ್ತೆ ಅಧಿಕಾರಕ್ಕೆ ಬರಬೇಕು. ಎತ್ತಿನಹೊಳೆ ಹಾಗೂ ರಾಯದುರ್ಗ ರೈಲು ಯೋಜನೆಗಳು ಶೀಘ್ರ ಪೂರ್ಣಗೊಂಡರೆ ಜನರ ಆರ್ಥಿಕ ಸ್ಥಿತಿ ಸುಧಾರಣೆಯಾಗಲಿದೆ ಎಂದು ಹೇಳಿದರು.

ಪಾವಗಡ ಶಾಸಕ ವೆಂಕಟೇಶ್ ಮಾತನಾಡಿ, 2013ರಲ್ಲಿ ಕೊರಟಗೆರೆಯಲ್ಲಿ ಡಾ. ಜಿ. ಪರಮೇಶ್ವರ ಗೆದ್ದಿದ್ದರೆ ಅವರು ಮುಖ್ಯಮಂತ್ರಿಯಾಗುತ್ತಿದ್ದರು. ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದ ಕೀರ್ತಿಯೂ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ರಾಜಕೀಯ ಕ್ಷೇತ್ರದಲ್ಲಿ ಡಾ. ಜಿ. ಪರಮೇಶ್ವರ ಇರುವವರೆಗೆ ಮನೆ ಮಗನಾಗಿ ಇರುತ್ತೇನೆ. 2028ರಲ್ಲಿ ಕೊರಟಗೆರೆ ಕ್ಷೇತ್ರದ ಜನರ ಕನಸು ಮತ್ತೆ ನನಸಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ, ಮಾಜಿ ಶಾಸಕ ಗಂಗಹನುಮಯ್ಯ, ವಿಧಾನ ಪರಿಷತ್ ಸದಸ್ಯ ಶ್ರೀನಿವಾಸ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಶ್ವತ್ಥನಾರಾಯಣ್, ಕೆಪಿಸಿಸಿ ಕಾರ್ಯದರ್ಶಿ ದಿನೇಶ್, ಕಾಂಗ್ರೆಸ್ ಮಹಿಳಾಧ್ಯಕ್ಷೆ ಜಯಮ್ಮ, ಯುವ ಅಧ್ಯಕ್ಷ ಬೈರೇಶ್, ಮುಖಂಡರಾದ ಪ್ರೇಮ ಮಹಾಲಿಂಗಪ್ಪ, ಬಲರಾಮಯ್ಯ, ಕೆ.ಆರ್. ಓಬಳರಾಜು, ಎಲ್. ರಾಜಣ್ಣ, ವಿನಯ್, ಅರವಿಂದ್, ರಘುವೀರ್, ಕೆಎಲ್ಎಂ ಮಂಜು, ಅಮರ, ಮಹೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗ್ಯಾರಂಟಿ ಪರಿಷ್ಕರಣೆಗೆ ಕಿಡಿ

ಬೆಂಗಳೂರು

ಗ್ಯಾರಂಟಿ ಯೋಜನೆ ಪರಿಷ್ಕರಣೆಗೆ ಮುಂದಾಗಿರೋ ಸರ್ಕಾರದ ಕ್ರಮಕ್ಕೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕಿಡಿಕಾರಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪ್ರತಿಕ್ರಿಯೆ ನೀಡಿರುವ ನಿಖಿಲ್, ಸತ್ಯ ಕೊನೆಗೂ ಹೊರಗೆ ಬಂದಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಸತ್ಯ ಕೊನೆಗೂ ಹೊರಬಂದಿದೆ. ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳಿಗೆ ಸಂಪೂರ್ಣವಾಗಿ ಮರುಅರ್ಜಿ ಸಲ್ಲಿಸಲು ಸಿಎಂ ಡಿಕೆ ಶಿವಕುಮಾರ್ ಅವರು ನೀಡಿರುವ ಆದೇಶ, ಕಳೆದ 3 ವರ್ಷಗಳ ಸಿದ್ದರಾಮಯ್ಯ ಅವರ ನೇತೃತ್ವದ ಆಡಳಿತದ ಮಹಾವೈಫಲ್ಯಕ್ಕೆ ಅವರದ್ದೇ ಸರ್ಕಾರ ನೀಡಿದ ಅಧಿಕೃತ ಸಾಕ್ಷಿಯಾಗಿದೆ.

ಯೋಜನೆಗಳ ಉಸ್ತುವಾರಿ ಹೆಸರಿನಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಯಲ್ಲಿದ್ದ 4,580 ಕಾಂಗ್ರೆಸ್ ಕಾರ್ಯಕರ್ತರು ಸಾರ್ವಜನಿಕರ 23.32 ಕೋಟಿ ರೂ. ತೆರಿಗೆ ಹಣವನ್ನು ಸಂಬಳದ ರೂಪದಲ್ಲಿ ಲೂಟಿ ಮಾಡಿದ್ದನ್ನು ಬಿಟ್ಟರೆ ಸಾಧಿಸಿದ್ದಾದರೂ ಏನು? ಸ್ವಪಕ್ಷದ ಕಾರ್ಯಕರ್ತರ ಜೇಬು ತುಂಬಿಸಲು ಜನರ ಹಣ ಪೋಲು ಮಾಡಿ, ಈಗ ಹಗಲಿರುಳು ಮೋಸ ಮಾಡಿದ್ದಾರೆ ಎಂದರು.

# ದೇಣಿಗೆಯಲ್ಲಿ ಅಕ್ರಮ ಪ್ರಕರಣ, ಯುಪಿ ಸರ್ಕಾರದಿಂದ 'ಎಸ್ಐಟಿ' ರಚನೆ

ಲಕ್ನೋ

ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ದೇವಸ್ಥಾನದ ದೇಣಿಗೆ ನಿರ್ವಹಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಆರೋಪ ಈಗ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ. ಸಾರ್ವಜನಿಕರ ವಿಶ್ವಾಸವನ್ನು ಕಾಪಾಡಲು ಈ ಬಗ್ಗೆ ಸ್ವತಂತ್ರ ತನಿಖೆ ನಡೆಸಬೇಕು ಎಂದು ಕೋರಿ ಸಲ್ಲಿಕೆಯಾಗಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ನಡೆಸಿದೆ.

ಇದೇ ವೇಳೆ, ಪ್ರಕರಣದ ಪಾರದರ್ಶಕತೆ ಮತ್ತು ಸತ್ಯಾಸತ್ಯತೆಯನ್ನು ಬಯಲಿಗೆಳೆಯಲು ಉತ್ತರ ಪ್ರದೇಶ ಸರ್ಕಾರವು ಈಗಾಗಲೇ ಉನ್ನತ ಮಟ್ಟದ ವಿಶೇಷ ತನಿಖಾ ತಂಡವನ್ನು ರಚಿಸುವ ಮೂಲಕ ತ್ವರಿತ ಕ್ರಮ ಕೈಗೊಂಡಿದೆ. ವಕೀಲ ಅನೂಪ್



ಅವಸ್ಥಿ ಅವರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಅಯೋಧ್ಯೆ ಮಂದಿರದ ದೇಣಿಗೆಗೆ ಸಂಬಂಧಿಸಿದ ಆರೋಪಗಳನ್ನು ನ್ಯಾಯಾಲಯವೇ ನೇರವಾಗಿ ಪರಿಶೀಲಿಸಬೇಕು ಮತ್ತು ಸ್ವತಂತ್ರ ತನಿಖೆಗೆ ಆದೇಶಿಸಬೇಕು ಎಂದು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರಿಗೆ ಮನವಿ ಮಾಡಿದ್ದಾರೆ.

ಈ ಮನವಿಗೆ ಸ್ಪಂದಿಸಿದ ಸಿಜೆಐ ಸೂರ್ಯ ಕಾಂತ್ ಅವರು, ನ್ಯಾಯಾಲಯದಲ್ಲಿ ಇಂತಹ ವಿಷಯಗಳ ಬಗ್ಗೆ ಕೇವಲ ಮೌಖಿಕವಾಗಿ ಹೇಳುವ ಬದಲು ಅಧಿಕೃತವಾಗಿ ಲಿಖಿತ ಟಿಪ್ಪಣಿಗಳನ್ನು ಸಲ್ಲಿಸುವಂತೆ ಸೂಚಿಸಿದ್ದಾರೆ. ಆ ಟಿಪ್ಪಣಿಗಳನ್ನು ಪರಿಶೀಲಿಸಿದ ನಂತರ ಯಾವುದು ಪ್ರಸ್ತುತ ಎಂಬುದನ್ನು ನಿರ್ಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಯುಪಿ ಸರ್ಕಾರದಿಂದ ಮೂವರು ಸದಸ್ಯರ ತಂಡ ರಚನೆ: ದೇಣಿಗೆ ಪೆಟ್ಟಿಗೆಗಳ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ವದಂತಿಗಳಿಗೆ ಬ್ರೇಕ್ ಹಾಕಲು ಮತ್ತು ಸತ್ಯವನ್ನು ಜನರೆದುರು ತರಲು 'ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್' ಸ್ವತಃ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ನಿಷ್ಪಕ್ಷಪಾತ ತನಿಖೆಗಾಗಿ ವಿನಂತಿಸಿತ್ತು. ಟ್ರಸ್ಟ್‌ನ ಕೋರಿಕೆಯ ಮೇರೆಗೆ ಮುಖ್ಯಮಂತ್ರಿಗಳು ಮೂವರು ಉನ್ನತ ಅಧಿಕಾರಿಗಳ ವಿಶೇಷ ತನಿಖಾ ತಂಡವನ್ನು ರಚಿಸಿದ್ದಾರೆ.

# ಸಾರ್ವಜನಿಕ ಆಸ್ಪತ್ರೆಗೆ ಕಾರ್ಪೊರೇಟ್ ಕಾಯಕಲ್ಪ

ಚಿಂತಾಮಣಿ

ದಶಕಗಳ ಬೇಡಿಕೆ ಹಾಗೂ ಜನರ ಬಹುಕಾಲದ ಕನಸಿನಂತೆ ಚಿಂತಾಮಣಿ ಸಾರ್ವಜನಿಕ ಆಸ್ಪತ್ರೆಯನ್ನು ಅತ್ಯಾಧುನಿಕ ಕಾರ್ಪೊರೇಟ್ ಮಾದರಿಯ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಬೃಹತ್ ಅಭಿವೃದ್ಧಿ ಕಾರ್ಯಕ್ಕೆ ಚಾಲನೆ ದೊರೆತಿದೆ. ಕಾಮಗಾರಿ ನಡೆಯುವ ಅವಧಿಯಲ್ಲಿ ರೋಗಿಗಳು ಹಾಗೂ ಸಾರ್ವಜನಿಕರಿಗೆ ಉಂಟಾಗುವ ತಾತ್ಕಾಲಿಕ ತೊಂದರೆಗಳಿಗೆ ಸಹಕರಿಸುವಂತೆ ಮಾಜಿ ಸಚಿವ ಡಾ.ಎಂ.ಸಿ. ಸುಧಾಕರ್ ಮನವಿ ಮಾಡಿದರು.

ನಗರದ ಸಾರ್ವಜನಿಕ ಆಸ್ಪತ್ರೆ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ಪರಿಶೀಲಿಸಿ, ಅಧಿಕಾರಿಗಳು, ಇಂಜಿನಿಯರ್‌ಗಳು ಹಾಗೂ ಗುತ್ತಿಗೆದಾರರೊಂದಿಗೆ ಸಮಾಲೋಚನೆ



ನಡೆಸಿದ ಬಳಿಕ ಅವರು ಮಾತನಾಡಿದರು.

ಮುಂದಿನ ಒಂದು ವರ್ಷದ ಅವಧಿಯಲ್ಲಿ ಆಸ್ಪತ್ರೆ ಸಂಪೂರ್ಣ ಸುಸಜ್ಜಿತ ರೂಪ ಪಡೆಯಲಿದ್ದು, ಈ ಬದಲಾವಣೆಯ ಸಂದರ್ಭದಲ್ಲಿ ಕೆಲ ವಾರ್ಡ್‌ಗಳನ್ನು ತಾತ್ಕಾಲಿಕವಾಗಿ ಸ್ಥಳಾಂತರಿಸಲಾಗುತ್ತಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಕೈಗೊಳ್ಳಲಾಗುತ್ತಿರುವ ಈ ಅಭಿವೃದ್ಧಿ ಕಾರ್ಯಕ್ಕೆ ಜನರು ಸಹಕಾರ ನೀಡಬೇಕು ಎಂದು ವಿನಂತಿಸಿದರು.

1993-94ರಲ್ಲಿ ತಮ್ಮ ತಂದೆಯವರ ಅವಧಿಯಲ್ಲಿ 100 ಹಾಸಿಗೆಗಳ ಆಸ್ಪತ್ರೆ ಮಂಜೂರಾಗಿತ್ತು. ಆದರೆ ಕಾಲಕ್ರಮೇಣ ನಿರ್ವಹಣೆಯ ಕೊರತೆಯಿಂದ ಆಸ್ಪತ್ರೆ ಶಿಥಿಲಾವಸ್ಥೆಗೆ ತಲುಪಿತ್ತು. ಕೋವಿಡ್ ಸಂದರ್ಭದಲ್ಲಿ ಆಸ್ಪತ್ರೆಯ ದುಸ್ಥಿತಿಯನ್ನು ಹತ್ತಿರದಿಂದ ಕಂಡ ಬಳಿಕ ಅದನ್ನು ಸಂಪೂರ್ಣ ಪುನರ್ನಿರ್ಮಿಸಲು ತೀರ್ಮಾನ ಕೈಗೊಂಡಿದ್ದಾಗಿ ಹೇಳಿದರು.

ಕ್ಷೇತ್ರದ ಜನರ ಆಶೀರ್ವಾದದಿಂದ ಚುನಾವಣೆಯಲ್ಲಿ ಜಯಗಳಿಸಿ ಸಚಿವರಾಗಿದ್ದ ವೇಳೆ ಆರೋಗ್ಯ ಇಲಾಖೆಯಿಂದ 14 ಕೋಟಿ ರೂಪಾಯಿ ಹಾಗೂ ಉನ್ನತ ಶಿಕ್ಷಣ ಇಲಾಖೆಯಿಂದ 15 ಕೋಟಿ ರೂಪಾಯಿ ಸೇರಿ ಒಟ್ಟು ಸುಮಾರು 29 ಕೋಟಿ ರೂಪಾಯಿಗಳ ಅನುದಾನವನ್ನು ತರಲು ಸಾಧ್ಯವಾಯಿತು ಎಂದು ತಿಳಿಸಿದರು.

ಹಳೆಯ ಕಟ್ಟಡದ ತಳಹದಿಯನ್ನು ಬಲಪಡಿಸಿ, ಗುಣಮಟ್ಟದ ಕಾಂಕ್ರೀಟ್ ಕಂಬಗಳೊಂದಿಗೆ ನಾಲ್ಕು ಅಂತಸ್ತಿನ ಆಧುನಿಕ ಕಟ್ಟಡ ನಿರ್ಮಿಸಲಾಗುತ್ತಿದೆ. ಆಸ್ಪತ್ರೆಯ ಹೊರ ವಿನ್ಯಾಸವೂ ಕಾರ್ಪೊರೇಟ್ ಆಸ್ಪತ್ರೆಗಳಿಗೆ ಸಾಟಿಯಾಗುವಂತೆ ರೂಪುಗೊಳ್ಳಲಿದೆ ಎಂದು ಹೇಳಿದರು.

ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಮೇಲ್ಭಾಗದಲ್ಲಿ ನಿರ್ಮಾಣ ಹಂತದಲ್ಲಿರುವ ಹೊಸ ಕಟ್ಟಡಕ್ಕೆ ಡಯಾಲಿಸಿಸ್ ಸೇರಿದಂತೆ ವಿವಿಧ ವಾರ್ಡ್‌ಗಳನ್ನು ಸ್ಥಳಾಂತರಿಸಲಾಗುತ್ತಿದೆ. ಅಲ್ಲದೆ, ಸುಮಾರು ಎರಡೂವರೆ ತಿಂಗಳಲ್ಲಿ ಪೂರ್ಣಗೊಳ್ಳಲಿರುವ ಕ್ರಿಟಿಕಲ್ ಕೇರ್ ಘಟಕಕ್ಕೆ ಐಸಿಯು ವಿಭಾಗವನ್ನು ವರ್ಗಾಯಿಸುವ ಮೂಲಕ ಚಿಕಿತ್ಸಾ ಸೇವೆಗೆ ಯಾವುದೇ ಅಡಚಣೆ ಆಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು.

ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿರುವ ಈ ಆಸ್ಪತ್ರೆ ಶೀಘ್ರದಲ್ಲೇ ಜನಸಾಮಾನ್ಯರಿಗೆ ಅತ್ಯುತ್ತಮ ವೈದ್ಯಕೀಯ ಸೇವೆಗಳನ್ನು ಒದಗಿಸುವ ಕೇಂದ್ರವಾಗಿ ರೂಪುಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

17/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ ।
ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎಸ್‌ಐಆರ್ ಕುರಿತು ವಿಶೇಷ ಜಾಗೃತಿ ಕಾರ್ಯಾಗಾರ

ತುಮಕೂರು

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ(ಎಸ್.ಐ.ಆರ್) ಕುರಿತಂತೆ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ವಿವಿಧ ಸಂಘ ಸಂಸ್ಥೆಗಳ ಸಹಕಾರದಲ್ಲಿ ಎಸ್.ಐ.ಆರ್.ಕುರಿತ ವಿಶೇಷ ಜಾಗೃತಿ ಕಾರ್ಯಾಗಾರವನ್ನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಚಂದ್ರಶೇಖರಗೌಡ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿತ್ತು.

ವಿಧಾನಪರಿಷತ್ ಸದಸ್ಯ ಡಾ.ರಮೇಶಬಾಬು ಮಾತನಾಡಿ,ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ನಂತರವು ಅರ್ಹ ಮತದಾರ ತನ್ನ ಹಕ್ಕಿನಿಂದ ವಂಚಿತರಾಗುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷ ನಡೆಸುತ್ತಿರುವ ಎರಡನೇ ಸ್ವಾತಂತ್ರ ಹೋರಾಟ ಇದಾಗಿದೆ.

ಹಾಗಾಗಿ ಪ್ರತಿಯೊಬ್ಬ ಮತದಾರರು ಫಾರಂ ತುಂಬುವ ಮೂಲಕ ತಮ್ಮ ಹಕ್ಕುಗಳನ್ನು ಉಳಿಸಿಕೊಳ್ಳಲು ಕಾಂಗ್ರೆಸ್ ಕಾರ್ಯಕರ್ತರು ಪ್ರತಿ ಮತದಾರರನ್ನು ಸಂಪರ್ಕಿಸಿ,ಅವರಲ್ಲಿ ಜಾಗೃತಿ ಮೂಡಿಸುವ ಮೂಲಕ ಅವರ ಹಕ್ಕುಗಳನ್ನು ಕಾಪಾಡಬೇಕಿದೆ ಎಂದರು.

ಕೇಂದ್ರ ಸರಕಾರ ಈಗಾಗಲೇ ಎಸ್.ಐ.ಆರ್.ನಂತರ ಅಧಿಕೃತ ಮತಪಟ್ಟಿಯಲ್ಲಿ ಇರುವ ಮತದಾರರಿಗೆ ಮಾತ್ರ ಸರಕಾರದ ಸೌಲಭ್ಯಗಳು ನೀಡಲಾಗುವುದು ಎಂದು ಹೇಳಿದೆ.ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಸಹ ಇದೇ ವಿಚಾರವನ್ನು ಬಹಳ ಸ್ಪಷ್ಟವಾಗಿ ಹೇಳಿದ್ದಾರೆ.ಎಸ್.ಐ.ಆರ್.ವೇಳೆ ನಾವು ಕೊಂಚ ಎಡವಿದರು ಮತದಾನದ ಹಕ್ಕಿನ ಜೊತೆಗೆ,ಸರಕಾರದ ಸವಲತ್ತುಗಳಿಂದಲು ವಂಚಿತವಾಗಬೇಕಾಗುತ್ತಿದೆ. ಹಾಗಾಗಿ ಕಾರ್ಯಾಗಾರದಲ್ಲಿ ಪಾಲ್ಗೊಂಡಿರುವ ಎಲ್ಲಾ ಕಾರ್ಯಕರ್ತರು ಸಹ ಪ್ರತಿ ಮಾಹಿತಿಯನ್ನು ಅರ್ಥ ಮಾಡಿಕೊಂಡು,ಜನರಿಗೆ ಅದನ್ನು ಅರ್ಥಮಾಡಿಸಿ,ಫಾರಂ ತುಂಬುವಂತೆ ಮಾಡಿ,ತಮ್ಮ ಹಕ್ಕುಗಳನ್ನು ಉಳಿಸಿಕೊಳ್ಳುವಂತೆ ನೋಡಿಕೊಳ್ಳಬೇಕಾಗಿದೆ ಎಂದು ಡಾ.ರಮೇಶಬಾಬು ತಿಳಿಸಿದರು.

ಕೆಪಿಸಿಸಿ ಉಪಾಧ್ಯಕ್ಷರಾದ ಮುರುಳೀಧರ ಹಾಲಪ್ಪ ಮಾತನಾಡಿ,ಎಸ್.ಐ.ಆರ್.ನಿಂದಾಗಿ ಎಷ್ಟೇ ಅತಿರಥ,ಮಹಾರಥ ರೆನಿಸಿಕೊಂಡ ರಾಜಕೀಯ ಧುರೀಣರು ಸಹ ತೆಮಿಳುನಾಡು ಮತ್ತು ಪಶ್ಚಿಮ ಬಂಗಾಳದಲ್ಲಿ ಸೋಲು ಕಂಡಿದ್ದಾರೆ. ಎಸ್.ಐ.ಆರ್ ನಿಂದ ಶಾಸನ ಸಭೆ, ಸಂಸತ್ ಸದಸ್ಯರಿಗೆ ಮಾತ್ರ ತೊಂದರೆಯಾಗುವುದಿಲ್ಲ.ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ,ಗ್ರಾಮಪಂಚಾಯಿತಿ ಚುನಾವಣೆಗೆ ಸ್ಪರ್ಧಿಸುವವರಿಗೂ ಹೊಡೆತ ಬೀಳಲಿದೆ. ಹಾಗಾಗಿ ಪ್ರತಿ ಹಳ್ಳಿಯಲ್ಲಿಯೂ ಮತದಾರರ ಹಕ್ಕು ರಕ್ಷಣೆಗೆ ಕಾಂಗ್ರೆಸ್ ಕಾರ್ಯಕರ್ತರು ಶ್ರಮಿಸಬೇಕಾಗಿದೆ. ಒಂದು ವೇಳೆ ಮೈಮರೆತರೆ ನಾವು ಸೋಲುವ ಜೊತೆಗೆ, ಪಕ್ಷವೂ ಅಧಿಕಾರ ಕಳೆದುಕೊಳ್ಳಲಿದೆ ಎಂದು ಎಚ್ಚರಿಕೆ

## 3.89 ಲಕ್ಷ ಗೃಹಲಕ್ಷ್ಮಿ ಫಲಾನುಭವಿಗಳಿಗೆ ಕೊಕ್..!

ಬೆಂಗಳೂರು

5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಲಕ್ಷ್ಮಿಗೆ ರಾಜ್ಯ ಸರ್ಕಾರ ಮೇಜರ್ ಸರ್ಜರಿ ಮಾಡಿದೆ. ಯೋಜನೆಯ ದುರುಪಯೋಗ ಕಂಡು ಬಂದಿರುವ ಹಿನ್ನೆಲೆ ಪರಿಷ್ಕರಣೆ ನಡೆದಿದ್ದು, ಫಲಾನುಭವಿಗಳು ಮರು ಅರ್ಜಿ ಸಲ್ಲಿಸಬೇಕೆಂದು ಸ್ವತಃ ಸಿಎಂ ಡಿ.ಕೆ. ಶಿವಕುಮಾರ್ ಅವರೇ ಈಗಾಗಲೇ ಮಾಹಿತಿ ನೀಡಿದ್ದಾರೆ. ಈಗಿರುವ ಮಾಹಿತಿಯ ಪ್ರಕಾರ 1.30 ಕೋಟಿ ಗೃಹಲಕ್ಷ್ಮಿಯರ ಪೈಕಿ 3.89 ಲಕ್ಷ ಫಲಾನುಭವಿಗಳಿಗೆ ಭರ್ಜರಿ ಶಾಕ್ ಕೊಟ್ಟಿದೆ.

ವಿವಿಧ ಇಲಾಖೆಗಳ ಮಾಹಿತಿಯನ್ನು ಸಂಗ್ರಹಿಸಿ ಪರಿಶೀಲನೆ ನಡೆಸಿದ ಬಳಿಕ ಅನರ್ಹ ಫಲಾನುಭವಿಗಳನ್ನು ಗುರುತಿಸಿರುವ ಇಲಾಖೆ, ಅವರ ಖಾತೆಗಳಿಗೆ ಹಣ ವರ್ಗಾವಣೆ ಸ್ಥಗಿತಗೊಳಿಸಿದೆ. ಇಲಾಖೆಯ ಮಾಹಿತಿಯ ಪ್ರಕಾರ, ಆದಾಯ ತೆರಿಗೆ ಮತ್ತು ಜಿಎಸ್‌ಟಿ ಪಾವತಿಸುವ 1.94 ಲಕ್ಷ ಮಂದಿಯನ್ನು ಯೋಜನೆಯಿಂದ ಹೊರಗಿಡಲಾಗಿದೆ. ಜೊತೆಗೆ, ಮೃತಪಟ್ಟ 1.95 ಲಕ್ಷ ಫಲಾನುಭವಿಗಳ ಹೆಸರಿನಲ್ಲಿದ್ದ ಖಾತೆಗಳಿಗೂ ಹಣ ಜಮೆಯಾಗುತ್ತಿರುವುದು ಪತ್ತೆಯಾಗಿದ್ದು, ಅಂತಹ ಖಾತೆಗಳಿಗೆ ಸಹ ಹಣ ವರ್ಗಾವಣೆ ಬಂದ್ ಮಾಡಲಾಗಿದೆ.

ಇಲಾಖೆ ನೀಡಿರುವ ಮಾಹಿತಿ ಪ್ರಕಾರ ಅನರ್ಹ ಫಲಾನುಭವಿಗಳ ಪೈಕಿ ಬೆಂಗಳೂರು ನಗರ ಜಿಲ್ಲೆ ಮೊದಲ ಸ್ಥಾನದಲ್ಲಿದ್ದು, 47,871 ಗೃಹಲಕ್ಷ್ಮಿಯರನ್ನ ಕೈಬಿಡಲಾಗಿದೆ. ತದನಂತರ ಬೆಳಗಾವಿ, ದಕ್ಷಿಣ ಕನ್ನಡ, ಮೈಸೂರು ಹಾಗೂ ತುಮಕೂರು ಜಿಲ್ಲೆ ಅನರ್ಹರ ಪರಿಷ್ಕರಣೆಯಲ್ಲಿ ಅಗ್ರ 5ರಲ್ಲಿ ಸ್ಥಾನ ಪಡೆದಿವೆ.

ಮಾರ್ಚ್ ತಿಂಗಳಲ್ಲೇ ಒಟ್ಟು 3.89 ಲಕ್ಷ ಅನರ್ಹ ಫಲಾನುಭವಿಗಳನ್ನು ಗುರುತಿಸಿರುವ ಇಲಾಖೆ, ವಿವಿಧ ಸರ್ಕಾರಿ ದತ್ತಾಂಶಗಳನ್ನು ಪರಸ್ಪರ ಹೊಂದಾಣಿಕೆ ಮಾಡಿ ಈ ಪರಿಷ್ಕರಣೆ ಕೈಗೊಂಡಿದೆ.

# ‘ಜೈವಿಕ ಗೊಬ್ಬರ ಬಳಕೆ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಿ’

ಕೋಲಾರ

ಜಿಲ್ಲೆಯಲ್ಲಿ ರಸಗೊಬ್ಬರ ವಿತರಣೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಎಚ್ಚರವಹಿಸಬೇಕು ಮತ್ತು ರೈತರಿಗೆ ನ್ಯಾನೋ ಯೂರಿಯಾ ಹಾಗೂ ಸಾವಯವ ಗೊಬ್ಬರ ಬಳಕೆಯ ಬಗ್ಗೆ ಸಾರ್ವಜನಿಕರು ಕೃಷಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ಕೃಷಿ ಮತ್ತು ಸಂಬಂಧಿತ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಇಂದು ಜಿಲ್ಲಾಧಿಕಾರಿಗಳ ಕೇಸ್ವಾನ್ ಸಭಾಂಗಣದಲ್ಲಿ ರಸಗೊಬ್ಬರ ದಾಸ್ತಾನು ಮತ್ತು ವಿತರಣೆ ಕುರಿತು ನಡೆದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ ಯಾವುದೇ ನಿರ್ದಿಷ್ಟ ಕ್ರಿಯಾಯೋಜನೆ ಇಲ್ಲದೆ ಹಾಜರಾಗಿದ್ದ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡ ಜಿಲ್ಲಾಧಿಕಾರಿಗಳು, ಕಚೇರಿಯಿಂದ ಹೊರಬಂದು ರೈತರೊಂದಿಗೆ ನಿರಂತರ ಸಂಪರ್ಕ ಸಾಧಿಸುವಂತೆ ತಾಕೀತು ಮಾಡಿದರು.

ರೈತರಿಗೆ ನ್ಯಾನೋ ಯೂರಿಯಾದ ಲಾಭಗಳ ಬಗ್ಗೆ ತಿಳಿಹೇಳಬೇಕು. ಇದರ ಬಗ್ಗೆ ಕರಪತ್ರಗಳನ್ನು ಮುದ್ರಿಸಿ ವಿತರಿಸಬೇಕು ಹಾಗೂ ತಾಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದಲ್ಲಿ ರೈತ ಮುಖಂಡರನ್ನು ಸೇರಿಸಿ ಸಭೆಗಳನ್ನು ನಡೆಸಬೇಕು ಎಂದು ಡಿಸಿ ಸೂಚಿಸಿದರು.

ಜುಲೈ ತಿಂಗಳಿಗೆ ಜಿಲ್ಲೆಯಲ್ಲಿ ಅಂದಾಜು 3,702 ಮೆಟ್ರಿಕ್ ಟನ್ ಯೂರಿಯಾ ಬೇಡಿಕೆಯಿದ್ದು, ಪ್ರಸ್ತುತ 3,042 ಮೆಟ್ರಿಕ್ ಟನ್ ದಾಸ್ತಾನು ಲಭ್ಯವಿದೆ. ಕೊರತೆಯಿರುವ ಸುಮಾರು 500 ಮೆಟ್ರಿಕ್ ಟನ್ ರಸಗೊಬ್ಬರವನ್ನು ಬಫರ್ ಸ್ಟಾಕ್‌ನಿಂದ ಅಥವಾ ಪರ್ಯಾಯ ಮಾರ್ಗಗಳ ಮೂಲಕ ಒದಗಿಸಲು ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಅವರು ಆದೇಶಿಸಿದರು.

ನಗರಸಭೆ ಮತ್ತು ಪುರಸಭೆಗಳ ಬಳಿ ಉತ್ಪಾದನೆಯಾಗಿರುವ ಸುಮಾರು 100 ರಿಂದ 200 ಟನ್ ಸಾವಯವ (ಕಾಂಪೋಸ್ಟ್) ಗೊಬ್ಬರ ಬಳಕೆಯಾಗದೆ ಉಳಿದಿದೆ. ರೈತರಿಗೆ ಅನುಕೂಲವಾಗುವಂತೆ ಪ್ರತಿ ಕೆ.ಜಿ.ಗೆ 5 ರೂ. ಬದಲಾಗಿ 2.50 ರೂ.ಗಳ ರಿಯಾಯಿತಿ ದರದಲ್ಲಿ ವಿತರಿಸಿ, ಸಾವಯವ ಕೃಷಿಗೆ ಪ್ರೋತ್ಸಾಹ ನೀಡುವಂತೆ ನಗರಸಭೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಂಬರುವ ದಿನಗಳಲ್ಲಿ ಯಾವುದೇ ರಸಗೊಬ್ಬರ ಸಮಸ್ಯೆ ಎದುರಾಗದಂತೆ ಎದುರಿಸಲು ಮುಂದಿನ ಎರಡು ದಿನಗಳಲ್ಲಿ ಪೂರ್ಣ ಪ್ರಮಾಣದ ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಗಡುವು ನೀಡಿದರು.

ಕೇವಲ ರಾಗಿ ಬೆಳೆಗೆ ಮಾತ್ರವಲ್ಲದೆ, ತೋಟಗಾರಿಕೆ ಬೆಳೆಗಳು, ರೇಷ್ಮೆ ಹಾಗೂ ತರಕಾರಿ ಬೆಳೆಗಳಿಗೂ ಯಾವ ಪ್ರಮಾಣದಲ್ಲಿ ರಸಗೊಬ್ಬರ ಅಗತ್ಯವಿದೆ ಎಂಬುದರ ನಿಖರ ಮಾಹಿತಿಯನ್ನು ಸಹ ಕಲೆಹಾಕಲು ಸಭೆಯಲ್ಲಿ ಸೂಚಿಸಲಾಯಿತು.

ಸಭೆಯಲ್ಲಿ ಕೃಷಿ ಉಪನಿರ್ದೇಶಕಿ ಮಂಜುಳ, ತೋಟಗಾರಿಕೆ ಉಪನಿರ್ದೇಶಕ ಕುಮಾರಸ್ವಾಮಿ, ಎಲ್ಲಾ ತಾಲ್ಲೂಕಿನ ಸಹಾಯಕ ಕೃಷಿ ಅಧಿಕಾರಿಗಳು, ಎಲ್ಲಾ ತಾಲ್ಲೂಕಿನ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕರ್ನಾಟಕದಲ್ಲಿ ‘ಕರ್ತವ್ಯ’ ಕ್ರಾಂತಿ: ಸ್ವದೇಶಿ ಎಐ ತಂತ್ರಜ್ಞಾನದ ಹೊಸ ಹೆಜ್ಜೆ

**ಮೊಬೈಲ್ ಆಪ್ ಮತ್ತು ರಜೆ ನಿರ್ವಹಣೆ -ಆಂಡ್ರಾಯ್ಡ್ ಮತ್ತು ಐಒಎಸ್ ಆಪ್‌ಗಳ ಮೂಲಕ ಹಾಜರಾತಿ, ರಜೆ ಮತ್ತು ಅಧಿಕೃತ ಹೊರಗಿನ ಕೆಲಸದ ವಿವರಗಳನ್ನು ದಾಖಲಿಸುವ ಸೌಲಭ್ಯವಿದೆ. ಇಲಾಖೆಗಳಲ್ಲಿ ದಾಖಲೆ ವೇಗದ ಅನುಷ್ಠಾನ ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಈ ತಂತ್ರಜ್ಞಾನವು ಇಲಾಖೆಗಳಲ್ಲಿ ಅತ್ಯಂತ ವೇಗವಾಗಿ ಅನುಷ್ಠಾನಗೊಳ್ಳುತ್ತಿದೆ. ಕಳೆದ ವಾರ ಅಂದಾಜು 2,46,000 ರಷ್ಟಿದ್ದ ಒಟ್ಟು ನೋಂದಾಯಿತ ಉದ್ಯೋಗಿಗಳ ಸಂಖ್ಯೆ ಪ್ರಸ್ತುತ ವಾರದಲ್ಲಿ 3,01,034ಕ್ಕೆ ಏರಿಕೆಯಾಗಿದೆ.**

ಕೋಲಾರ

ರಾಜ್ಯ ಸಾರ್ವಜನಿಕ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಕರ್ನಾಟಕ ಸರ್ಕಾರವು ‘ಕರ್ತವ್ಯ’ ಎಂಬ ನೂತನ ಮುಂದುವರಿದ ಹಾಜರಾತಿ ನಿರ್ವಹಣಾ ತಂತ್ರಜ್ಞಾನವನ್ನು ಜಾರಿಗೆ ತಂದಿದೆ.

ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಇಲಾಖಾ ಕಾರ್ಯದರ್ಶಿಗಳೊಂದಿಗೆ ನಡೆಸಿದ ಮೊದಲ ಸಭೆಯಲ್ಲೇ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕಚೇರಿ ವೇಳೆಯಲ್ಲಿ ಕಡ್ಡಾಯವಾಗಿ 100% ಹಾಜರಿರಬೇಕು ಮತ್ತು ಸಾರ್ವಜನಿಕರ ಕುಂದುಕೊರತೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಖಡಕ್ ಸೂಚನೆ ನೀಡಿದ್ದರು.

ಈ ಹಿಂದೆ ಜಾರಿಯಲ್ಲಿದ್ದ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಉದ್ಯೋಗಿಗಳು ಕೇವಲ ಡಿಜಿಟಲ್ ಸಹಿ ಮಾಡಿ ಕಚೇರಿಯಿಂದ ಗೈರಾಗುವ ಸಾಧ್ಯತೆಗಳಿದ್ದವು. ಈ ದೋಷವನ್ನು ನಿವಾರಿಸಲು, ಉದ್ಯೋಗಿಗಳ ಭೌತಿಕ ಉಪಸ್ಥಿತಿ ಮತ್ತು ಕಚೇರಿಯ ಭೌಗೋಳಿಕ ಸ್ಥಳವನ್ನುನಿಖರವಾಗಿ ಪತ್ತೆಹಚ್ಚುವ ಈ ಹೊಸ ವ್ಯವಸ್ಥೆಯನ್ನು ರೂಪಿಸಲಾಗಿದೆ.

ಯಾವುದೇ ಬಾಹ್ಯ ಖಾಸಗಿ ತಂತ್ರಜ್ಞಾನ ಸಂಸ್ಥೆಗಳ ನೆರವಿಲ್ಲದೆ, ಸಂಪೂರ್ಣವಾಗಿ ಸರ್ಕಾರದ ಪರಿಸರ ವ್ಯವಸ್ಥೆಯಲ್ಲೇ “ಕರ್ತವ್ಯ” ಸಾಫ್ಟ್‌ವೇರ್ ಅನ್ನು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ) ಉಸ್ತುವಾರಿಯಲ್ಲಿ, ಸೆಂಟರ್ ಫಾರ್ ಇ–ಗವರ್ನೆನ್ಸ್ ಮತ್ತು ಕರ್ನಾಟಕ ಎಐ ಸೆಲ್ ಜಂಟಿಯಾಗಿ ಇದನ್ನು ಸಿದ್ಧಪಡಿಸಿವೆ. ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ವೆಂಡರ್ ವೆಚ್ಚ ಉಳಿತಾಯವಾಗಿದ್ದು, ದತ್ತಾಂಶ ಸುರಕ್ಷತೆ ಮತ್ತು ಸ್ವಾಯತ್ತತೆ ಹೆಚ್ಚಾಗಿದೆ. ಕರ್ನಾಟಕದ ಈ ಯಶಸ್ವಿ ಮಾದರಿಯನ್ನು ದೇಶದ ಇತರೆ ರಾಜ್ಯಗಳೂ ಅಳವಡಿಸಿಕೊಳ್ಳಬಹುದಾಗಿದೆ. ಕೃತಕ ಬುದ್ಧಿಮತ್ತೆ ಆಧಾರಿತ ಮುಖ ಗುರುತಿಸುವಿಕೆ – ವಂಚನೆಯ ಹಾಜರಾತಿಯನ್ನು ತಡೆಯಲು ಲೈವ್‌ನೆಸ್ ಡಿಟೆಕ್ಷನ್ ತಂತ್ರಜ್ಞಾನದೊಂದಿಗೆ ಎಐ ಫೇಶಿಯಲ್ ರೆಕಗ್ನಿಷನ್ ಬಳಸಲಾಗಿದೆ.

ಜಿಯೋಫೆನ್ಸಿಂಗ್–ಜಿಐಎಸ್ ತಂತ್ರಜ್ಞಾನದ ಮೂಲಕ ಉದ್ಯೋಗಿ ತನ್ನ ಕಚೇರಿಯ ನಿಗದಿತ ಪರಿಧಿಯೊಳಗೆ ಇದ್ದಾಗ ಮಾತ್ರ ಹಾಜರಾತಿ ದಾಖಲಿಸಲು ಸಾಧ್ಯವಾಗುತ್ತದೆ.

ಸಂಯೋಜಿತ ಡೇಟಾಬೇಸ್–ಇದನ್ನು ಆಧಾರ್ ಇ–ಕೈವೈಸಿ ಮತ್ತು ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ ಯೊಂದಿಗೆ ಸಂಯೋಜಿಸಲಾಗಿದೆ.

ಮೊಬೈಲ್ ಆಪ್ ಮತ್ತು ರಜೆ ನಿರ್ವಹಣೆ –ಆಂಡ್ರಾಯ್ಡ್ ಮತ್ತು ಐಒಎಸ್ ಆಪ್‌ಗಳ ಮೂಲಕ ಹಾಜರಾತಿ, ರಜೆ ಮತ್ತು ಅಧಿಕೃತ ಹೊರಗಿನ ಕೆಲಸದ ವಿವರಗಳನ್ನು ದಾಖಲಿಸುವ ಸೌಲಭ್ಯವಿದೆ. ಇಲಾಖೆಗಳಲ್ಲಿ ದಾಖಲೆ ವೇಗದ ಅನುಷ್ಠಾನ ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಈ ತಂತ್ರಜ್ಞಾನವು ಇಲಾಖೆಗಳಲ್ಲಿ ಅತ್ಯಂತ ವೇಗವಾಗಿ ಅನುಷ್ಠಾನಗೊಳ್ಳುತ್ತಿದೆ.

ಕಳೆದ ವಾರ ಅಂದಾಜು 2,46,000 ರಷ್ಟಿದ್ದ ಒಟ್ಟು ನೋಂದಾಯಿತ ಉದ್ಯೋಗಿಗಳ ಸಂಖ್ಯೆ ಪ್ರಸ್ತುತ ವಾರದಲ್ಲಿ 3,01,034 ಕ್ಕೆ ಏರಿಕೆಯಾಗಿದೆ. ಇದು ಕೇವಲ ಒಂದೇ ವಾರದಲ್ಲಿ ಶೇಕಡಾ 25% ಕ್ಕಿಂತಲೂ ಹೆಚ್ಚು (55,000ಕ್ಕೂ ಅಧಿಕ ಹೊಸ ಸೇರ್ಪಡೆ) ಬೆಳವಣಿಗೆಯಾಗಿದೆ. ಇದೇ ಅವಧಿಯಲ್ಲಿ, ಆಪ್ ಮೂಲಕ ಪ್ರತಿದಿನ ದಾಖಲಾಗುವ ದೈನಂದಿನ ಹಾಜರಾತಿ ಸಂಖ್ಯೆಯು ಸಹ 1,85,308 ರಿಂದ 2,32,612 ಕ್ಕೆ ಜಿಗಿದಿದ್ದು, ಸಕ್ರಿಯ ಬಳಕೆಯಲ್ಲಿ ಶೇಕಡಾ 25% ರಷ್ಟು ಭಾರಿ ಏರಿಕೆ ದಾಖಲಾಗಿದೆ.

ಪ್ರಸ್ತುತ 42 ಇಲಾಖೆಗಳ 4,78,522 ನೌಕರರನ್ನು ಈ ವ್ಯವಸ್ಥೆಗೆ ಒಳಪಡಿಸಲಾಗಿದ್ದು, ಈ ಪೈಕಿ 3.01 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳು ಈಗಾಗಲೇ ನೋಂದಾಯಿಸಿಕೊಂಡಿದ್ದಾರೆ. ಕೇವಲ ಒಂದೇ ವಾರದಲ್ಲಿ ನೋಂದಣಿ ಪ್ರಕ್ರಿಯೆಯಲ್ಲಿ ಶೇಕಡಾ 25 ರಷ್ಟು ಅಭೂತಪೂರ್ವ ಪ್ರಗತಿ ಕಂಡುಬಂದಿದೆ.

ಶಾಲಾ ಶಿಕ್ಷಣ ಇಲಾಖೆ: ಒಟ್ಟು 1,76,055 ಉದ್ಯೋಗಿಗಳಲ್ಲಿ ಈಗಾಗಲೇ 1,68,252 ನೌಕರರು ನೋಂದಾಯಿಸಿಕೊಂಡಿದ್ದು, 1,41,800ಕ್ಕೂ ಹೆಚ್ಚು ದೈನಂದಿನ ಚೆಕ್–ಇನ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ: 66,969 ನೋಂದಣಿ ಹಾಗೂ 54,400ಕ್ಕೂ ಹೆಚ್ಚು ದೈನಂದಿನ ಹಾಜರಾತಿಯೊಂದಿಗೆ ಎರಡನೇ ಸ್ಥಾನದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳಲ್ಲಿ ಪ್ರಾಯೋಗಿಕವಾಗಿ ಯಶಸ್ವಿಯಾದ ನಂತರ, ಶಾಲಾ ಶಿಕ್ಷಣ ಇಲಾಖೆಯ ಸಿಬ್ಬಂದಿ ಇದನ್ನು ಸಕ್ರಿಯವಾಗಿ ಬಳಸುತ್ತಿದ್ದಾರೆ. ಇನ್ನುಳಿದ ಹಲವು ಇಲಾಖೆಗಳು ಈಗಾಗಲೇ ಶೇಕಡಾ 90 ಕ್ಕಿಂತ ಹೆಚ್ಚು ನೋಂದಣಿ ಮೈಲಿಗಲ್ಲನ್ನು ದಾಟಿವೆ.

ಇತರ ಇಲಾಖೆಗಳು: ಪದವಿ ಪೂರ್ವ ಮಂಡಳಿ, ಆಯುಷ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮತ್ತು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಗಳು ಈಗಾಗಲೇ 90% ಕ್ಕಿಂತ ಹೆಚ್ಚು ನೋಂದಣಿ ಗುರಿಯನ್ನು ಯಶಸ್ವಿಯಾಗಿ ತಲುಪಿವೆ.

“ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಮಟ್ಟದಲ್ಲಿ ಡಿಸಿ/ಸಿಇಒಗಳು ದಿನನಿತ್ಯ ಈ ವ್ಯವಸ್ಥೆಯ ಡ್ಯಾಶ್‌ಬೋರ್ಡ್ ಅನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಕಚೇರಿ ಅವಧಿಯಲ್ಲಿ ಅಧಿಕಾರಿಗಳು ಸಾರ್ವಜನಿಕರಿಗೆ ಸಿಗದಿರುವ ಬಗ್ಗೆ ನಾಗರಿಕರು ನೀಡುವ ಪ್ರತಿಕ್ರಿಯೆ ಈ ಸುಶಾಸನದ ಗುರಿಯನ್ನು ತಲುಪಲು ಪ್ರಮುಖ ಪಾತ್ರ ವಹಿಸಲಿದೆ.”

ಸಾರ್ವಜನಿಕ ಸೇವೆಗೆ ಹೊಸ ವೇಗ ಮೊಬೈಲ್ ಮೂಲಕವೇ ಹಾಜರಾತಿ ದಾಖಲಿಸುವ ಸೌಲಭ್ಯ ಇರುವುದರಿಂದ ಕಚೇರಿಗಳ ಮುಂಭಾಗದಲ್ಲಿ ಬಯೋಮೆಟ್ರಿಕ್‌ಗಾಗಿ ಸಾಲಿನಲ್ಲಿ ನಿಲ್ಲುವುದು ತಪ್ಪಿದೆ ಎಂದು ಸರ್ಕಾರಿ ನೌಕರರು ಸಂತಸ ವ್ಯಕ್ತಪಡಿಸಿದ್ದಾರೆ.

“ಕರ್ತವ್ಯ ಆಪ್ ಪ್ರತಿಯೊಬ್ಬ ಸರ್ಕಾರಿ ನೌಕರನೂ ತನ್ನ ಜವಾಬ್ದಾರಿಯನ್ನು ಹೆಮ್ಮೆ, ಶಿಸ್ತು ಮತ್ತು ನಿರ್ದಿಷ್ಟ ಉದ್ದೇಶದೊಂದಿಗೆ ನಿರ್ವಹಿಸಲು ಶಕ್ತಿ ತುಂಬುತ್ತಿದೆ”.

ಅಂತಿಮವಾಗಿ, ಕಚೇರಿಗಳಲ್ಲಿ ಅಧಿಕಾರಿಗಳ ಭೌತಿಕ ಲಭ್ಯತೆ ಮತ್ತು ವಿಶ್ವಾಸಾರ್ಹತೆಯನ್ನು ಖಾತರಿಪಡಿಸುವ ಮೂಲಕ ಸಾರ್ವಜನಿಕರಿಗೆ ಸಿಗುವ ಸೇವೆಗಳು ಇನ್ನು ಮುಂದೆ ಹೆಚ್ಚು ಸುಲಭ ಹಾಗೂ ತಡೆರಹಿತವಾಗಲಿವೆ. ಈ ಮೂಲಕ ಕರ್ನಾಟಕವು ಡಿಜಿಟಲ್ ಆಡಳಿತ ಮತ್ತು ನಾಗರಿಕ ಕೇಂದ್ರಿತ ಸುಧಾರಣೆಯಲ್ಲಿ ದೇಶದಲ್ಲೇ ಮುಂಚೂಣಿ ರಾಜ್ಯವಾಗಿ ಹೊರಹೊಮ್ಮಿದೆ ಎಂದು ಮುಖ್ಯ ಕಾರ್ಯ ದರ್ಶಿ ಡಾ.ಶಾಲಿನಿರಜನೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ತಿಪಟೂರು ತಾಲೂಕಿನ ಕಸಬಾ ಹೋಬಳಿ ಬೆನ್ನಾಯಕನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಬೆಂಗಳೂರಿನ ಕೆ.ಹರಿಬಾಬು ಮತ್ತು ಎಚ್.ಲತಾ ದಂಪತಿಗಳು ಉಚಿತವಾಗಿ ಟ್ರ್ಯಾಕ್ ಸೂಟ್ ಮತ್ತು ಶೂಗಳನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ವಿ.ಎಸ್.ಎಸ್. ಎನ್.ನಿರ್ದೇಶಕ ಮಂಜುನಾಥ್ (ಬೆಂಕಿ), ಗ್ರಾಪಂ ಮಾಜಿ ಅಧ್ಯಕ್ಷರಾದ ಬಿ.ಬಿ.ಬಸವರಾಜು ಮತ್ತು ರಂಗಸ್ವಾಮಿ,ದೇವಾಲಯ ಧರ್ಮದರ್ಶಿ ಪ್ರಭುಸ್ವಾಮಿ, ಖಜಾಂಚಿ ಯತೀಶ್, ಅಂಗನವಾಡಿ ಕಾರ್ಯಕರ್ತೆ ಜಿ.ಆರ್.ಸುಮಿತ್ರ, ಸಹಾಯಕಿ ರೂಪ,ಗ್ರಾಮಸ್ಥರಾದ ಶಿವಸ್ವಾಮಿ, ರಂಗಸ್ವಾಮಿ ಮತ್ತು ಮನು ಸೇರಿದಂತೆ ಪೋಷಕರು, ಮುಖಂಡರುಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

## ‘ಸ್ವಾತಂತ್ರ್ಯದ ಓಟ’ ನಾಟಕ ಪ್ರದರ್ಶನ

ಕೋಲಾರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೋಲಾರ ಹಾಗೂ ನಿಸರ್ಗ ಸಂಗೀತ ಮತ್ತು ಸಾಂಸ್ಕೃತಿಕ ಕಲಾ ಸಂಸ್ಥೆ (ರಿ), ಮೂರಾಂಡಹಳ್ಳಿ, ಅರಹಳ್ಳಿ ಅಂಚೆ, ಕೋಲಾರ ಇವರ ಸಹಯೋಗದಲ್ಲಿ ರಂಗಾಯಣ, ಶಿವಮೊಗ್ಗದ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಸ್ತುತಿಯ ಪ್ರಶಸ್ತಿ ಪುರಸ್ಕೃತ ಶ್ರೀ ಬೊಳುವಾರ ಮಹಮ್ಮದ್ ಕುಂಞ ಅವರ ಕಾದಂಬರಿಯ ರಂಗರೂಪ, ಶ್ರೀ ನಟರಾಜ್ ಹೊನ್ನವಳ್ಳಿ ಅವರ ನಿರ್ದೇಶನದ ಶ್ರೀ ರಾಘವ ಕಮ್ಮಾರ ಇವರ ಸಂಗೀತದ ‘ಸ್ವಾತಂತ್ರ್ಯದ ಓಟ’ ನಾಟಕವು ಜೂನ್ 16 ರಂದು ಮಂಗಳವಾರ ಸಂಜೆ 6 ಗಂಟೆಗೆ ಕೋಲಾರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಪ್ರದರ್ಶನಗೊಳ್ಳಲಿದೆ. ಈ ನಾಟಕ ಪ್ರದರ್ಶನಕ್ಕೆ ಪ್ರವೇಶ ಉಚಿತವಾಗಿರುತ್ತದೆ.

ಈ ಕಾರ್ಯಕ್ರಮಕ್ಕೆ ಚಾಲನೆಯನ್ನು ಕರ್ನಾಟಕ ಜನಪದ ಅಕಾಡೆಮಿಯ ಮಾಜಿ ಅಧ್ಯಕ್ಷರು ಹಾಗೂ ಜನಪದ ಗಾಯಕ ಡಾ.ಪಿಚ್ಚಳ್ಳಿ ಶ್ರೀನಿವಾಸ ರವರು ನೀಡಲಿದ್ದಾರೆ. ಕರ್ನಾಟಕ ನಾಟಕ ಅಕಾಡೆಮಿಯ ಸಂಚಾಲಕ ವಿಚಿಕ್ಕರೆಡ್ಡಪ್ಪ, ಸಮುದಾಯ ಅಧ್ಯಕ್ಷ ವಿ.ಎನ್.ಸುಬ್ರಮಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಎಸ್.ವಿಜಯಲಕ್ಷ್ಮಿ, ಆದಿಮ ಸಾಂಸ್ಕೃತಿಕ ಕೇಂದ್ರದ ಹಾ.ಮಾ ರಾಮಚಂದ್ರ ಹಾಗೂ ಶಿವಮೊಗ್ಗ ರಂಗಾಯಣ ನಿರ್ದೇಶಕ ಪ್ರಸನ್ನ ಡಿ ಸಾಗರ ಇವರ ಉಪಸ್ಥಿತಿಯಲ್ಲಿದ್ದು, ರಂಗಾಸಕ್ತರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನಾಟಕ ಪ್ರದರ್ಶನವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಮಕಾತಿಗಾಗಿ ಅರ್ಜಿ ಆಹ್ವಾನ

ಕೋಲಾರ

ಕೋಲಾರ ಜಿಲ್ಲೆ ಕೃಷಿ ಇಲಾಖೆಯ ಕೃಷಿ ತಂತ್ರಜ್ಞಾನ ಸಂಸ್ಥೆ(ಆತ್ಮ) ಯೋಜನೆಯಡಿ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು/ ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಹುದ್ದೆಗಳನ್ನು ಒಪ್ಪಂದದ ಆಧಾರದ ಮೇಲೆ 2026–27ನೇ ಸಾಲಿನ ಸೀಮಿತ ಅವಧಿಗೆ ತಾಲ್ಲೂಕು ಮತ್ತು ರೈತ ಸಂಪರ್ಕ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ನೇಮಕಾತಿಗಾಗಿ ತಾಲ್ಲೂಕು ತಾಂತ್ರಕ ವ್ಯವಸ್ಥಾಪಕರ ಹುದ್ದೆಗೆ ಕೃಷಿ/ಕೃಷಿಗೆ ಸಂಬಂಧಿತ ವಿಷಯಗಳಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು.

ಕನಿಷ್ಠ ಎರಡು ವರ್ಷ ಕೃಷಿ ಕ್ಷೇತ್ರಗಳಲ್ಲಿ ಅನುಭವ/ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಹುದ್ದೆಯಲ್ಲಿ ಕನಿಷ್ಠ 3 ವರ್ಷಗಳು ಅಥವಾ ಮೇಲ್ಪಟ್ಟು ಅನುಭವ ಹೊಂದಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು. ಸಹಾಯಕ ತಾಂತ್ರಕ ವ್ಯವಸ್ಥಾಪಕರ ಹುದ್ದೆಗೆ ಕೃಷಿ/ಕೃಷಿಗೆ ಸಂಬಂಧಿತ ವಿಷಯಗಳಲ್ಲಿ ಪದವಿ/ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು.

ಕನಿಷ್ಠ ಒಂದು ವರ್ಷ ಕೃಷಿ ಕ್ಷೇತ್ರಗಳಲ್ಲಿ ಅನುಭವ/ ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಹುದ್ದೆಯಲ್ಲಿ ಕನಿಷ್ಠ 1 ವರ್ಷಗಳ ಅಥವಾ ಮೇಲ್ಪಟ್ಟು ಅನುಭವ ಹೊಂದಿರುವವರಿಗೆ ಮೊದಲ ಆಧ್ಯತೆ ನೀಡಲಾಗುವುದು. ಈ ಹುದ್ದೆಗಳಿಗೆ ಕಂಪ್ಯೂಟರ್ ಜ್ಞಾನದಲ್ಲಿ ಪರಿಣಿತಿ ಹೊಂದಿರಬೇಕು. ಸ್ಥಳೀಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ಲಕ್ಷ್ಮೀದೇವಿ ಎಸ್.ವಿ–7676467559 ಮತ್ತು ಪುರುಷೋತ್ತಮ ಈ–9535006556ಗಳನ್ನು ಸಂಪರ್ಕಿಸಬಹುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬಲು ಗ್ಯಾರಂಟಿ ಯೋಜನೆ ನಿಲ್ಲಿಸುವ ಪ್ರಶ್ನೆಯೇ ಇಲ್ಲ’

ಬೆಂಗಳೂರು

“ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬಲು ನಮ್ಮ ಸರ್ಕಾರ ಪ್ರೀತಿಯಿಂದ ನೀಡಿರುವ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ” ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು.

ನಗರದ ವೈದೇಹಿ ಆಸ್ಪತ್ರೆ ಬಳಿ ಸೋಮವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುತ್ತಿದೆ ಎಂಬ ವಿರೋಧ ಪಕ್ಷಗಳ ಆರೋಪಕ್ಕೆ ತೀವ್ರ ಪ್ರತಿಕ್ರಿಯೆ ನೀಡಿದರು.

“ವಿರೋಧ ಪಕ್ಷಗಳಿರುವುದೇ ಟೀಕೆ ಮಾಡಲು. ನಾವು ಏನೇ ಒಳ್ಳೆಯ ಕೆಲಸ ಮಾಡಲು ಮುಂದಾದರೂ ಅದಕ್ಕೆ ಅಡ್ಡಗಾಲು ಹಾಕುವುದೇ ಅವರ ಕೆಲಸ. ಅವರ ಕೈಯಲ್ಲಿ ಆಗದ ಕೆಲಸವನ್ನು ನಾವು ಮಾಡಿ ತೋರಿಸುತ್ತಿದ್ದೇವೆ. ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು ಎಂಬುದು ಸರ್ಕಾರದ ಉದ್ದೇಶ” ಎಂದು ಹೇಳಿದರು.

“ಆರಂಭದಲ್ಲಿ ಕೆಲವರು ಬೇರೆಯವರ ದೂರವಾಣಿ ಸಂಖ್ಯೆ ಹಾಗೂ ಮಾಹಿತಿ ನೀಡಿ ಯೋಜನೆಯ ಸೌಲಭ್ಯ ಪಡೆದಿರುವುದು ಗಮನಕ್ಕೆ ಬಂದಿದೆ. ಕೆಲವೆಡೆ ಹಣ ಬೇರೆ ಖಾತೆಗಳಿಗೆ ಹೋಗುತ್ತಿರುವ ಮಾಹಿತಿ ಸಿಕ್ಕಿದೆ. ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ತಲುಪುವಂತೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ” ಎಂದರು.

“ಈ ಯೋಜನೆಗಳನ್ನು ಸರ್ಕಾರ ಕರ್ನಾಟಕದ ಜನರಿಗಾಗಿ ಜಾರಿಗೊಳಿಸಿದೆ. ಬೇರೆ ರಾಜ್ಯದವರಿಗೆ ಸೌಲಭ್ಯ ನೀಡುವುದಿಲ್ಲ. ಉಚಿತ ವಿದ್ಯುತ್ ಸೇರಿದಂತೆ ಎಲ್ಲಾ ಸೌಲಭ್ಯಗಳು ರಾಜ್ಯದ ಮತದಾರರಿಗೆ ತಲುಪಬೇಕು. ಹೀಗಾಗಿ ಫಲಾನುಭವಿಗಳಿಗೆ ಗುರುತಿನ ಚೀಟಿ ನೀಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಲಾಗಿದೆ. ಆ ಪ್ರಕ್ರಿಯೆ ನಡೆಯುತ್ತಿದೆ” ಎಂದು ತಿಳಿಸಿದರು.



“ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಉದ್ದೇಶ ಸರ್ಕಾರಕ್ಕಿಲ್ಲ. ನಮ್ಮ ಗ್ಯಾರಂಟಿ ಮಾದರಿಯನ್ನು ಮಹಾರಾಷ್ಟ್ರ, ಮಧ್ಯಪ್ರದೇಶ, ಆಂಧ್ರಪ್ರದೇಶ ಸೇರಿದಂತೆ ಅನೇಕ ರಾಜ್ಯಗಳು ಅನುಸರಿಸಿವೆ” ಎಂದು ಹೇಳಿದರು.

“ಕೆಲವರು ಗೃಹಲಕ್ಷ್ಮಿ ಯೋಜನೆಯ ಹಣವನ್ನು ನಕಲಿ ಫೈನಾನ್ಸ್ ವ್ಯವಹಾರಗಳಿಗೆ ಬಳಸುತ್ತಿರುವ ಮಾಹಿತಿ ಬಂದಿದೆ. ಬೆಳಗಾವಿಯಲ್ಲಿ ನಡೆದ ಪ್ರಕರಣವನ್ನು ನೋಡಿದ್ದೇವೆ. ಗ್ರಾಮ ಪಂಚಾಯಿತಿ ಮಟ್ಟದಿಂದ ತಾಲ್ಲೂಕು ಪಂಚಾಯಿತಿ ಮಟ್ಟದವರೆಗೆ ಇಂತಹ ಅಕ್ರಮ ಯೋಜನೆಗಳಿಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ” ಎಂದು ಹೇಳಿದರು.

**“ಕೆಲವರು ಗೃಹಲಕ್ಷ್ಮಿ ಯೋಜನೆಯ ಹಣವನ್ನು ನಕಲಿ ಫೈನಾನ್ಸ್ ವ್ಯವಹಾರಗಳಿಗೆ ಬಳಸುತ್ತಿರುವ ಮಾಹಿತಿ ಬಂದಿದೆ. ಬೆಳಗಾವಿಯಲ್ಲಿ ನಡೆದ ಪ್ರಕರಣವನ್ನು ನೋಡಿದ್ದೇವೆ. ಗ್ರಾಮ ಪಂಚಾಯಿತಿ ಮಟ್ಟದಿಂದ ತಾಲ್ಲೂಕು ಪಂಚಾಯಿತಿ ಮಟ್ಟದವರೆಗೆ ಇಂತಹ ಅಕ್ರಮ ಯೋಜನೆಗಳಿಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ” ಎಂದು ಹೇಳಿದರು. “ಹೆಣ್ಣು ಕುಟುಂಬದ ಕಣ್ಣು. ಮಹಿಳೆಯರಿಗೆ ಆರ್ಥಿಕ ಶಕ್ತಿ ಸಿಗಬೇಕು, ಅವರ ಮನೆಗಳು ಬೆಳಗಬೇಕು ಎಂಬ ಉದ್ದೇಶದಿಂದಲೇ ಈ ಯೋಜನೆಗಳನ್ನು ಜಾರಿಗೊಳಿಸಲಾಗಿದೆ.**

“ಹೆಣ್ಣು ಕುಟುಂಬದ ಕಣ್ಣು. ಮಹಿಳೆಯರಿಗೆ ಆರ್ಥಿಕ ಶಕ್ತಿ ಸಿಗಬೇಕು, ಅವರ ಮನೆಗಳು ಬೆಳಗಬೇಕು ಎಂಬ ಉದ್ದೇಶದಿಂದಲೇ ಈ ಯೋಜನೆಗಳನ್ನು ಜಾರಿಗೊಳಿಸಲಾಗಿದೆ” ಎಂದು ತಿಳಿಸಿದರು.

ಬಿಡದಿ ಪಾದಯಾತ್ರೆ ವಿಚಾರವಾಗಿ ಪ್ರತಿಕ್ರಿಯಿಸಿದ ಸಿಎಂ, “ಬಿಡದಿಯ ಯೋಜನೆ ನನ್ನದು ಅಲ್ಲ. ಕುಮಾರಸ್ವಾಮಿ ಅವರ ಕಾಲದಲ್ಲೇ ಅಧಿಸೂಚನೆ ಹೊರಡಿಸಲಾಗಿತ್ತು. ಬಿಜೆಪಿ ಸರ್ಕಾರದ ಅವಧಿಯಲ್ಲಿ 1 ಸಾವಿರ ಎಕರೆ ಭೂಮಿಯನ್ನು ಕೆಐಎಡಿಬಿಗೆ ಸ್ವಾಧೀನಪಡಿಸಿಕೊಂಡಾಗ ಇವರು ಯಾಕೆ ಮೌನವಾಗಿದ್ದರು?” ಎಂದು ಪ್ರಶ್ನಿಸಿದರು.

“ಮಹಾರಾಷ್ಟ್ರದಲ್ಲಿ 90 ಸಾವಿರ ಎಕರೆ, ತೆಲಂಗಾಣದಲ್ಲಿ 40 ಸಾವಿರ ಎಕರೆ ಪ್ರದೇಶದಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡಲಾಗುತ್ತಿದೆ. ಇಲ್ಲಿ ರೈತರು ಸ್ವಯಂಪ್ರೇರಿತವಾಗಿ ಜಮೀನು ನೀಡಲು ಮುಂದೆ ಬರುತ್ತಿದ್ದಾರೆ. ಆದರೆ ಕೆಲವರು ರಾಜಕೀಯಕ್ಕಾಗಿ ವಿರೋಧಿಸುತ್ತಿದ್ದಾರೆ” ಎಂದು ಆರೋಪಿಸಿದರು.

ಶಾಸಕ ಇಕ್ಬಾಲ್ ಹುಸೇನ್ ಅವರ ಆರೋಗ್ಯದ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, “ಅವರಿಗೆ ಎದೆನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದೆ. ವೈದ್ಯರು ಪರಿಶೀಲನೆ ನಡೆಸಿದ್ದು, ಆರೋಗ್ಯ ಸ್ಥಿರವಾಗಿದೆ. ಯಾರೂ ಗಾಬರಿಯಾಗುವ ಅಗತ್ಯವಿಲ್ಲ” ಎಂದು ಹೇಳಿದರು.

“ಎಡಗೈ ಸೆಳೆತ ಕಾಣಿಸಿಕೊಂಡ ಕಾರಣ ಮುನ್ನೆಚ್ಚರಿಕೆಯಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ವೈದ್ಯರು ಅಗತ್ಯ ಚಿಕಿತ್ಸೆ ನೀಡುತ್ತಿದ್ದಾರೆ” ಎಂದು ಮಾಹಿತಿ ನೀಡಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy